ಸಂಪುಟ: ೦೭/ ಸಂಚಿಕೆ: ೨೧೩/ ಬುಧವಾರ ದಿನಾಂಕ : ೧೫-೧೦-೨೦೨೫/ ಪುಟ: ೬/ ಬೆಲೆ ೨-೦೦

ಸತ್ಯಕ್ಕೆ ಕಿರಣ ಸುಳ್ಳಿಗೆ ಕಿಡಿ

ಕಛೇರಿ ದೂರವಾಣಿ ಸಂಖ್ಯೆ 0831-3564491

# ಬೆಳಗಿನ ಸೂರ್ಯೋದಯ

ಕನ್ನಡ ಪ್ರಾದೇಶಿಕ ದಿನಪತ್ರಿಕೆ

ಬೆಳಗಾವಿ ▪ ಧಾರವಾಡ ▪ ಬಾಗಲಕೋಟ ▪ ವಿಜಯಪುರ ▪ ಗದಗ ▪ ಕೊಪ್ಪಳ ▪ ಹಾವೇರಿ ▪ ಕಾರವಾರ

ಸಂಪಾದಕರು : ಗುರುರಾಜ ಈರಪ್ಪಾ. ಕದಮ, Editor : GURURAJ IRAPPA. KADAM Cell : 9620099959

Volume : 07/ ISSUE : 213/WEDNESDAY Date : 15-10-2025/ RNI No. KARKAN/2019/77640/ Postal Reg No. PMG/KA/NK/BM/135/2025-27 / POST AT Vantamury Colony Post Office / email : belaginasuryodaya@gmail.com / Page : 6 / Rs. 2.00



## ಕಲಾವಿದ ರಾಜು ತಾಳಿಕೋಟೆಗೆ ಅಂತಿಮ ನಮನ

**ವಿಜಯಪುರ:** ಹೃದಯಾಘಾತದಿಂದ ನಿಧನರಾದ ಧಾರವಾಡ ರಂಗಾಯಣ ನಿರ್ದೇಶಕ, ಹಾಸ್ಯ ನಟ, ರಂಗಕರ್ಮಿ ರಾಜು ತಾಳಿಕೋಟೆ ಅವರ ಪಾರ್ಥಿವ ಶರೀರದ ಅಂತ್ಯಕ್ರಿಯೆ ಜಿಲ್ಲೆಯ ಸಿಂದಗಿ ತಾಲ್ಲೂಕಿನ ಚಿಕ್ಕಸಿಂದಗಿಯಲ್ಲಿ ನಡೆಯಿತು.

ಈ ನಿಮಿತ್ಯ ಸಿಂದಗಿ ಕನ್ನಡ ಸಾಹಿತ್ಯ ಗೆಳೆಯರ ಬಳಗ ಆಯೋಜನೆ ಮಾಡಿದ್ದ ನುಡಿ ನಮನ ಕಾರ್ಯಕ್ರಮದಲ್ಲಿ ಸಚಿವ ಶಿವಾನಂದ ಪಾಟೀಲ ಮಾತನಾಡಿ, ರಂಗಭೂಮಿಯ ಅಪ್ರತಿಮ ಕಲಾವಿದ ರಾಜು ತಾಳಿಕೋಟೆಯವರ ನಿಧನ ಸುದ್ದಿ ಕೇಳಿ ಸಿಡಿಲು ಬಡಿದಂತಾಗಿದೆ. ಯಾವುದೇ ಹಿನ್ನೆಲೆ ಇಲ್ಲದಿದರೂ ಮಠದಲ್ಲಿ ಇದ್ದು, ಸಮಾಜಮುಖಿಯಾಗಿ ಬೆಳೆದು ಬಂದವರು. ಪ್ರಸಿದ್ಧ ಹಾಸ್ಯ ಕಲಾವಿದನ ಅಗಲಿಕೆ ನೋವು ಮೂಡಿಸಿದೆ ಎಂದು ವಿಷಾದ ಮೂಡಿಸಿದೆ. ಅಗಲಿದ ಆತ್ಮಕ್ಕೆ ಶಾಂತಿ ಸಿಗಲಿ ಎಂದು ಸಂತಾಪ ಸೂಚಿಸಿದರು. ಅಂತ್ಯಕ್ರಿಯೆಯಲ್ಲಿ ನಾಡಿನ ವಿವಿಧ ಭಾಗದ ಕಲಾವಿದರು, ಕಲಾ ಅಭಿಮಾನಿಗಳು ಭಾಗವಹಿಸಿ ಅಂತಿಮ ದರ್ಶನ ಪಡೆದು ಅವರ ಆತ್ಮಕ್ಕೆ ಶಾಂತಿ ಕೋರಿದರು.

# ರಾಜ್ಯದ ಹಲವೆಡೆ ಏಕಕಾಲಕ್ಕೆ ಲೋಕಾಯುಕ್ತ ದಾಳಿ

**ಬೆಂಗಳೂರು:** ರಾಜಕೀಯ ಗದ್ದಲದ ನಡುವೆ ರಾಜ್ಯಾದ್ಯಂತ ಬೆಳ್ಳಂಬೆಳಿಗ್ಗೆ ಏಕಕಾಲದಲ್ಲಿ 12 ಭ್ರಷ್ಟ ಅಧಿಕಾರಿಗಳ ಮನೆಗಳ ಮೇಲೆ ಲೋಕಾಯುಕ್ತ ದಾಳಿ ನಡೆಸಿ, ಅಕ್ರಮವಾಗಿ ಗಳಿಸಿದ್ದ ಸಂಪತ್ತು ಬಯಲಿಗೆಳೆದಿದೆ. ಅಕ್ರಮ ಆಸ್ತಿಗಳಿಕೆ ಆರೋಪದ ಮೇಲೆ ಬಂದ ದೂರುಗಳನ್ನು ಆಧರಿಸಿ ಚಿತ್ರದುರ್ಗ, ದಾವಣಗೆರೆ, ಹಾಸನ, ಶಿವಮೊಗ್ಗ, ಹಾವೇರಿ, ಉಡುಪಿ, ಕಲಬುರ್ಗಿ,ಬೆಂಗಳೂರು ಸೇರಿ 40ಕ್ಕೂ ಹೆಚ್ಚು ಕಡೆ ಮಿಂಚಿನ ದಾಳಿ ನಡೆಸಲಾಗಿದೆ.

ಔರಾದ್ ತಾಲೂಕಿನ ಕೃಷಿ ಇಲಾಖೆಯ ಸಹಾಯಕ ನಿರ್ದೇಶಕರಾದ ದೂಳಪ್ಪ ಅವರ ಬೀದರ್ ನಗರದ ಗುರುನಾನಕ್ ಕಾಲೋನಿಯ ನಿವಾಸ ಸೇರಿದಂತೆ ಏಕಕಾಲಕ್ಕೆ ಲೋಕಾಯುಕ್ತ ಎಸ್‌ಪಿ ಸಿದ್ದರಾಜು ,ಡಿವೈಎಸ್ಪಿ ಹನುಮಂತ ರೆಡ್ಡಿ ನೇತೃತ್ವದಲ್ಲಿ ಜಿಲ್ಲೆಯಾದ್ಯಂತ ಒಟ್ಟು 4 ಕಡೆ ದಾಳಿ ಮಾಡಲಾಗಿದೆ.

ಭಾಲ್ಕಿಯ ಕಡ್ಯಾಳ ಗ್ರಾಮದ ನಿವಾಸ, ಔರಾದ್‌ನ ಸಹಾಯಕ ನಿರ್ದೇಶಕರ ಕಚೇರಿ ಮತ್ತು ಔರಾದ್‌ನ ಮುದೋಳ ಕಚೇರಿಗೆ ಲೋಕಾಯುಕ್ತ ಅಧಿಕಾರಿಗಳು ಬರುತ್ತಿದ್ದಂತೆ ಸಿಬ್ಬಂಧಿ ಅಲರ್ಟ್ ಆಗಿದ್ದಾರೆ. ಕಾವಲುಗಾರನಿಂದ ಬೀಗ ತೆಗಸಿ ಒಳಗೆ ತಪಾಸಣೆ ಮಾಡಲಾಗಿದೆ ಇದರ ಬಗ್ಗೆ ಮಾಹಿತಿ ಪಡೆದು ಕೆಲ ಹಿರಿಯ ಸಿಬ್ಬಂಧಿ ಕಚೇರಿಗೆ ಆಗಮಿಸಿದ್ದಾರೆ. ಇಲ್ಲಿ ಹಲವು ದಾಖಲೆಗಳನ್ನು ಜಪ್ತಿ ಮಾಡಲಾಗಿದೆ.

ಚಿತ್ರದುರ್ಗದಲ್ಲಿ ಹೊಳಲ್ಕೆರೆ ಕೃಷಿ ಇಲಾಖೆ ಸಹಾಯಕ ನಿರ್ದೇಶಕ ಚಂದ್ರಕುಮಾರ್ ಅವರಿಗೆ ಲೋಕಾಯುಕ್ತ ಅಧಿಕಾರಿಗಳು ಶಾಕ್ ನೀಡಿದ್ದಾರೆ. ಎಸ್ಪಿ ವಾಸುದೇವರಾಮ್, ಡಿವೈಎಸ್ಪಿ ಮೃತ್ಯುಂಜಯ, ಪಿಐ ಮಂಜುನಾಥ್ ನೇತೃತ್ವದಲ್ಲಿ ಲೋಕಾಯುಕ್ತ



ಅಧಿಕಾರಿಗಳ ತಂಡ ಹಲವೆಡ ಶೋಧ ನಡೆಸಿದೆ.

ತರಳಬಾಳು ನಗರದಲ್ಲಿರುವ ಚಂದ್ರಕುಮಾರ್ ಮನೆಗೆ ಅಧಿಕಾರಿಗಳು ಬರುತ್ತಿದ್ದಂತೆ ಮನೆಯವರು ಶಾಕ್ ಆಗಿದ್ದಾರೆ. ಮನೆಯಲ್ಲಿ ಲಕ್ಷಾಂತರ ರೂ ನಗದು,ಚಿನ್ನಭರಣ, ಮತ್ತಿತರ ಬೆಲೆಬಾಳುವ ವಸ್ತುವನ್ನು ಪತ್ತೆ ಮಾಡಿದ್ದಾರೆ.ಹೊಳಲ್ಕೆರೆ ತಾಲೂಕಿನ ಟಿ.ನುಲೇನೂರು ಗ್ರಾಮದ ಮನೆಗಳು ಹಾಗು ಕಚೇರಿ ಮೇಲೂ ದಾಳಿ ನಡೆದಿದೆ.

ದಾವಣಗೆರೆಯಲ್ಲಿ ಕೆಆರ್ ಐಡಿಎಲ್ ಸಹಾಯಕ ಇಂಜಿನಿಯರ್ ಜಗದೀಶ್ ನಾಯ್ಕ ಹಾಗೂ ಆಹಾರ ಮತ್ತು ನಾಗರಿಕ ಪೂರೈಕೆ ಇಲಾಖೆಯ ಎಸ್‌ಡಿಎ ನಡುವಿನನಮಾನಿ ಮನೆ, ಕಚೇರಿ ಹಾಗು ಸಂಬಂಧಿಕರ ಮನೆಗಳ ಮೇಲೂ ಲೋಕಾಯುಕ್ತ ದಾಳಿ ನಡೆದಿದೆ. ಮೂಲಗಳ ಪ್ರಕಾರ ಇಬ್ಬರು ಅಧಿಕಾರಿಗಳಿಗೆ ಸೇರಿದ 10ಕ್ಕೂ ಹೆಚ್ಚು ಸ್ಥಳಗಳಲ್ಲಿ ದಾವಣಗೆರೆ ಎಸ್ಪಿ ಎಂಎಸ್ ಕೌಲಾಪುರೆ ನೇತೃತ್ವದ ತಂಡ ದಾಳಿ ನಡೆಸಿದೆ. ಇಬ್ಬರ ಮನೆಯಲ್ಲೂ ಕೋಟ್ಯಂತರ ರೂ. ಮೌಲ್ಯದ ಚಿನ್ನಾಭರಣ,ನಿವೇಶನ ,ಕೃಷಿ ಜಮೀನು ಸೇರಿದಂತೆ ಹಲವು ದಾಖಲಾತಿ ದೊರೆತಿದ್ದು, ಅಧಿಕಾರಿಗಳು ಪರೀಶಿಲನೆ ನಡೆಸಿದ್ದಾರೆ ಹಾಸನದ ಸತ್ಯಮಂಗಲ ಬಡಾವಣೆಯಲ್ಲಿರುವ ಆರೋಗ್ಯ ಇಲಾಖೆ ಪ್ರಥಮ ದರ್ಜೆಸಹಾಯಕಿ ಜ್ಯೋತಿ ಮೇರಿ ಅವರ ಮನೆ ಹಾಗೂ ಕುವೆಂಪು ನಗರದಲ್ಲಿರುವ ಅವರ ತಂಗಿಯ ನಿವಾಸದ ಮೇಲೆ ಲೋಕಾಯುಕ್ತ ತಂಡ ದಾಳಿ ನಡೆಸಿದೆ.

ಲೋಕಾಯುಕ್ತ ಎಸ್ಪಿ ಸ್ನೇಹ, ಡಿವೈಎಸ್‌ಪಿ ಸುರೇಶ್, ಇನ್ಸ್ ಪೆಕ್ಟರ್ ಶಿಲ್ಪಾ ಮತ್ತು ಚಂದ್ರಶೇಖರ್ ಅವರ ನೇತೃತ್ವದಲ್ಲಿ ಈ ದಾಳಿ ನಡೆಯಿತು. ಹಲವೆಡೆ ನಿವೇಶನ ಸೇರಿ ಹಲವು ದಾಖಲೆಗಳನ್ನು ವಶಪಡಿಸಿಕೊಳ್ಳಲಾಗಿದೆ. ಶೋಧ ಕಾರ್ಯಚರಣೆ ಸಂಜೆವರೆಗೂ ಮುಂದುವರೆದಿದ್ದು ಅಧಿಕಾರಿಗಳು ಮನೆ ಹಾಗೂ ಆಸ್ಪತ್ರೆಯಲ್ಲಿ ದಾಖಲೆಗಳನ್ನು ಪರಿಶೀಲನೆ ನಡೆಸುತ್ತಿದ್ದಾರೆ. ಇನ್ನು ಹಾವೇರಿಯಲ್ಲಿ ಸವಣೂರ ಪುರಸಭೆ ಮುಖ್ಯಾಧಿಕಾರಿ, ರಾಣೆಬೆನ್ನೂರ ಆರ್ ಒ ಮನೆ ಮೇಲೆ ದಾಳಿ

ರಾಣೆಬೆನ್ನೂರ ನಗರದ ಎರಡು ಕಡೆಗಳಲ್ಲಿ ಮಂಗಳವಾರ ಬೆಳ್ಳಂಬೆಳಗ್ಗೆ ಲೋಕಾಯುಕ್ತ ಅಧಿಕಾರಿಗಳು ದಾಳಿ ನಡೆಸುವ ಮೂಲಕ ಅಕ್ರಮ ಆಸ್ತಿಗಳಿಸಿದ ಸರ್ಕಾರಿ ಅಧಿಕಾರಿಗಳಿಗೆ ಬಿಸಿ ಮುಟ್ಟಿಸಿದ್ದಾರೆ. ಇಲ್ಲಿಯ ಚೋಳಮರಡೇಶ್ವರ ನಗರದ ನಿವಾಸಿಸವಣೂರ ಪುರಸಭೆ ಮುಖ್ಯಾಧಿಕಾರಿ ಬಸವರಾಜ ಶಿಡೇನೂರ ಹಾಗೂ ಸಿದ್ದೇಶ್ವರ ನಗರದ ನಿವಾಸಿ ರಾಣೆಬೆನ್ನೂರ ಕಂದಾಯ ನಿರೀಕ್ಷಕ ಅಶೋಕ ಅರಳೇಶ್ವರ ಮನೆ ಮೇಲೆ ನಡೆದಿದೆ.

ಇಲ್ಲಿ ದಾವಣಗೆರೆ ಹಾಗೂ ಹಾವೇರಿ ಲೋಕಾಯುಕ್ತ ಅಧಿಕಾರಿಗಳ ತಂಡ ದಾಳಿ ನಡೆಸಿದ್ದು ಮನೆಯಲ್ಲಿರುವ ದಾಖಲಾತಿ, ಚಿನ್ನಾಭರಣ ಹಾಗೂ ನಗದು ಪರಿಶೀಲನೆ ನಡೆಸುತ್ತಿದ್ದಾರೆ. ಚಿನ್ನಾಭರಣ, ನಿವೇಶನ ಸೇರಿ ಹಲವು ಅಕ್ರಮ ಸಂಪತ್ತು ಬೆಳಕಿಗೆ ಬಂದಿದೆ.

## ಸರಕಾರಿ ನೌಕರರು ಆರ್‌ಎಸ್‌ಎಸ್ ಚಟುವಟಿಕೆಗಳಿಂದ ದೂರವಿರಬೇಕು

**ಬೆಳಗಾವಿ:** ರಾಷ್ಟ್ರೀಯ ಸ್ವಯಂ ಸೇವಕ ಸಂಘ (ಆರೆಸ್ಸೆಸ್) ಒಂದು ರಾಜಕೀಯ ಸಂಘಟನೆಯೇ ಹೊರತು ಸಾಮಾಜಿಕ ಸಂಘಟನೆಯಲ್ಲ ಎಂದು ಆರೋಗ್ಯ ಸಚಿವ ದಿನೇಶ್ ಗುಂಡೂರಾವ್ ಹೇಳಿದರು.

ಮಂಗಳವಾರ ಸುದ್ದಿಗಾರರೊಂದಿಗೆ ಮಾತನಾಡಿದ ಅವರು, ರಾಜ್ಯದಲ್ಲಿ ಆರೆಸ್ಸೆಸ್ ನಿಷೇಧಿಸಬೇಕಾದ ಅಗತ್ಯವಿದೆ. ಅದರ ಚಟುವಟಿಕೆಗಳಿಗೆ ಸರಕಾರಿ ಆವರಣ ಬಳಸಬಾರದು. ಸರಕಾರಿ ನೌಕರರು ಆ ಸಂಘಟನೆಯ ಯಾವುದೇ



ಕಾರ್ಯಕ್ರಮಗಳಲ್ಲಿ ಭಾಗವಹಿಸಬಾರದು" ಎಂದರು. ಆರೆಸ್ಸೆಸ್ ನಾಯಕರು ಹಲವು ಸರಕಾರಗಳ ರಚನೆ ಮತ್ತು ಉರುಳಿಸುವ ಕಾರ್ಯಗಳಲ್ಲಿ ಭಾಗಿಯಾಗಿದ್ದಾರೆ. ಚುನಾವಣೆಯಲ್ಲೂ ಸ್ಪರ್ಧಿಸುತ್ತಿದ್ದಾರೆ. ಹಾಗಾಗಿ ಅದು ಸಾಮಾಜಿಕ ಸಂಘಟನೆಯಲ್ಲ, ರಾಜಕೀಯ ಸಂಘಟನೆಯಾಗಿದೆ. ಸರಕಾರಿ ನೌಕರರು ಆರೆಸ್ಸೆಸ್ ಚಟುವಟಿಕೆಗಳಿಂದ ದೂರವಿರಬೇಕು" ಎಂದು ಎಚ್ಚರಿಸಿದರು. ಬಯೋಕಾನ್ ಮುಖ್ಯಸ್ಥೆ ಕಿರಣ್ ಮಜುಂದಾರ್ ಶಾ ಅವರು ಬೆಂಗಳೂರಿನ ರಸ್ತೆ ಸ್ಥಿತಿಯ ಬಗ್ಗೆ ಸಾಮಾಜಿಕ ಜಾಲತಾಣದಲ್ಲಿ ನೀಡಿದ ಟಿಪ್ಪಣಿ ಕುರಿತು ಪ್ರತಿಕ್ರಿಯಿಸಿದ ದಿನೇಶ್ ಗುಂಡೂರಾವ, ಕಳೆದ ಏಳು ತಿಂಗಳಿನಿಂದ ಮಳೆ ಮುಂದುವರಿದಿದೆ. ರಸ್ತೆ ಅಭಿವೃದ್ಧಿಗೆ ಯುದ್ಧೋಪಾದಿಯಲ್ಲಿ ಕೆಲಸ ಪ್ರಾರಂಭಿಸಲಾಗಿದ್ದು, ಮುಂದಿನ ನಾಲ್ಕು ತಿಂಗಳಲ್ಲಿ ಎಲ್ಲ ರಸ್ತೆಗಳು ಸಹಜ ಸ್ಥಿತಿಗೆ ಬರಲಿವೆ ಎಂದರು.

## ರಾಜ್ಯದಲ್ಲಿ 5 ಕೋಟಿ ಜನರ ಸಮೀಕ್ಷೆ ಪೂರ್ಣ

**ಬೆಂಗಳೂರು:** ರಾಜ್ಯಾದ್ಯಂತ ಸಾಮಾಜಿಕ ಮತ್ತು ಶೈಕ್ಷಣೀಕ ಸಮೀಕ್ಷೆ ನಡೆಯುತ್ತಿದ್ದು, ಇಲ್ಲಿಯವರೆಗೆ ರಾಜ್ಯದಲ್ಲಿ ಶೇ.91.46ರಷ್ಟು ಸಮೀಕ್ಷೆಯು ಪೂರ್ಣಗೊಂಡಿದ್ದು, ಒಟ್ಟು 5,00,12,756 ಜನರು ಸಮೀಕ್ಷೆಯಲ್ಲಿ ಭಾಗವಹಿಸಿದ್ದಾರೆ ಎಂದು ಹಿಂದುಳಿದ ವರ್ಗಗಳ ಆಯೋಗವು ಮಾಹಿತಿ ನೀಡಿದೆ.ರಾಜ್ಯದಲ್ಲಿ ಒಟ್ಟು ಮನೆಗಳ ಗುರಿ 1,47,88,831 ಆಗಿದ್ದು, ಮಂಗಳವಾರ ಒಂದೇ ದಿನ 1,69,835 ಮನೆಗಳ ಸಮೀಕ್ಷೆ ಪೂರ್ಣಗೊಂಡಿದೆ. ಇದುವರೆಗೆ 1,35,51,046 ಮನೆಗಳ ಸಮೀಕ್ಷೆ ಪೂರ್ಣಗೊಂಡಿದೆ. ಇನ್ನು ಗ್ರೇಟರ್ ಬೆಂಗಳೂರು ಪ್ರಾಧಿಕಾರದ ವ್ಯಾಪ್ತಿಯಲ್ಲಿ 39,82,335 ಮನೆಗಳ ಗುರಿ ಇದ್ದು, 14,28,384 ಮನೆಗಳ ಸಮೀಕ್ಷೆ ಮುಗಿದಿದೆ ಎಂದು ಆಯೋಗವು ತಿಳಿಸಿದೆ.

## ಅಕ್ರಮ ಪಟಾಕಿ ದಾಸ್ತಾನು ಮಾಡುವವರ ವಿರುದ್ಧ ಕ್ರಮ

**ಬೆಂಗಳೂರು:** ಬೆಂಗಳೂರು ವ್ಯಾಪ್ತಿಯಲ್ಲಿ ದೀಪಾವಳಿ ಹಿನ್ನೆಲೆ ಪಟಾಕಿಗಳನ್ನು ಅಕ್ರಮವಾಗಿ ದಾಸ್ತಾನು ಅಥವಾ ಮಾರಾಟ ಮಾಡುವವರ ವಿರುದ್ಧ ಕಾನೂನು ರೀತ್ಯಾ ಕ್ರಮ ಕೈಗೊಳ್ಳಲಾಗುವುದಾಗಿ ನಗರ ಪೊಲೀಸ್ ಆಯುಕ್ತ ಸೀಮಂತ್ ಕುಮಾರ್ ಸಿಂಗ್ ಎಚ್ಚರಿಸಿದ್ದಾರೆ. ಮಂಗಳವಾರ ನಗರ ಪೊಲೀಸ್ ಆಯುಕ್ತರ ಕಚೇರಿಯಲ್ಲಿ ಪ್ರತಿಕಾಗೋಷ್ಠಿಯಲ್ಲಿ ಮಾತನಾಡಿದ ಅವರು, ದೀಪಾವಳಿ ಸಂದರ್ಭದಲ್ಲಿ ಪರವಾನಿಗೆ ಪಡೆದಿರುವವರು ಮಾತ್ರ ಪಟಾಕಿಗಳನ್ನು ಸರಿಯಾದ ರೀತಿಯಲ್ಲಿ ದಾಸ್ತಾನು ಮಾಡಿಕೊಂಡು ಮಾರಾಟ ಮಾಡಬೇಕು. ಜತೆಗೆ, ಪೊಲೀಸ್ ಇಲಾಖೆ ನೀಡುವ ಸೂಚನೆಗಳನ್ನು ಪಾಲನೆ ಮಾಡಬೇಕು ಎಂದು ಹೇಳಿದರು. ಬೆಂಗಳೂರು ನಗರಕ್ಕೆ ಮಾದಕ ವಸ್ತುಗಳು ಎಲ್ಲಿಂದ ಸರಬರಾಜು ಆಗುತ್ತಿದೆ ಎಂಬುವುದನ್ನು ಪತ್ತೆ ಹಚ್ಚಲು ಅಪರಾಧ ವಿಭಾಗದ ಜಂಟಿ ಪೊಲೀಸ್ ಆಯುಕ್ತರ ನೇತೃತ್ವದಲ್ಲಿ ತಂಡವನ್ನು ರಚಿಸಲಾಗಿದೆ. ಈ ತಂಡ ಈಗಾಗಲೇ ಕಾರ್ಯಾಚರಣೆ ನಡೆಸುತ್ತಿದೆ ಎಂದು ಅವರು ತಿಳಿಸಿದರು.

## ಅಮೆರಿಕಾ ಪ್ರಜೆಗಳಿಗೆ ಡಿಜಿಟಲ್ ಅರೆಸ್ಟ್

**ಬೆಂಗಳೂರು:** ಪೊಲೀಸ್ ಅಧಿಕಾರಿ ಸೋಗಿನಲ್ಲಿ ಅಮೆರಿಕಾ ಸೇರಿದಂತೆ ವಿವಿಧ ದೇಶಗಳ ಪ್ರಜೆಗಳಿಗೆ ಕರೆ ಮಾಡಿ ಅಪರಾಧ ಪ್ರಕರಣಗಳಲ್ಲಿ ಭಾಗಿಯಾಗಿರುವುದಾಗಿ ಬೆದರಿಸಿ ಡಿಜಿಟಲ್ ಅರೆಸ್ಟ್ ಮಾಡುತ್ತಿದ್ದ ಆರೋಪದಡಿ 16 ಮಂದಿಯನ್ನು ಇಲ್ಲಿನ ಎಚ್‌ಎಸ್‌ಆರ್ ಲೇಔಟ್ ಠಾಣಾ ಪೊಲೀಸರು ಬಂಧಿಸಿದ್ದಾರೆ.ಎಚ್‌ಎಸ್‌ಆರ್ ಲೆಔಟ್ 27ನೆ ಮುಖ್ಯ ರಸ್ತೆಯಲ್ಲಿ ನಕಲಿ ಬಿಪಿಎಲ್ ಕಂಪೆನಿ ತೆರೆದು ವಿದೇಶಿಯರಿಗೆ ಕರೆ ಮಾಡಿ ವಂಚಿಸುತ್ತಿರುವ ಬಗ್ಗೆ ಮಾಹಿತಿ ಸಂಗ್ರಹಿಸಿದ ಪೊಲೀಸರು ಸುವೋಮೋಟೊ ಪ್ರಕರಣ ದಾಖಲಿಸಿಕೊಂಡು ತನಿಖೆ ನಡೆಸಿ 16 ಮಂದಿ ಆರೋಪಿಗಳನ್ನು ಬಂಧಿಸಲಾಗಿದೆ.

ಕುಡಚಿ-ಬಾಗಲಕೋಟೆ ರೈಲು: ಉಳಿದ ಜಮೀನು ಶೀಘ್ರ ಸಮೀಕ್ಷೆಯಾಗಲಿ

## ಹೊಸ ರೈಲು ಮಾರ್ಗಕ್ಕೆ ಮನವಿ



**ರಬಕವಿ-ಬನಹಟ್ಟಿ:** ಕುಡಚಿ-ಬಾಗಲಕೋಟೆ ರೈಲು ಯೋಜನೆಯು ಇದೀಗ ಲೋಕಾಪೂರ ದವರೆಗೆ ಆಗಿದ್ದು, ಇನ್ನುಳಿದ ಕೆಲ ಭೂಮಿ ಸಮೀಕ್ಷೆಯಲ್ಲಿ ಬಿಟ್ಟಿ ಹೋಗಿರುವ ಕಾರಣ ಕಾಮಗಾರಿಗೆ ಅಡೆತಡೆಗೆ ಕಾರಣವಾಗಿದೆ. ಈಗಷ್ಟೇ ಜಿಲ್ಲಾಧಿಕಾರಿಗಳ ನೇತೃತ್ವದಲ್ಲಿ ಸರ್ಕಾರಕ್ಕೆ ಕಳಿಸಲಾಗಿದ್ದು, ಶೀಘ್ರವೇ ಅನುಮೋದಿಸಿ ಕಾಮಗಾರಿಗೆ ವೇಗ ನೀಡಬೇಕೆಂದು ರೈಲು ಹೋರಾಟ ಸಮಿತಿ ಅಧ್ಯಕ್ಷ ಕುತ್ಬುದ್ದೀನ್ ಖಾಜಿ ಸಿಎಂ ಸಿದ್ಧರಾಮಯ್ಯರಲ್ಲಿ ಮನವಿ ಮಾಡಿದರು.

ಸೋಮವಾರ ಬಂಡಿಗಣಿಮಠಕ್ಕೆ ಆಗಮಿಸಿದ್ದ ಸಿಎಂ ಸಿದ್ಧರಾಮಯ್ಯರಿಗೆ ಮನವಿ ಅರ್ಪಿಸಿ ಮಾತನಾಡಿದ ಅವರು, ಕಳೆದೊಂದು ದಶಕದಿಂದ ಅತಿ ಮಂದಗತಿಯಲ್ಲಿ ಕುಡಚಿ-ಬಾಗಲಕೋಟೆ ರೈಲು ಮಾರ್ಗ ಕಾಮಗಾರಿ ನಡೆಯುತ್ತಿದೆ. ಈ ಭಾಗದ ಜನತೆಯಲ್ಲಿ ತೀವ್ರ ನಿರಾಸೆಯನ್ನುಂಟು ಮಾಡಿದ್ದು, ಕಾಮಗಾರಿ ವೇಗ ಹೆಚ್ಚಿಸುವ ಮೂಲಕ ತಾಂತ್ರಿಕ ಸಮಸ್ಯೆಗಳಿಗೆ ಶೀಘ್ರವೇ ಸ್ಪಂದಿಸಬೇಕೆಂದು ಖಾಜಿ ತಿಳಿಸಿದರು.

**ಮಾರ್ಗ ವಿಸ್ತರಣೆಯಾಗಲಿ:** ಉತ್ತರ ಕರ್ನಾಟಕದ ಪ್ರಮುಖ ದೇವಸ್ಥಾನವೊಂದರಲ್ಲೊಂದಾದ ಸವದತ್ತಿ ಯಲ್ಲಮ್ಮನಗುಡ್ಡಕ್ಕೆ ತೆರಳಲು ಲೋಕಾಪೂರ ದಿಂದ ಸವದತ್ತಿಗೆ ಅತ್ಯಂತ ಸೂಕ್ತ ಮಾರ್ಗವಾಗಿದ್ದು, ಧಾರವಾಡದವರೆಗೆ ವಿಸ್ತರಣೆಯಾದಲ್ಲಿ ಲಕ್ಷಾಂತರ ಈ ಭಾಗದ ಭಕ್ತರಿಗೆ ಅನುಕೂಲವಾಗಲಿದೆಯೆಂದು ಖಾಜಿ ತಿಳಿಸಿದರು.

ರೈತ ನಾಯಕ ಸುಭಾಸ ಶಿರಬೂರ, ಶ್ರೀನಿವಾಸ ಬಳ್ಳಾರಿ, ಬಸವರಾಜ ಕೊಕಟನೂರ, ಹೊಳೆಬಸು ಶೆಟ್ಟರ ಸೇರಿದಂತೆ ಅನೇಕರಿದ್ದರು.

# ನಾಯಿ ಕಡಿತಕ್ಕೆ ನಿರ್ಲಕ್ಷ್ಯ ಬೇಡ: ಎಚ್ಚರಿಕೆ ಇರಲಿ

**ವಿಜಯಪುರ:** ನಾಯಿ ಕಡಿತಕ್ಕೊಳಗಾದಲ್ಲಿ ಸಾರ್ವಜನಿಕರು ನಿರ್ಲಕ್ಷ್ಯ ವಹಿಸದೇ ಎಚ್ಚರಿಕೆ ವಹಿಸಿ, ತಕ್ಷಣ ಲಸಿಕೆ ಪಡೆದುಕೊಳ್ಳುವ ಮೂಲಕ ರೇಬಿಸ್ ಬಾರದಂತೆ ತಡೆಗಟ್ಟಬಹುದಾಗಿದೆ ಎಂದು ಜಿಲ್ಲಾಧಿಕಾರಿ ಡಾ.ಆನಂದ ಕೆ. ಅವರು ಹೇಳಿದರು.

ಜಿಲ್ಲಾಡಳಿತ, ಜಿಲ್ಲಾ ಪಂಚಾಯತ್, ಪಶು ಪಾಲನಾ ಮತ್ತು ಪಶುವೈದ್ಯಕೀಯ ಸೇವಾ ಇಲಾಖೆ, ಕರ್ನಾಟಕ ಪಶುವೈದ್ಯಕೀಯ ಸಂಘ ಬೆಂಗಳೂರು ಹಾಗೂ ಜಿಲ್ಲಾ ಘಟಕ ಇವರ ಸಹಯೋಗದಲ್ಲಿ ಮಂಗಳವಾರ ಜಿಲ್ಲಾ ಪಂಚಾಯತ್ ಸಭಾಂಗಣದಲ್ಲಿ ನಡೆದ ರೇಬಿಸ್ ತಡೆಗಟ್ಟಲು ಮುಂದಾಗೋಣ ನೀವು-ನಾವು ನಮ್ಮ ಸಮಾಜ ಎಂಬ ಘೋಷವಾಕ್ಯದಡಿ 2025-ರ ವಿಶ್ವ ರೇಬಿಸ್ ದಿನಾಚರಣೆ ಕಾರ್ಯಕ್ರಮಕ್ಕೆ ಚಾಲನೆ ನೀಡಿ ಅವರು ಮಾತನಾಡಿದರು.

ಜಿಲ್ಲೆಯಲ್ಲಿ ಜನವರಿಯಿಂದ ಈವರೆಗೆ ಬೀದಿ ನಾಯಿ ಕಡಿತದ ಪ್ರಕರಣಗಳು ವರದಿಯಾಗಿವೆ. ನಾಯಿ ಕಡಿತಕ್ಕೊಳಗಾಗದಲ್ಲಿ ಸೂಕ್ತ ಸಮಯದಲ್ಲಿ ಚಿಕಿತ್ಸೆ ಪಡೆಯಬೇಕು. ಜಿಲ್ಲೆಯ ಎಲ್ಲ ಸರ್ಕಾರಿ ಆಸ್ಪತ್ರೆಗಳಲ್ಲಿ ರೇಬಿಸ್ ನಿರೋಧಕ ಲಸಿಕೆ ಸಾಕಷ್ಟು ಪ್ರಮಾಣದಲ್ಲಿ ಲಭ್ಯವಿದ್ದು, ಸಾರ್ವಜನಿಕರು ಇದರ ಸದುಪಯೋಗ ಪಡೆದುಕೊಳ್ಳಬೇಕು. ಸಾರ್ವಜನಿಕರು ತಮ್ಮ ಸಾಕು ನಾಯಿಗಳಿಗೆ ನಿಯಮಿತವಾಗಿ ರೇಬಿಸ್ ನಿರೋಧಕ ಲಸಿಕೆ ಹಾಕಿಸಬೇಕು ಎಂದು ಅವರು ಹೇಳಿದರು.

ರೇಬಿಸ್ ರೋಗ ನಿಯಂತ್ರಣಕ್ಕಾಗಿ ಬೀದಿ ನಾಯಿಗಳಿಗೆ ಲಸಿಕೆ ಹಾಕುವ ಕಾರ್ಯಕ್ರಮವನ್ನು ಈಗಾಗಲೇ ಮುದ್ದೇಬಿಹಾಳದಲ್ಲಿ ಆರಂಭಿಸಲಾಗಿದೆ. ಸ್ಥಳೀಯ ಸಂಸ್ಥೆಗಳು, ಗ್ರಾಮ ಪಂಚಾಯತಿ, ಆರೋಗ್ಯ ಸಂಸ್ಥೆಗಳು ಸೇರಿದಂತೆ ಎಲ್ಲ ಇಲಾಖೆಗಳು ಕೈ ಜೋಡಿಸಿ ನಿಯಂತ್ರಣಕ್ಕೆ ಮುಂದಾಗಬೇಕು.



ಪಾಲಿಕೆ ವತಿಯಿಂದ ಬೀದಿ ನಾಯಿಗಳ ಜನನ ನಿಯಂತ್ರಣ ಹಾಗೂ ರೇಬಿಸ್ ನಿರೋಧಕ ಲಸಿಕೆ ಕಾರ್ಯಕ್ರಮ ಅನುಷ್ಠಾನಗೊಳಿಸಲಾಗುತ್ತಿದೆ. ಬೀದಿ ನಾಯಿಗಳಿಗೆ ರೇಬಿಸ್ ನಿರೋಧಕ ಲಸಿಕೆ ಹಾಕುವ ಹಾಗೂ ಹಾಗೂ ನಿಯಮಾನುಸಾರ ಸಂತಾನ ಹರಣ ಶಸ್ತ್ರ ಚಿಕಿತ್ಸೆ ಕೈಗೊಳ್ಳುವ ರೇಬಿಸ್ ನಿಯಂತ್ರಣಕ್ಕಾಗಿ ಎಲ್ಲ ಇಲಾಖೆಗಳು ಕೈ ಜೋಡಿಸಿ, ಲಸಿಕೆ ಹಾಕುವ ಕಾರ್ಯಸೂಚಿಯನ್ನು ಸಿದ್ಧಪಡಿಸಿಕೊಂಡು ಮೈಕ್ರೋ ಪ್ಲ್ಯಾನ್ ಹಾಕಿಕೊಂಡು, ಅಗತ್ಯ ಸಿಬ್ಬಂದಿಯೊಂದಿಗೆ ಲಸಿಕೆ ಕಾರ್ಯಕ್ರಮವನ್ನು ಹಮ್ಮಿಕೊಂಡು ಲಭ್ಯತೆಯನುಸಾರ ಸಮರ್ಪಕವಾಗಿ ಕಾರ್ಯನಿರ್ವಹಿಸಬೇಕು ಎಂದು ಅವರು ಹೇಳಿದರು.

ಬೀದಿ ನಾಯಿಗಳಿಗೆ ಈಗಾಗಲೇ ಆಶ್ರಯ ಕೇಂದ್ರವನ್ನು ಬುರಣಾಪುರದಲ್ಲಿ ನಿರ್ಮಾಣ ಮಾಡಲು ಉದ್ದೇಶಿಸಲಾಗಿದೆ. ವಿವಿಧ ಬೀದಿ ನಾಯಿಗಳಿಗೆ ಈ ಕೇಂದ್ರದಲ್ಲಿ ಆಶ್ರಯ ಒದಗಿಸಲಾಗುತ್ತಿದ್ದು, ಪಾಲಿಕೆ ಹಾಗೂ ಪಶು ವೈದ್ಯಕೀಯ ಇಲಾಖೆಗಳು ಜಂಟಿಯಾಗಿ ಈ ಕೇಂದ್ರವನ್ನು ನಿರ್ವಹಿಸಲಿದ್ದಾರೆ ರೇಬಿಸ್ ರೋಗದ ಕುರಿತು ಗ್ರಾಮೀಣ, ನಗರ ಪ್ರದೇಶ ಸೇರಿದಂತೆ ಶಾಲಾ ಕಾಲೇಜ್ ಗಳಲ್ಲಿ ವಿವಿಧ ಚಟುವಟಿಕೆಗಳನ್ನು ಹಮ್ಮಿಕೊಳ್ಳುವ ಮೂಲಕ ವ್ಯಾಪಕವಾಗಿ ಜಾಗೃತಿ ಮೂಡಿಸಬೇಕು. ಈ ರೋಗದ ಕುರಿತು ಜನರಲ್ಲಿ ತಿಳುವಳಿಕೆ ಮೂಡಿಸಲು ಆಗಾಗ ಜಾಗೃತಿ ಕಾರ್ಯಕ್ರಮ ಆಯೋಜನೆ ಮಾಡಿ ಜಾಗೃತಿ ಮೂಡಿಸಬೇಕು ಎಂದು ಅವರು ಹೇಳಿದರು. ಬೆಂಗಳೂರಿನ ಪಶುವೈದ್ಯಕೀಯ ಸಂಘದ ರಾಜ್ಯಾಧ್ಯಕ್ಷರಾದ ಡಾ.ಶಿವಶರಣಪ್ಪ ಯಲಗೋಡ ಅವರು ಪ್ರಾಸ್ತಾವಿಕವಾಗಿ ಮಾತನಾಡಿ. ವಿಶ್ವ ರೇಬಿಸ್ ದಿನ್ ಸೆ.28ರಂದು ಪ್ರತಿ ವರ್ಷ ಆಚರಿಸಲಾಗುತ್ತದೆ. ಕಳೆದ 18 ವರ್ಷಗಳಿಂದ ಈ ದಿನಾಚರಣೆ ಆಚರಿಸಲಾಗುತ್ತಿದೆ. 2030ರವರೆಗೆ ರೇಬಿಸ್ ಮುಕ್ತ ಮಾಡಲು ಈ ದಿಸೆಯಲ್ಲು ನಾವೆಲ್ಲರೂ ಪ್ರಯತ್ನಿಸೋಣ. ಈ ಕುರಿತು ಹೆಚ್ಚೆಚ್ಚು ಜನಜಾಗೃತಿ ಮೂಡಿಸುವ ಕಾರ್ಯಕ್ರಮಗಳು, ಕಾರ್ಯಾಗಾರಗಳನ್ನು ಹಮ್ಮಿಕೊಳ್ಳುವ ಮೂಲಕ ರೇಬಿಸ್ ಮುಕ್ತ ಮಾಡಲು ಅವರು ಕರೆ ನೀಡಿದರು.

ಸಾಂಕ್ರಾಮಿಕ ವಿಭಾಗದ ಹಿರಿಯ ವಿಜ್ಞಾನಿಗಳಾದ ಡಾ.ಗಂಗಾಧರ ಎನ್. ಎಲ್. ಅವರು, ರೇಬಿಸ್ ಕುರಿತು ಉಪನ್ಯಾಸ ನೀಡಿದರು. ಕಾರ್ಯಕ್ರಮದಲ್ಲಿ ನಗರಾಭಿವೃದ್ಧಿ ಕೋಶದ ಯೋಜನಾ ನಿರ್ದೇಶಕ ಬದ್ರೂದ್ದಿನ್ ಸೌದಾಗರ, ಜಿಲ್ಲಾ ಆರೋಗ್ಯ ಮತ್ತು ಕುಟುಂಬ ಕಲ್ಯಾಣ ಅಧಿಕಾರಿ ಡಾ. ಸಂಪತ್‌ಕುಮಾರ ಗುಣಾರಿ, ಪಶು ಸಂಗೋಪನಾ ಇಲಾಖೆ ಉಪನಿರ್ದೇಶಕ ಡಾಎಸ್.ಘೋಣಸಗಿ, ಪಾಲಿಕ್ಲಿನಿಕ್ ಉಪನಿರ್ದೇಶಕ ವಿಠೋಬ ಎನ್. ಆಸಂಗಿಹಾಳ, ಜಿ.ಪಂ.ಲೆಕ್ಕಾಧಿಕಾರಿ ರಾಮಣ್ಣ ಅಥಣಿ, ಪಾಲಿಕೆ ಆರೋಗ್ಯಾಧಿಕಾರಿ ಎಸ್. ಎಲ್.ಲಕ್ಕಣ್ಣವರ, ಜಿಲ್ಲಾಸ್ಪತ್ರೆ ವೈದ್ಯ ಅಚ್ಯುತ್ ಪತ್ತಾರ, ಜಿಲ್ಲೆಯ ತಾಲೂಕು ಹಾಗೂ ಜಿಲ್ಲಾ ಮಟ್ಟದ ಅಧಿಕಾರಿಗಳು ಉಪಸ್ಥಿತರಿದ್ದರು.

## ಕಾರ್ಖಾನೆಯ ಎಲ್ಲ ವಿಭಾಗ ಪರಿಶೀಲಿಸಿ, ಕಾರ್ಮಿಕರ ಅಹವಾಲು ಆಲಿಸಿದ ಹಟ್ಟಿಹೊಳಿ



**ಎಂ.ಕೆ. ಹುಬ್ಬಳ್ಳಿ:** ಶ್ರೀ ಮಲಪ್ರಭಾ ಸಹಕಾರಿ ಸಕ್ಕರೆ ಕಾರ್ಖಾನೆಗೆ ಭೇಟಿ ನೀಡಿದ ನೂತನ ಅಧ್ಯಕ್ಷ ಚನ್ನರಾಜ ಹಟ್ಟಿಹೊಳಿ, ಕಾರ್ಖಾನೆಯ ಪ್ರತಿಯೊಂದು ವಿಭಾಗವನ್ನು ಪರಿಶೀಲಿಸಿ, ಕಾರ್ಯ ನಿರ್ವಹಣೆಯ ಬಗ್ಗೆ ಸಮಗ್ರ ಮಾಹಿತಿ ಪಡೆದರು. ನಂತರ ಕಾರ್ಖಾನೆಯ ಕಾರ್ಮಿಕರೊಂದಿಗೆ ಸಭೆ ನಡೆಸಿ, ಅವರ ಸಮಸ್ಯೆಗಳನ್ನು ಆಲಿಸಿದರು. ಕಾರ್ಖಾನೆಯ ಅಭಿವೃದ್ಧಿ, ಕಾರ್ಮಿಕರ ಕಲ್ಯಾಣ ಮತ್ತು ಬರುವ ಕಬ್ಬು ಹಂಗಾಮಿನ ನಿರ್ವಹಣೆಯ ಕುರಿತು ವಿಸ್ತೃತ ಚರ್ಚೆ ನಡೆಸಿ, ಎಲ್ಲ ವಿಭಾಗ ಇಗಳ ಸಮನ್ವಯದೊಂದಿಗೆ ಪೂರ್ವ ಸಿದ್ಧತೆಗಳನ್ನು ತ್ವರಿತವಾಗಿ ಕೈಗೊಳ್ಳುವಂತೆ ನಿರ್ದೇಶನ ನೀಡಿದರು. ಇದೇ ಸಂದರ್ಭದಲ್ಲಿ ಕಾರ್ಮಿಕರು ನೂತನ ಅಧ್ಯಕ್ಷರನ್ನು ಸನ್ಮಾನಿಸಿದರು.


ಈ ವೇಳೆ ಕಾರ್ಖಾನೆಯ ಆಡಳಿತ ಮಂಡಳಿಯ ನಿರ್ದೇಶಕರು ಉಪಸ್ಥಿತರಿದ್ದರು.

# ಆಡಳಿತದ ಪಾರದರ್ಶಕತೆಗೆ ಮಾಹಿತಿ ತಂತ್ರಜ್ಞಾನವೇ ಸಾಧನ

**ಬೆಂಗಳೂರು:** ಆಡಳಿತದ ಎಲ್ಲಾ ಹಂತಗಳಲ್ಲಿ ಮಾಹಿತಿ ತಂತ್ರಜ್ಞಾನದ ಬಳಕೆಯನ್ನು ಹೆಚ್ಚಿಸಿ ಇದರಿಂದ ಪಾರದರ್ಶಕತೆ ಸ್ವಯಂಚಾಲಿತವಾಗಿ ಸ್ಥಾಪನೆಯಾಗುತ್ತದೆ ಎಂದು ಕರ್ನಾಟಕದ ಗೌರವಾನ್ವಿತ ರಾಜ್ಯಪಾಲರಾದ ಥಾವರ್ ಚಂದ್ ಗೆಹ್ಲೋಟ್ ಅವರು ಸಲಹೆ ನೀಡಿದರು.

ಬೆಂಗಳೂರಿನಲ್ಲಿ ನಡೆದ ಮಾಹಿತಿ ಹಕ್ಕು ಅಧಿನಿಯಮ-20 ವರ್ಷಗಳ ಪೂರೈಕೆ ಸಮಾರಂಭ ದಲ್ಲಿ ಭಾಗವಹಿಸಿ ಅವರು ಮಾತನಾಡಿದರು. ಮಾಹಿತಿ ಹಕ್ಕು ಪ್ರಕ್ರಿಯೆಯನ್ನು ಸಂಪೂರ್ಣವಾಗಿ ಡಿಜಿಟಲೀಕರಣಗೊಳಿಸುವುದು ಮತ್ತು ಸರಳಗೊಳಿಸು ವುದು, ಮಾಹಿತಿ ಆಯೋಗಗಳ ಸ್ವಾತಂತ್ರ್ಯ ಮತ್ತು ಸಾಮರ್ಥ್ಯವನ್ನು ಹೆಚ್ಚಿಸುವುದು ಮತ್ತು ಎಲ್ಲಕ್ಕಿಂತ ಹೆಚ್ಚಾಗಿ, ಆಡಳಿತದಲ್ಲಿ ಪಾರದರ್ಶಕತೆಯನ್ನು "ಕಾನೂನು ಬಾಧ್ಯತೆ"ಯನ್ನಾಗಿ ಮಾಡದೆ ನೈತಿಕ ಸಂಸ್ಕೃತಿಯನ್ನಾಗಿ ಮಾಡುವುದು ಇಂದಿನ ಅಗತ್ಯವಾಗಿದೆ ಎಂದರು.

ಮಾಹಿತಿ ಹಕ್ಕು ಕಾಯ್ದೆಯು ಕೆಲವು ಸವಾಲುಗಳನ್ನು ಎದುರಿಸುತ್ತಿದೆ. ಕಾಯ್ದೆಯ ದುರುಪಯೋಗ, ಕಚೇರಿಗಳ ಮೇಲೆ ಹೆಚ್ಚುತ್ತಿರುವ ಹೊರೆ ಮತ್ತು ಸಾರ್ವಜನಿಕ ಅರಿವಿನ ಕೊರತೆ. ನಾವು ಮಾಹಿತಿ ಹಕ್ಕು ಕಾಯ್ದೆಯ ಶಕ್ತಿಯನ್ನು ಅರ್ಥಮಾಡಿಕೊಳ್ಳಬೇಕು, ಅದರ ದುರುಪಯೋಗವನ್ನು ತಡೆಯಬೇಕು ಮತ್ತು ಈ ಹಕ್ಕು ಪ್ರತಿಯೊಬ್ಬ ನಾಗರಿಕರಿಗೂ ಪರಿಣಾಮಕಾರಿಯಾಗಿ ತಲುಪುವಂತೆ ನೋಡಿಕೊಳ್ಳಬೇಕು. ಆಡಳಿತದ ಎಲ್ಲಾ ಹಂತಗಳಲ್ಲಿ ಮಾಹಿತಿ ತಂತ್ರಜ್ಞಾನದ ಬಳಕೆಯನ್ನು ಹೆಚ್ಚಿಸುವುದರಿಂದ ಪಾರದರ್ಶಕತೆಯ ಜೊತೆಗೆ ಸಾರ್ವಜನಿಕ ಜಾಗೃತಿಯನ್ನು ಮತ್ತಷ್ಟು ಬಲಪಡಿಸುತ್ತದೆ. ಇದರಿಂದ ಪ್ರತಿಯೊಬ್ಬ ನಾಗರಿಕನು "ಮಾಹಿತಿ ಹಕ್ಕು" ತನ್ನ ಹಕ್ಕು ಎಂದು ತಿಳಿಯುತ್ತಾನೆ ಎಂದು ಹೇಳಿದರು.



ಮಾಹಿತಿ ಹಕ್ಕು ಕಾಯ್ದೆ, 2005' ಪ್ರಜಾಪ್ರಭುತ್ವದ ಚೈತನ್ಯವನ್ನೇ ಸಬಲಗೊಳಿಸುವ ಮತ್ತು ಸರ್ಕಾರ ಮತ್ತು ನಾಗರಿಕರ ನಡುವೆ ಹೊಣೆಗಾರಿಕೆ, ಪಾರದರ್ಶಕತೆ ಮತ್ತು ನಂಬಿಕೆಗೆ ಅಡಿಪಾಯ ಹಾಕುವ ಜನರ ಹಕ್ಕಾಗಿದೆ. ಆರ್‌ಟಿಐ ಕಾಯ್ದೆಯು ಪ್ರಜಾಪ್ರಭುತ್ವವನ್ನು ಬಲಪಡಿಸುವಂತಹ ಕಾನೂನು ನಿಬಂಧನೆ ಮತ್ತು ಅಡಿಪಾಯ ಎರಡೂ ಆಗಿದೆ. ಇದು ನಾಗರಿಕರು ಮತ್ತು ಸರ್ಕಾರದ ನಡುವಿನ ಸೇತುವೆಯಾಗಿ ಕಾರ್ಯನಿರ್ವಹಿಸುತ್ತದೆ ಎಂದು ತಿಳಿಸಿದರು.

ಪ್ರಜಾಪ್ರಭುತ್ವದ ನಿಜವಾದ ಶಕ್ತಿ ಜನರಲ್ಲಿದೆ. ಸಾರ್ವಜನಿಕರು ಜಾಗೃತರಾಗಿದ್ದರೆ, ಆಡಳಿತವು ಸ್ವಯಂಚಾಲಿತವಾಗಿ ಜವಾಬ್ದಾರಿಯುತವಾಗುತ್ತದೆ. "ಮಾಹಿತಿ ಹಕ್ಕು" ಈ ಅರಿವಿನ ಮೂಲಾಧಾರವಾಗಿದೆ; ಇದು ನಾಗರಿಕರಿಗೆ ಅಧಿಕಾರ ನೀಡುತ್ತದೆ ಮತ್ತು ಆಡಳಿತವನ್ನು ಜವಾಬ್ದಾರಿಯುತವಾಗಿಸುತ್ತದೆ. ಕಳೆದ ಎರಡು ದಶಕಗಳಲ್ಲಿ, ಮಾಹಿತಿ ಹಕ್ಕು ಕಾಯ್ದೆಯು ಆಡಳಿತದ ಕಾರ್ಯನಿರ್ವಹಣೆಯಲ್ಲಿ ಗಮನಾರ್ಹ ಬದಲಾವಣೆಗಳನ್ನು ತಂದಿದೆ. ಹೆಚ್ಚಿದ ಪಾರದರ್ಶಕತೆ, ಭ್ರ??ಟಚಾರವನ್ನು ನಿಗ್ರಹಿಸುವುದು, ಸಾರ್ವಜನಿಕ ಭಾಗವಹಿಸುವಿಕೆಯನ್ನು ಬಲಪಡಿಸುವುದು ಮತ್ತು ಆಡಳಿತ ಸುಧಾರಣೆಗಳನ್ನು ತಂದಿದೆ ಎಂದು ಹೇಳಿದರು.

ಮುಂಬರುವ ದಿನಗಳಲ್ಲಿ ಈ ಹಕ್ಕನ್ನು ಮತ್ತಷ್ಟು ಬಲಪಡಿಸುವುದು ಹೇಗೆ ಎಂಬುದರ ಕುರಿತು ಚಿಂತನಶೀಲ ಸಭೆ ನಡೆಸುವ ಅವಶ್ಯಕತೆಯಿದೆ. ಈ ಕಾಯ್ದೆಯ ಅನುಷ್ಠಾನದಲ್ಲಿ ಉದ್ಭವಿಸುವ ಸಮಸ್ಯೆಗಳಿಗೆ ಸಕಾರಾತ್ಮಕ ಪರಿಹಾರವನ್ನು ಕಂಡುಕೊಳ್ಳಲು ಪ್ರಯತ್ನಿಸಬೇಕೆಂದು ಸರ್ಕಾರ ಮತ್ತು ಮಾಹಿತಿ ಆಯೋಗವನ್ನು ವಿನಂತಿಸುತ್ತೇನೆ ಎಂದ ರಾಜ್ಯಪಾಲರು, ಆರ್ ಟಿಐ ಆಯುಕ್ತರು ಮತ್ತು ಸಂಬಂಧಪಟ್ಟ ಅಧಿಕಾರಿಗಳು ಬಾಕಿ ಇರುವ ತ್ವರಿತವಾಗಿ ಮೇಲ್ಮನೆ ಅರ್ಜಿಗಳನ್ನು ವಿಲೇವಾರಿ ಮಾಡಬೇಕು ಎಂದು ಸೂಚಿಸಿದರು. ಕಾರ್ಯಕ್ರಮದಲ್ಲಿ ಮುಖ್ಯ ಅತಿಥಿಗಳಾಗಿ ಭಾಗವಹಿಸಿ ಮಾತನಾಡಿದ ವಿಧಾನಸಭೆ ಸದಸ್ಯರು ಹಾಗೂ ಬೆಂಗಳೂರು ಅಭಿವೃದ್ಧಿ ಪ್ರಾಧಿಕಾರದ ಅಧ್ಯಕ್ಷರಾದ ಎನ್.ಎ. ಹ್ಯಾರೀಸ್ ಅವರು, ಮಾಹಿತಿ ಹಕ್ಕು ಅಧಿನಿಯಮ ಕಾಯ್ದೆ ಜಾರಿಯಾಗಿ 20 ವರ್ಷ ಪೂರೈಸಿದ್ದು, ಸಮಾಜವನ್ನು ಉತ್ತಮ ರೀತಿಯಲ್ಲಿ ತೆಗೆದುಕೊಂಡು ಹೋಗಲು ಮಾಹಿತಿ ಹಕ್ಕು ಅಧಿನಿಯಮವು ಬಹಳ ಪ್ರಮುಖವಾದುದು. ಸಾರ್ವಜನಿಕರಿಗೆ ಉಪಯೋಗವಾಗಲಿ ಎಂದು ಜಾರಿಗೊಳಿಸಿರುವ ಈ ಕಾಯ್ದೆಯಿಂದ ಉಪಯೋಗ ಪಡೆದವರು ಇದ್ದಾರೆ. ದುರುಪಯೋಗ ಪಡಿಸಿಕೊಂಡವರು ಇದ್ದಾರೆ. ಕೆಲವೊಂದು ಕಡೆ ವೈಯಕ್ತಿಕವಾಗಿ ಒಬ್ಬರೆ 100, 200 ಪ್ರಶ್ನೆ ಹಾಕುತ್ತಿದ್ದಾರೆ. ಇದರಿಂದ ಸರ್ಕಾರಿ ಕಚೇರಿಗಳಲ್ಲಿ ಕೆಲಸ ಮಾಡಲು ಆಗುತ್ತಿಲ್ಲ. ನಮ್ಮಲ್ಲಿ ಎಲ್ಲರೂ ಸಮಾನರು. ಒಳ್ಳೆಯ ರೀತಿಯಲ್ಲಿ ಸಮಾಜ ಕಟ್ಟುವ ಕೆಲಸ ಮಾಡಬೇಕು. ಮಾಹಿತಿ ಹಕ್ಕಿನಿಂದ ಸಮಾಜಕ್ಕೆ ಒಳ್ಳೆಯದಾಗಬೇಕು. ಕೆಳಮಟ್ಟದವರಿಗೆ ಹಕ್ಕನ್ನು ಕೊಡಿಸಲು ಉಪಯೋಗವಾಗಬೇಕು. ಎಲ್ಲಾ ಸರ್ಕಾರಿ ಕಚೇರಿಗಳು ದಾಖಲೆಗಳನ್ನು ಡಿಜಿಟಲೀಕರಣ ಮಾಡಿ ದಾಖಲೆಗಳನ್ನು ಅಪ್ಲೋಡ್ ಮಾಡಬೇಕು ಎಂದರು. ಕರ್ನಾಟಕ ಮಾಹಿತಿ ಆಯೋಗದ ರಾಜ್ಯ ಮುಖ್ಯ ಮಾಹಿತಿ ಆಯುಕ್ತರಾದ ಆಶಿತ್ ಮೋಹನ್ ಪ್ರಸಾದ್ ಅವರು ಮಾತನಾಡಿದರು.

ಕಾರ್ಯಕ್ರಮದಲ್ಲಿ ಕರ್ನಾಟಕ ಮಾಹಿತಿ ಆಯೋಗದ ರಾಜ್ಯ ಮಾಹಿತಿ ಆಯುಕ್ತರುಗಳಾದ ಕೆ. ರಾಮನ್, ಎಸ್. ರಾಜಶೇಖರ, ಡಾ. ಹರೀಶ್ ಕುಮಾರ್, ಕೆ. ಬದ್ರುದ್ದೀನ್, ನಾರಾಯಣ ಜಿ. ಚನ್ನಾಳ್, ರುದ್ರಣ್ಣ ಹರ್ತಿಕೋಟೆ, ಡಾ. ಬಿ. ಆರ್. ಮಮತ ಹಾಗೂ ಕರ್ನಾಟಕ ಮಾಹಿತಿ ಆಯೋಗದ ಕಾರ್ಯದರ್ಶಿಗಳಾದ ಸುಷಮಾ ಗೋಡಬೋಲೆ ಹಾಗೂ ಮಾಹಿತಿ ಆಯೋಗದ ನಿವೃತ್ತ ಮಾಹಿತಿ ಆಯುಕ್ತರು ಉಪಸ್ಥಿತರಿದ್ದರು.

## ಇಂದು ಜಿಲ್ಲಾ ಮಟ್ಟದ ಯುವಜನೋತ್ಸವ

**ಬಾಗಲಕೋಟೆ:** ಜಿಲ್ಲಾಡಳಿತ, ಜಿಲ್ಲಾ ಪಂಚಾಯತ, ಯುವ ಸಬಲೀಕರಣ ಮತ್ತು ಕ್ರೀಡಾ ಇಲಾಖೆ ಹಾಗೂ ಸರ್ಕಾರಿ ಪ್ರಥಮ ದರ್ಜೆ ಕಾಲೇಜು ನವನಗರ– ಬಾಗಲಕೋಟೆ ಇವರ ಸಂಯುಕ್ತ ಆಶ್ರಯದಲ್ಲಿ ಜಿಲ್ಲಾ ಮಟ್ಟದ ಯುವಜನೋತ್ಸವ ಉದ್ಘಾಟನಾ ಸಮಾರಂಭ ಅಕ್ಟೋಬರ 15 ರಂದು ಬೆಳಿಗ್ಗೆ 10 ಗಂಟೆಗೆ ನವನಗರದ ಸರ್ಕಾರಿ ಪ್ರಥಮ ದರ್ಜೆ ಕಾಲೇಜಿನಲ್ಲಿ ಹಮ್ಮಿಕೊಳ್ಳಲಾಗಿದೆ.ಅಬಕಾರಿ ಹಾಗೂ ಜಿಲ್ಲಾ ಉಸ್ತುವಾರಿ ಸಚಿವ ಆರ್.ಬಿ.ತಿಮ್ಮಾಪೂರ ಕಾರ್ಯಕ್ರಮವನ್ನು ಉದ್ಘಾಟಿಸಲಿದ್ದು, ಅಧ್ಯಕ್ಷತೆಯನ್ನು ಶಾಸಕ ಹಾಗೂ ಬಿಟಿಡಿಎ ಅಧ್ಯಕ್ಷ ಎಚ್.ವಾಯ್.ಮೇಟಿ ವಹಿಸಲಿದ್ದಾರೆ. ಮುಖ್ಯ ಅತಿಥಿಗಳಾಗಿ ವಿಧಾನ ಪರಿಷತ್ ಶಾಸಕ ಹಾಗೂ ನವದೆಹಲಿಯ ಕರ್ನಾಟಕ ವಿಶೇಷ ಪ್ರತಿನಿಧಿ–2 ಪ್ರಕಾಶ ಹುಕ್ಕೇರಿ, ಬೀಳಗಿ ಶಾಸಕ ಹಾಗೂ ಹಟ್ಟಿ ಚಿನ್ನದ ಗಣಿ ನಿಯಮಿತದ ಅಧ್ಯಕ್ಷ ಜೆ.ಟಿ.ಪಾಟೀಲ, ಹುನಗುಂದ ಶಾಸಕ ಹಾಗೂ ರಾಜ್ಯ ವೀರಶೈವ ಲಿಂಗಾಯತ ಅಭಿವೃದ್ಧಿ ನಿಗಮದ ಅಧ್ಯಕ್ಷ ವಿಜಯಾನಂದ ಕಾಶಪ್ಪನವರ, ಸಂಸದ ಪಿ.ಸಿ.ಗದ್ದಿಗೌಡರ, ರಾಜ್ಯಸಭಾ ಸದಸ್ಯ ನಾರಾಯಣಸಾ ಭಾಂಡಗೆ ಸೇರಿದಂತೆ ವಿಧಾನ ಸಭೆ, ವಿಧಾನ ಪರಿಷತ್ ಶಾಸಕರು, ಹಾಗೂ ಇತರೆ ಗಣ್ಯಮಾನ್ಯರು ಆಗಮಿಸಲಿದ್ದಾರೆ.

## ಮಕ್ಕಳ ಪ್ರಶಸ್ತಿಗೆ ಅರ್ಜಿ ಆಹ್ವಾನ

**ಬಾಗಲಕೋಟೆ:** ಮಹಿಳಾ ಮತ್ತು ಮಕ್ಕಳ ಅಭಿವೃದ್ಧಿ ಇಲಾಖೆ ವತಿಯಿಂದ 06 ರಿಂದ 18 ವರ್ಷದೊಳಗಿನ ಮಕ್ಕಳು ತಮ್ಮ ಪ್ರಾಣದ ಹಂಗನ್ನು ತೊರೆದು ಹಾಗೂ ಸಮಯಪ್ರಜ್ಞೆಯಿಂದ ಇತರರ ಪ್ರಾಣದ ರಕ್ಷಣೆಗಾಗಿ ಬಾಲಕರಿಗೆ ಹೊಯ್ಸಳ ಮತ್ತು ಬಾಲಕಿಯರಿಗೆ ಕೆಳದಿ ಚೆನ್ನಮ್ಮ ಪ್ರಶಸ್ತಿಯನ್ನು ಮಕ್ಕಳ ದಿನಾಚರಣೆ ಪ್ರಧಾನ ಮಾಡಲಾಗುತ್ತಿದ್ದು, ಅರ್ಹರಿಂದ ಅರ್ಜಿ ಆಹ್ವಾನಿಸಲಾಗಿದೆ. ಪ್ರಶಸ್ತಿಗೆ ಆಯ್ಕೆಯಾದ ಮಕ್ಕಳಿಗೆ ತಲಾ ರೂ.10,000/–ಗಳ ನಗದು ಬಹುಮಾನ ಮತ್ತು ಪ್ರಶಸ್ತಿ ಪತ್ರ ಒಳಗೊಂಡಿರುತ್ತದೆ. ಇದೇ ಸಂದರ್ಭದಲ್ಲಿ ಮಕ್ಕಳ ಕಲ್ಯಾಣ ಕ್ಷೇತ್ರದಲ್ಲಿ ಕನಿಷ್ಠ 05 ವರ್ಷಗಳ ಕಾಲ ಅತ್ಯುತ್ತಮ ಸೇವೆ ಸಲ್ಲಿಸಿದ ವ್ಯಕ್ತಿಗಳಿಗೆ ತಲಾ ರೂ.25,000/–ಗಳ ನಗದು ಬಹುಮಾನ ಮತ್ತು ಪ್ರಶಸ್ತಿ ಪತ್ರ ಹಾಗೂ ಸಂಸ್ಥೆಗಳಿಗೆ 01 ಲಕ್ಷ ರೂ. ನಗದು ಬಹುಮಾನ ಮತ್ತು ಪ್ರಶಸ್ತಿ ಪತ್ರ ಪ್ರಧಾನ ಮಾಡಲಾಗುವುದು. 2025ನೇ ಸಾಲಿನ ಪ್ರಶಸ್ತಿಗಾಗಿ ನಿಗದಿಪಡಿಸಿದ ಅರ್ಜಿಗಳನ್ನು ಉಪನಿರ್ದೇಶಕರ ಕಛೇರಿ, ಮಹಿಳಾ ಮತ್ತು ಮಕ್ಕಳ ಅಭಿವೃದ್ಧಿ ಇಲಾಖೆ, ಕೊಠಡಿ ಸಂಖ್ಯೆ–209, ಜಿಲ್ಲಾಡಳಿತ ಭವನ, ನವನಗರ, ಬಾಗಲಕೋಟೆ ಇವರಿಂದ ಪಡೆದು ಭರ್ತಿ ಮಾಡಿ ಅಕ್ಟೋಬರ 18 ರೊಳಗಾಗಿ ಸಲ್ಲಿಸಬೇಕು ಎಂದು ಪ್ರಕಟಣೆ ಮೂಲಕ ತಿಳಿಸಿದ್ದಾರೆ.

## ಮತದಾರರ ಪಟ್ಟಿಗೆ ಹೆಸರು ನೊಂದಾಯಿಸಲು ನವೆಂಬರ್ 6 ಕೊನೆ

**ಕಾರವಾರ:** ಕರ್ನಾಟಕ ಪಶ್ಚಿಮ ಪದವೀಧರ ಕ್ಷೇತ್ರದ ಮತದಾರರ ಪಟ್ಟಿ ತಯಾರಿಸಲು ಮತದಾರರ ನೋಂದಣಾಧಿಕಾರಿಗಳು, ಕರ್ನಾಟಕ ಪಶ್ಚಿಮ ಪದವೀಧರರ ಮತಕ್ಷೇತ್ರ ಹಾಗೂ ಪ್ರಾದೇಶಿಕ ಆಯುಕ್ತರ ಬೆಳಗಾವಿ ರವರು, ಸೆಪ್ಟಂಬರ್ 30 ರಂದು ಪ್ರಕಟಿಸಲಾದ ಸೂಚನೆಯಲ್ಲಿ ಸಂಬಂಧಿಸಿದ ಪದವೀಧರರ ಮತಕ್ಷೇತದ ಮತದಾರರ ಪಟ್ಟಿಯಲ್ಲಿ ಹೆಸರನ್ನು ನೋಂದಾಯಿಸಿಕೊಳ್ಳಲು ಅರ್ಹರಿರುವ ಪ್ರತಿಯೊಬ್ಬ ವ್ಯಕ್ತಿಯು ಮತದಾರರ ನೋಂದಣಿ ನಿಯಮಗಳು ಮತ್ತು ನಮೂನೆ–18 ರಲ್ಲಿ ಅರ್ಜಿಯನ್ನು 6ನೇ ನವೆಂಬರ್, 2025 ಅಥವಾ ಅದಕ್ಕೂ ಮೊದಲು ಮತದಾರರ ನೋಂದಣಾಧಿಕಾರಿಗಳ/ ಸಂಬಂಧಪಟ್ಟ ಸಹಾಯಕ ಮತದಾರರ ನೋಂದಣಾಧಿಕಾರಿಗಳ/ ನಿಯೋಜಿತ ಅಧಿಕಾರಿಗಳ ಕಚೇರಿಗೆ ಕಳುಹಿಸಲು ಅಥವಾ ತಲುಪಿಸಲು ತಿಳಿಸಲಾಗಿತ್ತು. ಅರ್ಹ ಮತದಾರರು ಇದುವರೆಗೂ ತಮ್ಮ ಹೆಸರನ್ನು ಸೇರಿಸದೇ ಇದ್ದಲ್ಲಿ ನಿಗದಿತ ನಮೂನೆ 18 ರಲ್ಲಿ ನವೆಂಬರ್ 6 ರ ಒಳಗೆ (ಅಂದರೆ ಅರ್ಜಿ ಸಲ್ಲಿಸುವ ಕೊನೆಯ ದಿನಾಂಕ) ಅಥವಾ ಅದಕ್ಕೂ ಮುಂಚೆ ಅರ್ಜಿಗಳನ್ನು ಸಲ್ಲಿಸಬಹುದಾಗಿದ್ದು, ವಿವರಗಳನ್ನು ಮುಖ್ಯ ಚುನಾವಣಾಧಿಕಾರಿ, ಕರ್ನಾಟಕ ಇವರ ವೆಬ್ಸೈಟ್ ವಿಳಾಸ: www.ceokarnataka.kar.nic.in ರಲ್ಲಿ ಸಹ ವೀಕ್ಷಿಸಬಹುದಾಗಿದೆ ಎಂದು ಮತದಾರರ ನೊಂದಣಾಧಿಕಾರಿಗಳು, ಕರ್ನಾಟಕ ಪಶ್ಚಿಮ ಪದವೀಧರರ ಮತಕ್ಷೇತ್ರ ಹಾಗೂ ಪ್ರಾದೇಶಿಕ ಆಯುಕ್ತರು ಬೆಳಗಾವಿ ರವರು ಪ್ರಕಟಣೆಯಲ್ಲಿ ತಿಳಿಸಿದ್ದಾರೆ.

## ಇಂದು ನಗರದ ವಿವಿಧೆಡೆ ವಿದ್ಯುತ ವ್ಯತ್ಯಯ

**ಬೆಳಗಾವಿ:** ಹು.ವಿ.ಸ.ಕಂ.ನಿ ವತಿಯಿಂದ ಇತರೆ ತುರ್ತು ನಿರ್ವಹಣಾ ಕಾರ್ಯಗಳನ್ನು ಕೈಗೊಳ್ಳುತ್ತಿರುವುದರಿಂದ 33 ಕೆ.ವ್ಹಿ ಹಿಂಡಲಗಾ ಉಪಕೇಂದ್ರದಿಂದ ಸರಬರಾಜು ಆಗುವ ಹಿಂಡಲಗಾ ಪಂಪ್‌ಹೌಸ್, ಗಣೇಶಪೂರ, ಹಿಂಡಲಗಾ, ಮನ್ನೂರ, ಸರಸ್ವತಿ ನಗರ, ಲಕ್ಷ್ಮೀ ನಗರ, ವಿಜಯ ನಗರ, ಡಿಫೆನ್ಸ್, ಕಾಲನಿ, ಕ್ರಾಂತಿ ನಗರ, ಮಾಸ್ತಿ ನಗರ, ಶಿವಂ ನಗರ, ಗೋಜಗಾ ಹಾಗೂ ಅಂಬೇವಾಡಿ ಸುತ್ತ ಮುತ್ತಲಿನ ಗ್ರಾಮಗಳಿಗೆ ಹಾಗೂ ಸದರಿ ಗ್ರಾಮಗಳ ನೀರಾವರಿ ಪಂಪ್‌ಸೆಟ್‌ಗಳ ಏರಿಯಾಗಳಲ್ಲಿ ಅಕ್ಟೋಬರ, 15, 2025 ರಂದು ಸಂಜೆ 4 ಗಂಟೆವರೆಗೆ ವಿದ್ಯುತ ಸರಬರಾಜಿನಲ್ಲಿ ವ್ಯತ್ಯಯವಾಗಲಿದೆ ಎಂದು ಹು.ವಿ.ಸ.ಕಂ.ನಿ. ಕಾ ಮತ್ತು ಪಾ ಗ್ರಾಮೀಣ ವಿಭಾಗ ಕಾರ್ಯನಿರ್ವಾಹಕ ಇಂಜಿನೀಯರರು(ವಿ) ಪ್ರಕಟಣೆಯಲ್ಲಿ ತಿಳಿಸಿದ್ದಾರೆ.

### ನಂದಗಡ ವೀರಭೂಮಿಗೆ ಹಿಂದುಳಿದ ವರ್ಗಗಳ ಸಚಿವ ಶಿವರಾಜ ತಂಗಡಗಿ ಭೇಟಿ: ಮ್ಯೂಸಿಯಂ ಪರಿವೀಕ್ಷಣೆ

# ವೀರಭೂಮಿ ರಾಯಣ್ಣ ಮ್ಯೂಸಿಯಂ ಶೀಘ್ರ ಲೋಕಾರ್ಪಣೆ

**ಬೆಳಗಾವಿ:** ಖಾನಾಪೂರ ತಾಲೂಕಿನ ನಂದಗಡದಲ್ಲಿ ನಿರ್ಮಿಸಲಾಗಿರುವ "ವೀರಭೂಮಿ ಸಂಗೊಳ್ಳಿ ರಾಯಣ್ಣ ಮ್ಯೂಸಿಯಂ"ಗೆ ಮಂಗಳವಾರ (ಅ.14) ಹಿಂದುಳಿದ ವರ್ಗಗಳ ಕಲ್ಯಾಣ ಇಲಾಖೆ ಹಾಗೂ ಕನ್ನಡ ಮತ್ತು ಸಂಸ್ಕೃತಿ ಇಲಾಖೆಯ ಸಚಿವ ಶಿವರಾಜ ತಂಗಡಗಿ ಭೇಟಿ ನೀಡಿ ಪರಿಶೀಲಿಸಿದರು.

ನಂದಗಡ ಮ್ಯೂಸಿಯಂ ವೀರಭೂಮಿ, ವಸ್ತು ಸಂಗ್ರಹಾಲಯ, ಮ್ಯೂಸಿಯಂ ಮುಖ್ಯ ದ್ವಾರ, ಸಂಗೊಳ್ಳಿ ರಾಯಣ್ಣ ಸ್ಮರಣೀಯ ಪ್ರತಿಮೆಗಳು, ಸಾರ್ವಜನಿಕ ಪ್ರವೇಶದ ಟಿಕೆಟ್ ಕೌಂಟರ್, ಅಲ್ಪೋಪಹಾರ ಗೃಹ, ವಾಹನಗಳ ಪಾರ್ಕಿಂಗ್ ವ್ಯವಸ್ಥೆ, ಶೌಚಾಲಯ, ಕಂಪೌಂಡ, ದೀಪಾಲಂಕಾರ ಸೇರಿದಂತೆ ವಿವಿಧ ಕಾಮಗಾರಿಗಳನ್ನು ಪರಿಶೀಲಿಸಿ ಕಾಲಮಿತಿಯೊಳಗೆ ಪೂರ್ಣಗೊಳಿಸಲು ಸೂಚನೆ ನೀಡಿದರು.

ಇದೇ ವೇಳೆ ಸುದ್ದಿಗಾರರೊಂದಿಗೆ ಮಾತನಾಡಿದ ಸಚಿವ ಶಿವರಾಜ ತಂಗಡಗಿ ಸದ್ಯ ಪೂರ್ಣಗೊಂಡಿರುವ ಕಾಮಗಾರಿಗಳನ್ನು ಉದ್ಘಾಟನೆಗೊಳಿಸಿ ಇನ್ನೂ 28 ಕೋಟಿ ಅನುದಾನದಲ್ಲಿ ವಿವಿಧ ಕಾಮಗಾರಿಗಳನ್ನು ಕೈಗೆತ್ತಿಕೊಳ್ಳಲಾಗುವುದು. ಇನ್ನುಳಿದ ಕಾಮಗಾರಿಗಳ ಪ್ರಾರಂಭಿಸುವ ಕುರಿತು ಈಗಾಗಲೇ ಪ್ರಸ್ತಾವನೆ ಸಿದ್ಧವಿದ್ದು, ಮುಖ್ಯಮಂತ್ರಿಗಳ ಅಧ್ಯಕ್ಷತೆಯಲ್ಲಿ ಅನುಮೋದನೆ ಪಡೆದು ಕಾಮಗಾರಿಗಳಿಗೆ ಚಾಲನೆ ನೀಡಲಾಗುವುದು ಎಂದು ಹೇಳಿದರು.



ಯೋಜನೆಗಳಲ್ಲಿ ಕೆಲವು ಬದಲಾವಣೆಯಾಗುವ ಸಾಧ್ಯತೆ ಇರುವುದರಿಂದ ಅಕ್ಟೋಬರ್ 29ನೇ ತಾರೀಕು ಮಾನ್ಯ ಮುಖ್ಯಮಂತ್ರಿಗಳ ಅಧ್ಯಕ್ಷತೆಯಲ್ಲಿ ಸಭೆ ಕರೆಯಲಾಗಿದ್ದು, ಸಭೆಯಲ್ಲಿ ಚರ್ಚಿಸಿ ಅಂತಿಮ ತೀರ್ಮಾನ ತೆಗೆದುಕೊಳ್ಳುವುದು.

ನಂದಗಡದ ರಾಯಣ್ಣ ಮೂರ್ತಿಯ ಕೆಳಗಡೆ ಕೆರೆ ಇರುವುದರಿಂದ ಕೆರೆಗೆ ಊರಿನ ಚರಂಡಿ ನೀರು ಬರುತ್ತಿದೆ ಅದಕ್ಕೆ ತಡೆಗೋಡೆ ನಿರ್ಮಿಸಲು ಜಿಲ್ಲಾ ಪಂಚಾಯತ್ ಅನುದಾನದಲ್ಲಿ 2 ಕೋಟಿ ಅನುದಾನ ಕೋರಿ ಪ್ರಸ್ತಾವನೆ ಸಲ್ಲಿಸಲಾಗಿದೆ ಈಗಾಗಲೇ 50 ಲಕ್ಷ ಅನುದಾನ ಜಿ.ಪಂ ಸಿ.ಇ.ಓ ಕಾಯ್ದಿರಿಸಿದ್ದಾರೆ ಇದನ್ನು ಕೂಡ ಮುಖ್ಯಮಂತ್ರಿಗಳ ಗಮನಕ್ಕೆ ತರಲಾಗುವುದು ಎಂದು ಸಚಿವ ತಂಗಡಗಿ ತಿಳಿಸಿದರು.

ರಾಜ್ಯ ಗ್ಯಾರಂಟಿ ಯೋಜನೆಗಳ ಅನುಷ್ಠಾನ ಪ್ರಾಧಿಕಾರದ ಅಧ್ಯಕ್ಷರಾದ ಹೆಚ್.ಎಂ.ರೇವಣ್ಣ ಮಾತನಾಡಿ ರಾಯಣ್ಣನ ಶೌರ್ಯ ಭೂಮಿ ಸಂಗೊಳ್ಳಿಯಲ್ಲಿ ರಾಯಣ್ಣ ಜೀವನ ಚರಿತ್ರೆ ಸಾರುವ ಮೂರ್ತಿಗಳಿರುವ ರಾಕ್ ಗಾರ್ಡನ್ ನಿರ್ಮಾಣ ಮಾಡಲಾಗಿದ್ದು, ಸಾಕಷ್ಟು ಪ್ರೇಕ್ಷಕರನ್ನು ಸೆಳೆಯುತ್ತಿದೆ ಎಂದರು.

ಅದೇ ರೀತಿಯಲ್ಲಿ ದೇಶದಲ್ಲಿ ಉತ್ತಮ ಶಾಲೆಗಳಲ್ಲಿ ಸಂಗೊಳ್ಳಿಯ ಸೈನಿಕ ಶಾಲೆ ಕೂಡ ಒಂದಾಗಿದ್ದು, ಅತ್ಯುತ್ತಮ ಶೈಕ್ಷಣಿಕ ಗುಣಮಟ್ಟದ ಶಾಲೆ ನಿರ್ಮಾಣ ಮಾಡಲಾಗಿದೆ. ಸೈನಿಕ ಶಾಲೆ ಸಂಗೊಳ್ಳಿ ಭಾಗದ ಸಾಕಷ್ಟು ವಿದ್ಯಾರ್ಥಿಗಳಿಗೆ ಅನುಕೂಲವಾಗಿದೆ.

ಶಾಲೆಯ ಪ್ರವೇಶಕ್ಕೆ ಸ್ಥಳೀಯ ಮತ್ತು ರಾಜ್ಯದ ಮಕ್ಕಳಿಗೆ ಮೊದಲ ಆದ್ಯತೆ ನೀಡಬೇಕೆಂದು ಕೇಂದ್ರ ಸರ್ಕಾರಕ್ಕೆ ಪ್ರಸ್ತಾವನೆ ಸಲ್ಲಿಸಲಾಗಿದೆ. ಪಠ್ಯ, ಪಠ್ಯೇತರ, ಎನ್.ಸಿ.ಸಿ ಸೇರಿದಂತೆ ಸಾಕಷ್ಟು ಚಟುವಟಿಕೆಗಳನ್ನು ಶಾಲೆಯಲ್ಲಿ ಹಮ್ಮಿಕೊಳ್ಳುತ್ತಿದೆ ಎಂದು ಹೆಚ್.ಎಂ.ರೇವಣ್ಣ ಹೇಳಿದರು.

ರಾಯಣ್ಣನ ಸ್ಮರಣೀಯ ಸ್ಥಳಗಳು ಪ್ರವಾಸಿ ಸ್ಥಳವಾಗಬೇಕು ಎಂಬ ಯೋಜನೆಯಿಂದ ಸಾಕಷ್ಟು ಅಭಿವೃದ್ಧಿ ಕಾಮಗಾರಿಗಳನ್ನು ಕೈಗೆತ್ತಿಕೊಳ್ಳಲಾಗುತ್ತಿದೆ. ಬರುವ ದಿನಗಳಲ್ಲಿ ಶ್ರೀ ರೇಣುಕಾ ಯಲ್ಲಮ್ಮ ದೇವಸ್ಥಾನ, ಸಂಗೊಳ್ಳಿ ರಾಯಣ್ಣ ಮ್ಯೂಸಿಯಂ ಸೇರಿದಂತೆ ವಿವಿಧ ಪ್ರವಾಸಿ ತಾಣಗಳನ್ನು ಆಯ್ಕೆಮಾಡಿ ಪ್ಯಾಕೇಜ್ ಮೂಲಕ ಪ್ರವಾಸಿಗರಿಗೆ ಬಸ್ ಸೌಲಭ್ಯ ಕಲ್ಪಿಸುವ ಯೋಜನೆಯಿದೆ ಎಂದು ಹಿಂದುಳಿದ ವರ್ಗಗಳ ಕಲ್ಯಾಣ ಇಲಾಖೆ ಪ್ರಧಾನ ಕಾರ್ಯದರ್ಶಿಗಳು ತಿಳಿಸಿದರು.

ಈ ಸಂದರ್ಭದಲ್ಲಿ ಕರ್ನಾಟಕ ಕೃಷಿ ಬೆಲೆ ಆಯೋಗದ ಅಧ್ಯಕ್ಷ ಅಶೋಕ್ ದಳವಾಯಿ, ಜಿಲ್ಲಾ ಹಿಂದುಳಿದ ವರ್ಗಗಳ ಕಲ್ಯಾಣಾಧಿಕಾರಿ ಹರ್ಷ, ಖಾನಾಪೂರ ತಹಶೀಲ್ದಾರ್ ದುಂಡಪ್ಪ ಕೋಮಾರ ಸೇರಿದಂತೆ ವಿವಿಧ ಇಲಾಖೆಯ ಅಧಿಕಾರಿಗಳು ಹಾಜರಿದ್ದರು.

## ಪೂಜೆ, ಪ್ರಾರ್ಥನೆಗಳಿಂದ ಮನಸ್ಸು ಶುದ್ಧಿ: ಬಸ್ಸಾಪೂರ

**ಬೈಲಹೊಂಗಲ:** ನಿತ್ಯ ಜೀವನದಲ್ಲಿ ಮನಸ್ಸು ಸದಾ ಪ್ರಸನ್ನತೆಯಿಂದ ಕೂಡಿರಬೇಕಾದರೆ ಪೂಜೆ, ಪ್ರಾರ್ಥನೆಗಳ ಮೊರೆ ಹೋದಾಗ ಮಾತ್ರ ಸಾಧ್ಯವಾಗಲಿದೆ ಎಂದು ಪ್ರಧಾನ ದಿವಾಣಿ ನ್ಯಾಯಾಧೀಶ ರೋಹಿಣಿ ಬಸ್ಸಾಪೂರ ಹೇಳಿದರು.

ಅವರು ಪಟ್ಟಣದ ಕೋರ್ಟ ಆವರಣದಲ್ಲಿ ಮಂಗಳವಾರ ನಡೆದ ಶ್ರೀ ಕರೆಮ್ಮಾದೇವಿ ದೇವಸ್ಥಾನದ ವಾರ್ಷಿಕ ಜಾತ್ರಾ ಮಹೋತ್ಸವದಲ್ಲಿ ಪಾಲ್ಗೊಂಡು ಶ್ರೀದೇವಿಗೆ ಪೂಜಾ ಕಂಕೈರ್ಯಗಳನ್ನು ನೆರವೇರಿಸಿ ಮಾತನಾಡಿ, ಜಾತ್ರಾ ಮಹೋತ್ಸವಗಳು ಜನರ ಭಾವನೆಗಳನ್ನು ಬೆಸೆದು ಭಾವೈಕ್ಯತೆ ಮೂಡಿಸಲಿದ್ದು ಪ್ರತಿಯೊಬ್ಬರು ಅಧ್ಯಾತ್ಮಿಕತೆಗೆ ಹೆಚ್ಚಿನ ಮಹತ್ವ ನೀಡಬೇಕೆಂದರು.

ಹಿರಿಯ ದಿವಾಣಿ ನ್ಯಾಯಾಧೀಶ ರವಿ ಚವ್ಹಾನ ಶ್ರೀ ಕರೆಮ್ಮಾದೇವಿಗೆ ಪೂಜೆ ಸಲ್ಲಿಸಿ ಮಾತನಾಡಿ, ಬೈಲಹೊಂಗಲದ ನ್ಯಾಯಾಲಯದ ಆವರಣದಲ್ಲಿರುವ ಶ್ರೀ ಕರೆಮ್ಮಾದೇವಿಯ ಉತ್ಸವವನ್ನು ಎಲ್ಲ ನ್ಯಾಯಾಧೀಶರು ಒಕ್ಕಟ್ಟಿನಿಂದ ಕೈಗೊಂಡು ಸಮಾಜದಲ್ಲಿ ಧಾರ್ಮಿಕ, ಅಧ್ಯಾತ್ಮಿಕ, ಭಕ್ತಿ, ಸಾಂಸ್ಕ್ರತಿಕ ಕಾರ್ಯಗಳನ್ನು ಪ್ರತಿ ವರ್ಷ ಆಯೋಜಿಸಿ ಯಶಸ್ವಿಗೊಳಿಸುತ್ತಿರುವ ಕಾರ್ಯಕ್ಕೆ ಮೆಚ್ಚುಗೆ ವ್ಯಕ್ತಪಡಿಸಿದರು.

ಹೆಚ್ಚುವರಿ ದಿವಾಣಿ ನ್ಯಾಯಾಧೀಶ ಬಸವರಾಜ ನಾಯ್ಕ, ಮಾಜಿ ಶಾಸಕ ಡಾ. ವಿಶ್ವನಾಥ ಪಾಟೀಲ, ಪುರಸಭೆ ಅಧ್ಯಕ್ಷ ವಿಜಯ ಬೋಳಣ್ಣವರ, ಯುವ ಮುಖಂಡ ಬಸವರಾಜ ಕೌಜಲಗಿ, ಸಿಪಿಐ ಪ್ರಮೋದ ಯಲಿಗಾರ, ಸರಕಾರಿ ಅಭಿಯೋಜಕರಾದ ಗುರುನಾಥ ಶಿರೂರ, ಸರೋಜಿನಿ ಬಟಕುರ್ಕಿ, ನ್ಯಾಯವಾದಿಗಳ ಸಂಘದ ಅಧ್ಯಕ್ಷ ಎಂ.ಆರ್. ಮೆಳವಂಕಿ, ಉಪಾಧ್ಯಕ್ಷ ಎ.ಎಸ್.ಶಿದ್ರಾಮನಿ, ಪ್ರಧಾನ ಕಾರ್ಯದರ್ಶಿ ವ್ಹಿ.ಜಿ.ಕಟದಾಳ, ಸಹ ಕಾರ್ಯದರ್ಶಿ ವ್ಹಿ.ಸಿ.ಪೂಜೇರ, ಮಾಜಿ ಅಧ್ಯಕ್ಷ ಎಸ್.ಬಿ.ಆನಿಗೋಳ, ಹಿರಿಯ ನ್ಯಾಯವಾದಿ ಎಂ.ವಾಯ್.ಸೋಮಣ್ಣವರ, ಜಿ.ಬಿ.ಶೀಗಿಹಳ್ಳಿ, ಎಸ್.ಜಿ.ಬೂದಯ್ಯನವರ, ಎಸ್.ಎಂ.ಅಬ್ಬಾಯಿ, ಆಯ್.ಎಸ್.ಪಾಟೀಲ, ಬಸವರಾಜ ದೋತ್ರದ, ಅಥಣಿಯ ಚಿದಾನಂದ ಸಂಬೋಜಿ, ಎಸ್.ಜಿ.ಚಿಕ್ಕಮಠ, ಯು. ಕೆ.ಬುಲಾಕೆ ಉಪಸ್ಥಿತರಿದ್ದರು. ನ್ಯಾಯವಾದಿಗಳ ಸಂಘದ ಆಡಳಿತ ಮಂಡಳಿಯ ಸದಸ್ಯರು, ನ್ಯಾಯಾಲಯದ ಸಿಬ್ಬಂದಿ ವರ್ಗ, ಭಕ್ತರು ಜಾತ್ರಾ ಮಹೋತ್ಸವದಲ್ಲಿ ಪಾಲ್ಗೊಂಡಿದ್ದರು.

ವೇ.ಮೂ.ದಯಾನಂದ ಶಾಸ್ತ್ರಿ ಮುಪ್ಪೈನವರಮಠ, ಕಿರಣ ಕಲ್ಮಠ, ಶಶಾಂಕ್ ಶಿವಸಂಗಯ್ಯನವರಮಠ ಇವರಿಂದ ಹೋಮ, ಹವನ, ಪೂಜಾ ವಿಧಿ–ವಿಧಾನಗಳು ಜರುಗಿದವು.

ಶ್ರೀದೇವಿಗೆ ಮುತ್ತೈದೆಯರಿಂದ ಉಡಿ ತುಂಬುವ ಕಾರ್ಯ ನೆರವೇರಿತು. ಅನ್ನ ಪ್ರಸಾದ ಏರ್ಪಡಿಸಲಾಗಿತ್ತು. ಇದಕ್ಕೂ ಮುಂಚಿನ ದಿನ ಮಕ್ಕಳಿಂದ ಸಾಂಸ್ಕ್ರತಿಕ ಕಾರ್ಯಕ್ರಮ ಹಾಗೂ ವಿವಿಧ ಗ್ರಾಮದ ಭಜನಾ ತಂಡದವರಿಂದ ಭಜನೆಗಳು ಜರುಗಿದವು.



ಪಟ್ಟಣದ ನ್ಯಾಯಾಲಯದ ಆವರಣದಲ್ಲಿರುವ ಶ್ರೀ ಕರೆಮ್ಮಾದೇವಿ ದೇವಸ್ಥಾನದ ಜಾತ್ರಾ ಮಹೋತ್ಸವದಲ್ಲಿ ಗಣ್ಯರು ಶ್ರೀದೇವಿಗೆ ಪೂಜೆ ಸಲ್ಲಿಸಿದರು.

## ಆರ್‌ಎಸ್‌ಎಸ್ ಸಂಘಟನೆಯ 100ವರ್ಷದ ಸಂಭ್ರಮಾಚರಣೆ

**ಯರಗಟ್ಟಿ:** ಸಮೀಪದ ತಲ್ಲೂರ ಗ್ರಾಮ, ಪಟ್ಟಣ, ನಗರ ಸೇರಿದಂತೆ ದೇಶದ ಪ್ರತಿಯೊಬ್ಬ ಪ್ರಜೆಯೂ ನಿಸ್ವಾರ್ಥ ಮನೋಭಾವದಿಂದ ಸಂಘಟನಾತ್ಮಕವಾಗಿ ಸೇವೆ ಸಲ್ಲಿಸುವ ಜಗತ್ತಿನ ಏಕೈಕ ಸಂಘಟನೆ ಎಂದರೆ ಅದು ರಾಷ್ಟ್ರೀಯ ಸ್ವಯಂ ಸೇವಕರ ಸಂಘ ಎಂದು ಮುಖ್ಯವಕ್ತಾರ ನರಸಿಂಹ ಕುಲಕರ್ಣಿ ಹೇಳಿದರು. ಗ್ರಾಮದ ಶ್ರೀ ಹಾದಿ ಬಸವೇಶ್ವರ ದೇವಸ್ಥಾನದ ಸಭಾ ಮಂಟಪದಲ್ಲಿ ಸೋಮವಾರ ಆರ್‌ಎಸ್‌ಎಸ್ ಸಂಘಟನೆಯ ನೂರು ವರ್ಷದ ಸಂಭ್ರಮಾಚರಣೆ ನಿಮಿತ್ಯ ಹಮ್ಮಿಕೊಂಡಿದ್ದ ವಿಜಯ ದಶಮಿ ಉತ್ಸವ ಕಾರ್ಯಕ್ರಮದಲ್ಲಿ ಮಾತನಾಡಿ. ಡಾ.ಹೆಡಗೇವಾರ್ ಅವರು 1925ರಲ್ಲಿ ಹಿಂದುತ್ವ ರಕ್ಷಣೆ ಮತ್ತು ಸಮಾಜದ ಏಕತೆಯ ಮೂಲಕ ಭಾರತಕ್ಕೆ ಜಾಗತಿಕ ಸ್ಥಾನಮಾನ ತಂದುಕೊಡುವ ದೂರದೃಷ್ಟಿಯೊಂದಿಗೆ ಆರ್‌ಎಸ್‌ಎಸ್ ಅನ್ನು ಸ್ಥಾಪಿಸಿದರು ಎಂದರು.

ಮುಖಂಡ ವಿಕ್ರಮಕುಮಾರ ದೇಸಾಯಿ ಮಾತನಾಡಿ, ಜಾತಿ ಬೇಧ ಮರೆತು ನಾವೆಲ್ಲ ಒಂದು ಗೂಡಬೇಕು. ಈ ಐಕ್ಯತೆಯೇ ನಮ್ಮ ರಾಷ್ಟ್ರದ ಅತಿ ದೊಡ್ಡ ಶಕ್ತಿ ಎಂದರು. ತೊರಗಲ್ಲಮಠದ ದೀಪಕ್‌ಸ್ವಾಮಿ ಸಾನಿಧ್ಯ ವಹಿಸಿದ್ದರು, ಪ್ರಸನ್ನ ಶಾಸ್ತ್ರಿ, ಶಂಕರಗೌಡ ಪಾಟೀಲ, ಬಿ.ಬಿ.ಅಣ್ಣಿಗೇರಿ, ಸಂತೋಶ ವಾಲಿ, ಗೋವಿಂದ ಪೂಜೇರ, ಪ್ರವೀಣ ಬೆಣ್ಣಿ, ಮನೋಜ ತುಪ್ಪದ, ಸಂಕೇತ ದೇಸಾಯಿ, ಬಸು ನಾಯ್ಕರ ಸೇರಿದಂತೆ ತಾಲೂಕಿನ ಗಣವೇಷಾದಾರಿಗಳು ಇದ್ದರು.





ಮಲಪ್ರಭಾ– ಘಟಪ್ರಭಾ ಅಚ್ಚುಕಟ್ಟು ಪ್ರದೇಶಾಭಿವೃದ್ಧಿ ನಿಗಮ (ಕಾಡಾ) ದ ಅಧ್ಯಕ್ಷರಾಗಿ ಯುವರಾಜ ಕದಂ ಸೋಮವಾರ ಅಧಿಕಾರ ಸ್ವೀಕರಿಸಿದರು. ಸಚಿವರಾದ ಸತೀಶ್ ಜಾರಕಿಹೊಳಿ, ಲಕ್ಷ್ಮೀ ಹೆಬ್ಬಾಳಕರ್, ವಿಧಾನ ಪರಿಷತ್ ಸದಸ್ಯ ಚನ್ನರಾಜ ಹಟ್ಟಿಹೊಳಿ, ಶಾಸಕರಾದ ಆಸೀಫ್ ಸೇಠ್, ರಾಜು ಕಾಗೆ, ಮಾಜಿ ಶಾಸಕ ಶಾಮ್ ಘಾಟಗೆ, ಕೆಡಿಪಿ ಸದಸ್ಯ ಬಸವರಾಜ ಮ್ಯಾಗೋಟಿ ಮೊದಲಾದವರಿದ್ದರು.

## ಕಲ್ಲಿನ ಕ್ವಾರಿ ಪರವಾನಿಗೆ ರದ್ದು ಮಾಡುವುಂತೆ ಅಗ್ರಹ



**ಕೋಲಾರ್:** ತಾಲೂಕಿನ ಸಮೀಪದಲ್ಲಿ ಸರ್ವೇ ನಂಬರ್ 708 ರ 708/13 ಮತ್ತು 708/14 ರಲ್ಲಿ ಈಗಾಗಲೇ ತಗ್ಗು ತೋಡಿ ಕಲ್ಲು ಗಣಿಗಾರಿಕೆ ನಡೆಸುತ್ತಿದ್ದೂ ಅದನ್ನು ಬಂದ್ ಮಾಡುವಂತೆ ಕಳೆದ್ ವರ್ಷ ಜಿಲ್ಲಾಧಿಕಾರಿಗಳು ಹಾಗೂ ಸಂಭಂದಿಸಿದ ಅಧಿಕಾರಿಗಳಿಗೆ ಮನವಿ ಸಲ್ಲಿಸಿರುವ ಹಿನ್ನಲೆಯಲ್ಲಿ ಅಧಿಕೃತವಾಗಿ ಬಂದ್ ಮಾಡಿದ್ದರು,

ಆದರೆ ಈಗ ಮತ್ತೆ ಇದೆ ಭೂಮಿಗಳಿಗನ್ನು ಅಭಿವೃದ್ಧಿ ಮಾಡಲು ಅಧಿಕಾರಿಗಳು ಅನುಮತಿ ನೀಡುತ್ತಿದ್ದಾರೆ ಎಂಭ ಮಾಹಿತಿ ಬಂದಿರುವ ಹಿನ್ನಲೆಯಲ್ಲೇ ತಹಸೀಲ್ದಾರ್ ಅವರಿಗೆ ಮನವಿ ಸಲ್ಲಿಸಿ ಯಾವುದೇ ಕಾರಣಕ್ಕೂ ಅನುಮತಿ ನೀಡಬಾರದು ಎಂದು ಕರ್ನಾಟಕ ರಾಜ್ಯ ರೈತ ಸಂಘ ಹಾಗೂ ಹಸಿರು ಸೇನೆಯ ತಾಲೂಕಾ ಅಧ್ಯಕ್ಷರಾದ ಸೋಮು ಬಿರಾದಾರ ಅವರು ನೇತೃತ್ವದಲ್ಲಿ ಮನವಿ ಸಲ್ಲಿಸಲಾಯಿತು. ಕಲ್ಲಿನ ಕ್ವಾರಿ ಪ್ರಾರಂಭ ಮಾಡಲು ಅನುಮತಿ ಕೊಡಬಾರದು ಇದರ ಅಕ್ಕಪಕ್ಕದಲ್ಲಿ ನೀರಾವರಿ ಜಮೀನುಗಳಿದ್ದು, ಸಮೀಪದಲ್ಲಿ ಅನೇಕ ಕುಟುಂಬಗಳು ಪುನರ್ ವಸ್ತಿಯಿಂದಾಗಿ ಗುಡಿಸಲಿನಲ್ಲಿ ಕಳೆದ ಹಲವಾರು ವರ್ಷಗಳಿಂದ ವಾಸ ಮಾಡುತ್ತಿದ್ದು ಮಕ್ಕಳು ವೃದ್ಧರು ಸೇರಿದಂತೆ ಎಲ್ಲರೂ ಅಲ್ಲಿರುವುದರಿಂದ ಕಳ್ಳು ಬ್ಲಾಸ್ಟ್ ಮಾಡುವುದರಿಂದ ಅವರ ಮೇಲೆ ಕಲ್ಲುಗಳ ಬಿದ್ದು ಜೀವ ಅಪಾಯ ಆಗೋದ್ರಲ್ಲಿ ಸಂದೇಹವಿಲ್ಲ ಆದ್ದರಿಂದ ಯಾವುದೇ ಕಾರಣಕ್ಕೂ ಇಲ್ಲಿ ಕಲ್ಲಿನ ಕ್ವಾರಿ ಮಾಡಬಾರದೆಂದು ಈ ಮೂಲಕ ಮತ್ತೊಮ್ಮೆ ಅಗ್ರಿಸುತ್ತೇವೆ

ಒಂದು ವೇಳೆ ಮಾನವೀಯತೆ ಮೀರಿ ನೀವು ಏನಾದರೂ ಸಂಬಂಧಿಸಿದ ಅಧಿಕಾರಿಗಳು ಅನುಮತಿ ನೀಡಿದರೆ ಅಕ್ಕಪಕ್ಕದ ಎಲ್ಲ ರೈತರು ದನ ಕರ ಕುರಿ ಸಮೇತವಾಗಿ ತಹಶೀಲ್ದಾರ್ ಕಚೇರಿ ಮುಂದೆ ಉಗ್ರವಾದ ಹೋರಾಟ ಮಾಡಲಾಗುವುದೆಂದು ಈ ಮೂಲಕ ಅಗ್ರಹಿಸಲಾಯಿತು

## 'ಜಿಲ್ಲಾಧ್ಯಕ್ಷನಾಗಿ ಪ್ರಾಮಾಣಿಕ ಸೇವೆ ಮಾಡುತ್ತೇನೆ'



ನಗರದ ರಮಾನಿವಾಸ ಸಭಾಭವನದಲ್ಲಿ ಮಂಗಳವಾರ ನಡೆದ ಪತ್ರಿಕಾಗೋಷ್ಠಿಯಲ್ಲಿ ಭಾರತ ರಾಷ್ಟ್ರೀಯ ಕಾಂಗ್ರೆಸ್ ಟ್ರೇಡ್ ಯೂನಿಯನ್ ಜಿಲ್ಲಾಧ್ಯಕ್ಷ ತೌಫೀಕ ಪಾರತನಳ್ಳಿ ಮಾತನಾಡಿದರು.

**ಜಮಖಂಡಿ:** ಕಾಯಕ ಸೇವೆಯಲ್ಲಿ ರೈತ ಮತ್ತು ಕಾರ್ಮಿಕರು ದೇಶದ ಎರಡು ಕಣ್ಣುಗಳಿದ್ದಂತೆ. ಜಿಲ್ಲೆಯಲ್ಲಿ ಕಾರ್ಮಿಕರಿಗೆ ಯಾವುದೇ ತೊಂದರೆ ಎದುರಾದಲ್ಲಿ ಅವರ ಸಂಕಷ್ಟಕ್ಕೆ ಸ್ಪಂದಿಸುತ್ತೇನೆ ಎಂದು ಭಾರತ ರಾಷ್ಟ್ರೀಯ ಕಾಂಗ್ರೆಸ್ ಟ್ರೇಡ್ ಯೂನಿಯನ್ ಜಿಲ್ಲಾಧ್ಯಕ್ಷ ತೌಫೀಕ ಪಾರತನಳ್ಳಿ ಹೇಳಿದರು.

ನಗರದ ರಮಾನಿವಾಸ ಸಭಾಭವನದಲ್ಲಿ ಮಂಗಳವಾರ ನಡೆದ ಪತ್ರಿಕಾಗೋಷ್ಠಿಯಲ್ಲಿ ಮಾತನಾಡಿದ ಅವರು, ನೆಹರು ಅವರ ಕಾಲದಿಂದ ಕಾಂಗ್ರೆಸ್ ಟ್ರೇಡ್ ಯೂನಿಯನ್ ಮೂಲಕ ಕೆಲಸ ನಿರ್ವಹಿಸುತ್ತಿದೆ. ಬಾಗಲಕೋಟ ಜಿಲ್ಲೆಯಲ್ಲಿ ಕಾಂಗ್ರೆಸ್ ಬಲಿಷ್ಠ ಪಕ್ಷವಾಗಿದ್ದು, ಹೊಸದಾಗಿ ನೇಮಕಗೊಂಡಿರುವ ಟ್ರೇಡ್ ಯೂನಿಯನ್ ವಿಭಾಗದ ಮೂಲಕ ಮತ್ತಷ್ಟು ಗಟ್ಟಿಗೊಳಿಸುವ ಕೆಲಸ ಮಾಡುತ್ತೇನೆ ಎಂದರು.

ಜಿಲ್ಲೆಯಲ್ಲಿ ಕಾರ್ಮಿಕರ ಸಮಸ್ಯೆಗಳನ್ನು ತಮ್ಮ ಗಮನಕ್ಕೆ ತಂದಲ್ಲಿ ಅಥವಾ ಫೋನ ಮೂಲಕ ಮಾಹಿತಿ ನೀಡಿದಲ್ಲಿ ಸ್ಪಂದಿಸುವ ಮೂಲಕ ನೊಂದವರಿಗೆ ಸಹಕಾರ ನೀಡುತ್ತೇನೆ. ಅನ್ಯಾಯದಲ್ಲಿ ಸಿಲುಕಿದ ಕಾರ್ಮಿಕರಿಗೆ ಅಥವಾ ಕಾರ್ಮಿಕ ಕುಟುಂಬಗಳಿಗೆ ನ್ಯಾಯ ನೀಡುವ ಕೆಲಸ ಮಾಡುತ್ತೇನೆ. ಕಾಂಗ್ರೆಸ್ ಪಕ್ಷ ನೀಡಿರುವ ಹುದ್ದೆಯನ್ನು ಸಮರ್ಪಕವಾಗಿ ರೀತಿಯಲ್ಲಿ ನಿಭಾಯಿಸುವ ಮೂಲಕ ಜಿಲ್ಲಾಧ್ಯಕ್ಷನಾಗಿ ಪ್ರಾಮಾಣಿಕ ಸೇವೆಯನ್ನು ಮಾಡುತ್ತೇನೆ. ಜಿಲ್ಲಯ ಹಾಲಿ ಮತ್ತು ಮಾಜಿ ಶಾಸಕರ, ಕಾಂಗ್ರೆಸ್ ಮುಖಂಡರ ಮಾರ್ಗದರ್ಶನದಲ್ಲಿ ಅತಿ ಶೀಘ್ರದಲ್ಲಿ ತಾಲೂಕ ಘಟಕಗಳಿಗೆ ಅಧ್ಯಕ್ಷ ಹಾಗೂ ಪದಾಧಿಕಾರಿಗಳ ನೇಮಕ ಮಾಡುತ್ತೇನೆ ಎಂದರು. ಮುಧೋಳದ ಹನುಮಂತ ತೇಲಿ ಮಾತನಾಡಿ, ಜಿಲ್ಲೆಯಲ್ಲಿ ಹೆಚ್ಚಿನ ಸಂಖ್ಯೆಯಲ್ಲಿ ಸಕ್ಕರೆ ಕಾರಖಾನೆಗಳು ಇರುವದಿಂದ ಕಾರ್ಮಿಕರ ಸಂಖ್ಯೆ ಹೆಚ್ಚಾಗಿದ್ದು, ನೂತನ ಜಿಲ್ಲಾಧ್ಯಕ್ಷ ತೌಫೀಕ ಪಾರತನಳ್ಳಿ ಯುವಕರಾಗಿದ್ದು, ತಮ್ಮ ಹುದ್ದೆಯನ್ನು ಪ್ರಾಮಾಣಿಕತೆಯಿಂದ ನಿರ್ವಹಿಸುವ ವಿಶ್ವಾಸ ನಮಗಿದೆ ಎಂದರು.

ಪತ್ರಿಕಾಗೋಷ್ಠಿಯಲ್ಲಿ ಡಿ.ಎಸ್.ಎಸ್. ರಾಜ್ಯ ಸಂಚಾಲಕ ಶ್ಯಾಮರಾವ ಘಾಟಗೆ, ನಗರಸಭೆ ಅಧ್ಯಕ್ಷ ಈಶ್ವರ ವಾಳೆನ್ನವರ, ಮಹೇಶ ಕೋಳಿ, ಅಬುಬಕರ ಕುಡಚಿ, ಯಲ್ಲಾಲಿಂಗ ಅಡಿಹುಡಿ, ಕುತುಬು ಹಳಿಂಗಳಿ, ಇಜಾಜ ಫೆಂಡಾರಿ, ಅಯಾಸ ಸೈಯ್ಯದ, ಸಾದ ಪಾರತನಳ್ಳಿ ಸಹಿತ ಹಲವರು ಇದ್ದರು.

## ಇಂದು ಪ್ರಚಾರ ಸಮಿತಿ ಪೂರ್ವಭಾವಿ ಸಭೆ

**ಬೆಳಗಾವಿ:** ಸ್ವಾತಂತ್ರ್ಯ ಹೋರಾಟದ ಬೆಳ್ಳಿಚುಕ್ಕಿ ವೀರರಾಣಿ ಕಿತ್ತೂರು ಚನ್ನಮ್ಮನವರ ಗೌರವಾರ್ಥವಾಗಿ ಇದೇ ಅಕ್ಟೋಬರ್ 23,24 ಹಾಗೂ 25ರಂದು ಕಿತ್ತೂರು ಉತ್ಸವ ಆಚರಿಸಲಾಗುತ್ತಿದ್ದು, ಉತ್ಸವದ ವ್ಯಾಪಕ ಪ್ರಚಾರಕ್ಕಾಗಿ ಪ್ರಚಾರ ಸಮಿತಿಯನ್ನು ರಚಿಸಲಾಗಿದೆ. ಸದರಿ ಪ್ರಚಾರ ಸಮಿತಿಯ ಪೂರ್ವಭಾವಿ ಸಭೆಯನ್ನು ದಿನಾಂಕ:15–10–2025 ರಂದು ಮುಂಜಾನೆ 3.30 ಗಂಟೆಗೆ ಡೊಂಬರಕೊಪ್ಪ ಪ್ರವಾಸಿ ಮಂದಿರದಲ್ಲಿ ಆಯೋಜಿಸಲಾಗಿರುತ್ತದೆ. ಸಮಿತಿಯ ಸರ್ವ ಸದಸ್ಯರು, ಕಿತ್ತೂರು ಕೇಂದ್ರ ಸ್ಥಾನದಲ್ಲಿ ಕಾರ್ಯನಿರ್ವಹಿಸುತ್ತಿರುವ ಪತ್ರಕರ್ತರು ಸದರಿ ಸಭೆಗೆ ಹಾಜರಾಗಿ ಅಗತ್ಯ ಸಲಹೆ– ಸೂಚನೆಗಳನ್ನು ನೀಡಬೇಕು ಎಂದು ವಾರ್ತಾ ಮತ್ತು ಸಾರ್ವಜನಿಕ ಸಂಪರ್ಕ ಇಲಾಖೆಯ ಉಪನಿರ್ದೇಶಕರು ಪ್ರಕಟಣೆಯಲ್ಲಿ ಕೋರಿದ್ದಾರೆ.

## ಅ.17 ರಂದು ನೇರ ನೇಮಕಾತಿ

**ಬೆಳಗಾವಿ:** ಜಿಲ್ಲಾ ಉದ್ಯೋಗ ವಿನಿಮಯ ಕೇಂದ್ರ ಇವರ ವತಿಯಿಂದ ಪಿಯುಸಿ ಹಾಗೂ ಪದವಿ ಅಭ್ಯರ್ಥಿಗಳಿಗಾಗಿ ಅಕ್ಟೋಬರ, 17, 2025 ರಂದು ಬೆಳಿಗ್ಗೆ 10.30 ರಿಂದ ಮದ್ಯಾಹ್ನ 2 ಗಂಟೆಯವರೆಗೆ ಬೆಳಗಾವಿಯ ಸುವರ್ಣ ವಿಧಾನಸೌಧದಲ್ಲಿರುವ ಜಿಲ್ಲಾ ಉದ್ಯೋಗ ವಿನಿಮಯ ಕಚೇರಿಯಲ್ಲಿ ಖಾಸಗಿ ಕಂಪನಿಗಳಿಂದ "ನೇರ ನೇಮಕಾತಿ" ಯನ್ನು ಆಯೋಜಿಸಲಾಗಿದೆ. ಆಸಕ್ತ ಅಭ್ಯರ್ಥಿಗಳು https://tinyurl.com/mrnx4vw9 ವೆಬ್‌ಸೈಟ್‌ನಲ್ಲಿ ತಮ್ಮ ಹೆಸರನ್ನು ನೋಂದಾಯಿಸಿ ಕೊಳ್ಳಬಹುದಾಗಿದೆ. ಹೆಚ್ಚಿನ ಮಾಹಿತಿಗಳಿಗಾಗಿ ದೂರವಾಣಿ ಸಂಖ್ಯೆ: 7975856566 ಗೆ ಸಂಪರ್ಕಿಸಬಹುದಾಗಿದೆ.



ಬೆಳಗಾವಿ: ವಿಧಾನ ಪರಿಷತ್ ಸದಸ್ಯ ಚನ್ನರಾಜ ಹಟ್ಟಿಹೊಳಿ ಅವರು ಡಿಸಿಸಿ ಬ್ಯಾಂಕ್ ನಿರ್ದೇಶಕರಾಗಿ ಅವಿರೋಧವಾಗಿ ಆಯ್ಕೆಯಾಗಿರುವ ಹಿನ್ನೆಲೆಯಲ್ಲಿ ಅವರ ನಿವಾಸದಲ್ಲಿ ಸಿಹಿ ಹಂಚಿ ಸಂಭ್ರಮಿಸಲಾಯಿತು. ಸಚಿವೆ ಲಕ್ಷ್ಮೀ ಹೆಬ್ಬಾಳಕರ್, ತಾಯಿ ಗಿರಿಜಾ ಹಟ್ಟಿಹೊಳಿ ಹಾಗೂ ಅಭಿಮಾನಿಗಳು ಇದ್ದರು.

## ದೀಪಾವಳಿ ಪ್ರಯುಕ್ತ ಹೆಚ್ಚುವರಿ ಬಸ್ ವ್ಯವಸ್ಥೆ

**ಕಾರವಾರ:** ಪ್ರಸಕ್ತ ಸಾಲಿನ ದೀಪಾವಳಿ ಹಬ್ಬದ ಪ್ರಯುಕ್ತ ಸಾರ್ವಜನಿಕರು ತಮ್ಮ ಸ್ವಂತ ಊರುಗಳಿಗೆ ತೆರಳುವುದರಿಂದ ವಾಯವ್ಯ ಕರ್ನಾಟಕ ರಸ್ತೆ ಸಾರಿಗೆ ಸಂಸ್ಥೆ ವ್ಯಾಪ್ತಿಯ ಹುಬ್ಬಳ್ಳಿ, ಧಾರವಾಡ, ಗದಗ, ಬೆಳಗಾವಿ, ಉತ್ತರ ಕನ್ನಡ, ಹಾವೇರಿ, ಚಿಕ್ಕೋಡಿ ಮತ್ತು ಬಾಗಲಕೋಟೆ ವಿಭಾಗಗಳಿಂದ ಸುಮಾರು 310 ಹೆಚ್ಚುವರಿ ವಿಶೇಷ ಸಾರಿಗೆಗಳನ್ನು ಕಾರ್ಯಾಚರಣೆ ಮಾಡಲಾಗತ್ತದೆ.

ಅ.20 ಮತ್ತು 22 ರಂದು ಕ್ರಮವಾಗಿ ನರಕ ಚತುರ್ಥಿ ಹಾಗೂ ದೀಪಾವಳಿ ಅಂಗವಾಗಿ ಸರ್ಕಾರಿ ರಜೆ ಹಾಗೂ ಅ.18 ಮತ್ತು 19 ರಂದು ವಾರಾಂತ್ಯ ದಿನಗಳಾಗಿದ್ದರಿಂದ ಬೆಂಗಳೂರು ಮತ್ತು ಇತರೇ ಪ್ರಮುಖ ಸ್ಥಳಗಳಿಂದ ಹೆಚ್ಚಿನ ಪ್ರಯಾಣಿಕರು ತಮ್ಮ ಊರುಗಳಿಗೆ ತೆರಳಲು ಹೆಚ್ಚುವರಿ ಸಾರಿಗೆಗಳನ್ನು ಕಾರ್ಯಾಚರಣೆ ಮಾಡಲಾಗುವುದು. ಬೆಂಗಳೂರಿನಿಂದ ರಾಜ್ಯ/ಅಂತರರಾಜ್ಯ ವಿವಿದ ಸ್ಥಳಗಳಿಗೆ ತೆರಳಲು ಅ.17 ರಿಂದ ಅ.19 ರಂದು ಹೆಚ್ಚುವರಿ ವಿಶೇಷ ಸಾರಿಗೆ ಸೌಲಭ್ಯವನ್ನು ಕಲ್ಪಿಸಲಾಗಿದೆ.

ಹಬ್ಬ ಮುಗಿದ ನಂತರ ಅ.22 ಮತ್ತು ನಂತರ ದಿನಗಳಂದು ಪ್ರಮುಖ ಸ್ಥಳಗಳಿಗೆ ಜನದಟ್ಟಣೆಗೆ ಅನುಗುಣವಾಗಿ ಹೆಚ್ಚುವರಿ ಸಾರಿಗೆಗಳನ್ನು ಕಾರ್ಯಾಚರಣೆಗೊಳಿಸಲಾಗುವುದು.

ಸದರಿ ಹೆಚ್ಚುವರಿ ಸಾರಿಗೆಗಳ ಸದುಪಯೋಗ ಪಡಿಸಿಕೊಳ್ಳುವದರೊಂದಿಗೆ, ಸುಖಕರ ಹಾಗೂ ಸುರಕ್ಷಿತ ಪ್ರಯಾಣಕ್ಕಾಗಿ ಸಂಸ್ಥೆಯ ಬಸ್ಸುಗಳಲ್ಲಿ ಪ್ರಯಾಣಿಸುವಂತೆ ಮತ್ತು ವಿಶೇಷ ಹೆಚ್ಚುವರಿ ಸಾರಿಗೆಗಳ ಸದುಪಯೋಗ ಪಡೆದುಕೊಳ್ಳುವಂತೆ ವಾಯವ್ಯ ಕರ್ನಾಟಕ ರಸ್ತೆ ಸಾರಿಗೆ ಸಂಸ್ಥೆಯ ಪ್ರಕಟಣೆಯಲ್ಲಿ ತಿಳಿಸಿದೆ.

## ಉಚಿತ ಬಸ್ ಪಾಸ್: ಅರ್ಜಿ ಆಹ್ವಾನ

**ಧಾರವಾಡ:** ವಾರ್ತಾ ಮತ್ತು ಸಾರ್ವಜನಿಕ ಸಂಪರ್ಕ ಇಲಾಖೆಯ ಮಾಧ್ಯಮ ಪಟ್ಟಿಯಲ್ಲಿರುವ ಮಾಧ್ಯಮ ಸಂಸ್ಥೆಗಳಲ್ಲಿ ಕಾರ್ಯ ನಿರ್ವಹಿಸುತ್ತಿರುವ ತಾಲ್ಲೂಕು ಮಟ್ಟದ ಪತ್ರಕರ್ತರು ತಮ್ಮ ವೃತ್ತಿ ನಿರತ ಚಟುವಟಿಕೆಗಳ ಸಂಬಂಧ ತಮ್ಮ ಜಿಲ್ಲಾದ್ಯಂತ ಉಚಿತವಾಗಿ ಸಂಚರಿಸಲು ಅನುಕೂಲವಾಗುವಂತೆ ಉಚಿತ ಬಸ್ ಪಾಸ್ ನೀಡಲು ಅರ್ಜಿಗಳನ್ನು ಆಹ್ವಾನಿಸಲಾಗಿದೆ. ಪತ್ರಕರ್ತರು ತಾವು ಕಾರ್ಯನಿರ್ವಹಿಸುತ್ತಿರುವ ಮಾಧ್ಯಮ ಸಂಸ್ಥೆಗಳಿಂದ ಸೇವಾ ಪ್ರಮಾಣಪತ್ರ, ಶಿಫಾರಸ್ಸು ಪತ್ರ ಮತ್ತು 11 ತಿಂಗಳುಗಳ ವೇತನಪತ್ರ (ಲೈನೇಜ್, ಸಂಭಾವನೆ, ಕಮೀಷನ್ ಪಡೆದಿರುವ ದಾಖಲೆ)ಗಳನ್ನು ಅಥವಾ ವೇತನ ಜಮಾ ಆಗಿರುವ ಮಾಹಿತಿ ಇರುವಂತಹ ಬ್ಯಾಂಕ್ ಸ್ಟೇಟಮೆಂಟ್ ಲಗತ್ತಿಸಿ ಸೇವಾಸಿಂಧು ಪೋರ್ಟಲ್ (https://sevasindhu.karnataka.gov.in) ಮೂಲಕ ಆನ್ ಲೈನ್‌ನಲ್ಲಿ ಅರ್ಜಿಗಳನ್ನು ಸಲ್ಲಿಸಬಹುದು.
ಆನ್ ಲೈನ್‌ನಲ್ಲಿ ಸಲ್ಲಿಸಲಾದ ಅರ್ಜಿ ಮತ್ತು ಲಗತ್ತಿಸಲಾಗಿರುವ ದಾಖಲೆಗಳ ಒಂದು ಪ್ರತಿಯನ್ನು ಜಿಲ್ಲೆಯ ವಾರ್ತಾಧಿಕಾರಿಗಳ ಕಚೇರಿಗೆ ಸಲ್ಲಿಸಬೇಕು. ಸ್ವೀಕೃತ ಅರ್ಜಿಗಳನ್ನು ಆಯ್ಕೆ ಸಮಿತಿಯ ಸಭೆಯಲ್ಲಿ ಪರಿಶೀಲಿಸಿ ಬಸ್ ಪಾಸ್ ಮಂಜೂರು ಮಾಡಲಾಗುತ್ತದೆ.
ಜಿಲ್ಲೆಯ ಎಲ್ಲ ತಾಲ್ಲೂಕುಗಳ ಅರ್ಹ ಪತ್ರಕರ್ತರು ಕೂಡಲೇ ಸೇವಾಸಿಂಧು ಪೋರ್ಟಲ್ ಮೂಲಕ ಅರ್ಜಿಗಳನ್ನು ಸಲ್ಲಿಸುವುದರ ಮೂಲಕ ಈ ಸದುಪಯೋಗ ಪಡೆದುಕೊಳ್ಳಬಹುದು ಎಂದು ವಾರ್ತಾ ಮತ್ತು ಸಾರ್ವಜನಿಕ ಸಂಪರ್ಕ ಇಲಾಖೆ ಪ್ರಕಟಣೆ ತಿಳಿಸಿದೆ.

## ಭಾಗ್ಯಲಕ್ಷ್ಮೀ ಯೋಜನೆ: ಅರ್ಜಿ ಆಹ್ವಾನ

**ಧಾರವಾಡ:** ಧಾರವಾಡ ಗ್ರಾಮೀಣ ಶಿಶು ಅಭಿವೃದ್ಧಿ ಯೋಜನಾ ವ್ಯಾಪ್ತಿಗೆ ಒಳಪಡುವ ಭಾಗ್ಯಲಕ್ಷ್ಮೀ ಯೋಜನೆಯ ಫಲಾನುಭವಿಗಳು ಭಾಗ್ಯಲಕ್ಷ್ಮೀ ಯೋಜನೆಯಡಿ ಪರಿಪಕ್ವ ಮೊತ್ತ ಪಡೆಯಲು ಅರ್ಜಿ ಆಹ್ವಾನಿಸಲಾಗಿದೆ. ಧಾರವಾಡ ಗ್ರಾಮೀಣ ತಾಲ್ಲೂಕಿನಲ್ಲಿ 2006–07 ನೇ ಸಾಲಿನಲ್ಲಿ ಜನಿಸಿ, 18 ವರ್ಷ ಪೂರ್ಣಗೊಂಡ ಭಾಗ್ಯಲಕ್ಷ್ಮೀ ಯೋಜನೆಯಡಿ ಪರಿಪಕ್ವ ಮೊತ್ತ ಪಡೆಯುವ ಫಲಾನುಭವಿಗಳು ಅರ್ಜಿ ಪಡೆದು, ಅಗತ್ಯ ದಾಖಲೆಗಳೊಂದಿಗೆ ಅಕ್ಟೋಬರ್ 30, 2025 ರೊಳಗಾಗಿ ಧಾರವಾಡ ಗ್ರಾಮೀಣ ಶಿಶು ಅಭಿವೃದ್ಧಿ ಯೋಜನಾಧಿಕಾರಿಗಳ ಕಛೇರಿಗೆ ಖುದ್ದಾಗಿ ಬಂದು ಮೂಲ ದಾಖಲಾತಿಗಳನ್ನು ಸಲ್ಲಿಸಬೇಕು. ಅವಧಿ ಮುಗಿದ ಮೇಲೆ ಬಂದ ಅರ್ಜಿಗಳನ್ನು ಆನ್‌ಲೈನ್‌ನಲ್ಲಿ ಅಳವಡಿಸಲು ಸಾಧ್ಯವಾಗದ ಕಾರಣ ಪರಿಗಣಿಸುವುದಿಲ್ಲ ಎಂದು ಧಾರವಾಡ ಗ್ರಾಮೀಣ ಶಿಶು ಅಭಿವೃದ್ಧಿ ಯೋಜನಾಧಿಕಾರಿಗಳು ಪ್ರಕಟಣೆಯಲ್ಲಿ ತಿಳಿಸಿರುತ್ತಾರೆ.

## ಪರಿಸರ ಪ್ರಶಸ್ತಿಗಾಗಿ ಅರ್ಜಿ ಆಹ್ವಾನ

**ಧಾರವಾಡ:** ಪರಿಸರ ಸಂರಕ್ಷಣೆ ಮತ್ತು ಪರಿಸರ ವ್ಯವಸ್ಥಾಪನೆಗಾಗಿ ಗಣನೀಯ ಸೇವೆ ಸಲ್ಲಿಸಿದ ವ್ಯಕ್ತಿ, ಸಂಸ್ಥೆಗಳನ್ನು ಗುರುತಿಸುವುದಕ್ಕಾಗಿ ಇಂದಿರಾ ಪ್ರಿಯದರ್ಶಿನಿ ಪರಿಸರ ಪ್ರಶಸ್ತಿಯನ್ನು ನೀಡಲಾಗುತ್ತದೆ. ಆಸಕ್ತ ಅರ್ಹರು ಅರ್ಜಿಯನ್ನು ಅಥವಾ ನಾಮ ನಿರ್ದೇಶನಗಳನ್ನು ಸಲ್ಲಿಸಬಹುದಾಗಿದೆ.

ಈ ಪ್ರಶಸ್ತಿಯನ್ನು ವ್ಯಕ್ತಿ ಮತ್ತು ಸಂಸ್ಥೆಗಳ (ಸರ್ಕಾರಿ ವಲಯ, ಸರ್ಕಾರೇತರ ಸಂಸ್ಥೆ, ಕಂಪನಿ ಟ್ರಸ್ಟುಗಳು ಇತರೆ) ಪರಿಸರ ಸಂರಕ್ಷಣೆ ಮತ್ತು ಪರಿಸರ ವ್ಯವಸ್ಥಾಪನೆ ಕ್ಷೇತ್ರಗಳಲ್ಲಿನ ಗಣನೀಯ ಸೇವೆಗಾಗಿ ನೀಡಲಾಗುವುದು. ಈ ಪ್ರಶಸ್ತಿಗಳನ್ನು ಧಾರವಾಡ ಜಿಲ್ಲಾ ವ್ಯಾಪ್ತಿಯಲ್ಲಿ ಮೂರು ವ್ಯಕ್ತಿಗಳಿಗೆ ಅಥವಾ ಸಂಸ್ಥೆಗಳಿಗೆ ನೀಡಲಾಗುವುದು.

ಅರ್ಹತೆಗಳು: ಪರಿಸರ ಸಂರಕ್ಷಣೆ ಮತ್ತು ಪರಿಸರ ವ್ಯವಸ್ಥಾಪನೆ ಯಾವುದಾದರೂ ಒಂದು ಕ್ಷೇತ್ರ ಧಾರವಾಡ ಜಿಲ್ಲೆಯಲ್ಲಿ ಕಾರ್ಯನಿರ್ವಹಿಸುತ್ತಿರುವ ವ್ಯಕ್ತಿಗಳು ಮತ್ತು ಸಂಸ್ಥೆಗಳಿಗೆ ಈ ಪ್ರಶಸ್ತಿ ಮುಕ್ತವಾಗಿದೆ. ಸರ್ಕಾರೇತರ ಸಂಸ್ಥೆಗಳಾಗಿದ್ದಲ್ಲಿ ಅಕ್ಟೋಬರ್ 20, 2025 ಕ್ಕೆ ನೋಂದಾಯಿತವಾಗಿ ಕನಿಷ್ಠ ಮೂರು ವರ್ಷಗಳಾಗಿರಬೇಕು. ಅರಣ್ಯ, ಜೀವಿ ಪರಿಸ್ಥಿತಿ ಮತ್ತು ಪರಿಸರ ಇಲಾಖೆ, ಕರ್ನಾಟಕ ರಾಜ್ಯ ಮಾಲಿನ್ಯ ನಿಯಂತ್ರಣ ಮಂಡಳಿ ಮತ್ತು ಸಂಬಂಧಿಸಿದ ಸಂಸ್ಥೆಗಳ ನೌಕರರು ಈ ಪ್ರಶಸ್ತಿಗೆ ಅರ್ಹರಾಗಿರುವುದಿಲ್ಲ. ವ್ಯಕ್ತಿಗಳು ಅಧಿಕಾರ ಸಾಮರ್ಥ್ಯದಲ್ಲಿ ನಿರ್ವಹಿಸಲಾದ ಕಾರ್ಯಗಳು, ಆರಂಭಶೀಲತೆಗಳು, ಯೋಜನೆಗಳು, ಕಾರ್ಯಕ್ರಮಗಳನ್ನು ಈ ಪ್ರಶಸ್ತಿಗೆ ಪರಿಗಣಿಸಲಾಗುವುದಿಲ್ಲ. ಈ ಹಿಂದೆ ಅರಣ್ಯ, ಜೀವಿ ಪರಿಸ್ಥಿತಿ ಮತ್ತು ಪರಿಸರ ಇಲಾಖೆಯಿಂದ ಪ್ರಶಸ್ತಿ ಪುರಸ್ಕೃತರಾದ ವ್ಯಕ್ತಿ, ಸಂಸ್ಥೆಗಳನ್ನು ಪರಿಗಣಿಸಲಾಗುವುದಿಲ್ಲ.

ಪ್ರಶಸ್ತಿಗಾಗಿ ಪರಿಗಣಿಸುವ ಕಾರ್ಯಗಳ ಅವಧಿ: ಪ್ರಶಸ್ತಿಗಾಗಿ ಪರಿಗಣಿಸಲಾಗುವ ವ್ಯಕ್ತಿ, ಸಂಸ್ಥೆಯ ಆರಂಭಶೀಲತೆ, ಕಾರ್ಯಕ್ರಮಗಳು, ಯೋಜನೆಗಳು, ಕೊಡುಗೆಗಳು ಅಕ್ಟೋಬರ 30, 2025 ಕ್ಕೆ 5 ವರ್ಷಗಳ ಒಳಗಿರಬೇಕು. ಯಾವುದೇ ವ್ಯಕ್ತಿ, ಸಂಸ್ಥೆಗಳು ಪರಿಸರ ಕ್ಷೇತ್ರದಲ್ಲಿ ನಿರ್ವಹಿಸಿರುವ ಗಣನೀಯ ಸೇವೆಯನ್ನು ಪರಿಗಣಿಸಿ ಪ್ರಶಸ್ತಿಗೆ ತಾನೇ ಅಥವಾ ಪ್ರಶಸ್ತಿ ಸಮಿತಿಯ ಸಮಾಲೋಚನೆಯೊಂದಿಗೆ ನಾಮಕರಣ ಮಾಡುವ ಅಧಿಕಾರವನ್ನು ಜಿಲ್ಲಾಡಳಿತವು ಕಾಯ್ದಿರಿಸಿದೆ.

ಅರ್ಹರು ಅಕ್ಟೋಬರ 21, 2025 ರೊಳಗಾಗಿ ಅಗತ್ಯ ದಾಖಲೆಗಳೊಂದಿಗೆ ಅರ್ಜಿಯನ್ನು ಮುಚ್ಚಿದ ಲಕೋಟೆಯಲ್ಲಿ ಕರ್ನಾಟಕ ರಾಜ್ಯ ಮಾಲಿನ್ಯ ನಿಯಂತ್ರಣ ಮಂಡಳಿ, ಪ್ರಾದೇಶಿಕ ಕಛೇರಿ, ಪ್ಲಾಟ್ ನಂ.4, ಲಕ್ಕಮ್ಮನಹಳ್ಳಿ ಇಂಡಸ್ಟ್ರಿಯಲ್ ಏರಿಯಾ, ಧಾರವಾಡ–580004 ಗೆ ಸಲ್ಲಿಸಬೇಕು.

ಹೆಚ್ಚಿನ ಮಾಹಿತಿಗಾಗಿ ಜಿಲ್ಲಾಧಿಕಾರಿಗಳ ಕಛೇರಿ (ಆಪ್ತ ಶಾಖೆ) ಹಾಗೂ ಕರ್ನಾಟಕ ರಾಜ್ಯ ಮಾಲಿನ್ಯ ನಿಯಂತ್ರಣ ಮಂಡಳಿ ಪರಿಸರ ಅಧಿಕಾರಿಗಳ ಕಛೇರಿಗೆ ಭೇಟಿ ನೀಡಬಹುದು ಎಂದು ಜಿಲ್ಲಾಧಿಕಾರಿಗಳು ಪ್ರಕಟಣೆಯಲ್ಲಿ ತಿಳಿಸಿದ್ದಾರೆ.

# ಆತ್ಮ ನಿರ್ಭರ ಭಾರತ ಸಂಕಲ್ಪ ಅಭಿಯಾನ



**ರಬಕವಿ–ಬನಹಟ್ಟಿ:** ಸಪ್ಟೆಂಬರ್ 25 ಪಂಡಿತ ದೀನದಯಾಳ್ ಉಪಾಧ್ಯಾಯ ಅವರ ಜನ್ಮ ದಿನದಿಂದ ಡಿಸೆಂಬರ್ 25 ರವರೆಗೆ ಅಟಲ್ ಬಿಹಾರಿ ವಾಜಪೇಯಿ ಜನ್ಮ ದಿನದವರೆಗೆ ರಾಷ್ಟ್ರ ಮತ್ತು ರಾಜ್ಯದಲ್ಲಿ ಆತ್ಮನಿರ್ಭರ ಭಾತತ ಸಂಕಲ್ಪ ಅಭಿಯಾನ ಕಾರ್ಯಕ್ರಮವನ್ನು ಹಮ್ಮಿಕೊಳ್ಳಲಾಗಿದೆಯೆಂದು ಶಾಸಕ ಸಿದ್ದು ಸವದಿ ತಿಳಿಸಿದರು.

ಅವರು ಮಂಗಳವಾರ ಇಲ್ಲಿನ ಭಾರತೀಯ ಜನತಾ ಪಕ್ಷದ ಕಾರ್ಯಾಲಯದಲ್ಲಿ ನಡೆದ ಸಭೆಯಲ್ಲಿ ಮಾತನಾಡಿದರು. ಈ ಸಂದರ್ಭದಲ್ಲಿ ರಾಷ್ಟ್ರೀಯ, ರಾಜ್ಯ, ಜಿಲ್ಲಾ ಮತ್ತು ಮಂಡಲ ಹಂತದಲ್ಲಿ ಕಾರ್ಯಾಗಾರನ್ನು ಹಮ್ಮಿಕೊಳ್ಳಲಾಗುವುದು. ಹರ್ ಘರ್ ಸ್ವದೇಶಿ ಘರ್ ಘರ್ ಸ್ವದೇಶಿ ಕಾರ್ಯಕ್ರಮದ ಅಂಗವಾಗಿ ಭಾರತೀಯ ಜನತಾ ಪಕ್ಷದ ಕಾರ್ಯಕರ್ತರು ಮನೆ ಮನೆಗೆ ತೆರಳಿ ದೇಸಿ ವಸ್ತುಗಳನ್ನು ಬಳಸುವಂತೆ ಜಾಗೃತಿ ಮೂಡಿಸಲಿದ್ದಾರೆ.

ನಾವು ದೇಸಿ ವಸ್ತುಗಳನ್ನು ಬಳಸುವುದರಿಂದ ಆರ್ಥಿಕವಾಗಿ ಸಬಲರಾಗುಗುತ್ತೇವೆ ಮತ್ತು ಶಕ್ತಿವಂತರಾಗುತ್ತೇವೆ. ವೋಕಲ್ ಫಾರ್ ಲೋಕಲ್ ಎಂಬ ಸಂದೇಶವನ್ನು ಕೂಡಾ ಸಾರುತ್ತೇವೆ. ಭವಿಷ್ಯದಲ್ಲಿ ಭಾರತವು ವಿಕಸಿತ ಭಾರತವಾಗುತ್ತದೆ. ಇದು ನಮ್ಮ ಉದ್ದೇಶವಾಗಿದೆ. ಅದರಲ್ಲೂ ದೀಪಾವಳಿಯ ಸಂದರ್ಭದಲ್ಲಿ ದೇಸಿ ವಸ್ತುಗಳನ್ನು ಖರೀದಿಸಬೇಕು. ಆತ್ಮ ನಿರ್ಭರ ಭಾರತ ಯೋಜನೆ ಅಡಿಯಲ್ಲಿ ಚಿತ್ರಕಲಾ, ಕವಿತೆ ರಚನೆ, ರಂಗೋಲಿ ಸೇರಿದಂತೆ ಹಲವಾರು ಸ್ಪರ್ಧೆಗಳನ್ನು ಹಾಗೂ ಬೀದಿ ನಾಟಕ, ಗೋಡೆ ಬರಹಗಳನ್ನು ಕೂಡಾ ಕೈಗೊಳ್ಳಲಾಗುವುದು ಎಂದು ಶಾಸಕ ಸಿದ್ದು ಸವದಿ ತಿಳಿಸಿದರು.

ಈ ಸಂದರ್ಭದಲ್ಲಿ ಭಾರತೀಯ ಜನತಾ ಪಕ್ಷದ ಪದಾಧಿಕಾರಿಗಳಾದ ಶ್ರೀಶೈಲ ಬೀಳಗಿ, ಸುರೇಶ ಅಕ್ಕಿವಾಟ, ಆನಂದ ಕಂಪು, ಶಂಕರ ಹುನ್ನೂರ, ನಿಂಗರಾಜ ನಾಯಕ, ಸದಾಶಿವ ಪರೀಟ, ಪ್ರವೀಣ ಧಬಾಡಿ ಮತ್ತು ರವಿ ಕೊರ್ತಿ ಇದ್ದರು.

# ಎಂಇಎಸ್ ಮುಖಂಡ ಶುಭಂ ಶಳಕೆ ಗಡಿಪಾರಿಗೆ ಆಗ್ರಹ

**ಗೋಕಾಕ:** ಕರವೇ ರಾಜ್ಯಾಧ್ಯಕ್ಷ ಟಿ.ಎ.ನಾರಾಯಣ ಗೌಡ ಅವರನ್ನು ವೈರಸ್ ಎಂದು ನಿಂಧಿಸಿರುವ ನಾಡ ವಿರೋಧಿ ಎಂ.ಇ.ಎಸ್.ಗೂಂಡಾ ಶುಭಂ ಶಿಳಕೆ ಅವರನ್ನು ಗಡಿಪಾರು ಮಾಡಬೇಕು ಎಂದು ಕರವೇ ತಾಲೂಕು ಅಧ್ಯಕ್ಷ ಬಸವರಾಜ ಖಾನಪ್ಪನವರ ಕಿಡಿ ಕಾರಿದ್ದಾರೆ.

ಮಂಗಳವಾರದಂದು ನಗರದ ವಾಲ್ಮೀಕಿ ವೃತ್ತದಲ್ಲಿ ಹಮ್ಮಿಕೊಂಡ ಪ್ರತಿಭಟನೆಯಲ್ಲಿ ಶಿಳಕೆ ಭಾವಚಿತ್ರ ದಹಿಸಿ ಕಾರ್ಯಕರ್ತರನ್ನು ಉದ್ದೇಶಿಸಿ ಅವರು ಮಾತನಾಡಿದರು.

ಕನ್ನಡ ಮತ್ತು ಕನ್ನಡಿಗರ ಬಗ್ಗೆ ನಾಡ ವಿರೋಧಿ ಶಿಳಕೆ ನಾಲಿಗೆ ಬಿಗಿ ಹಿಡಿದು ಮಾತನಾಡಬೇಕು. ನಾರಾಯಣಗೌಡರನ್ನು ಟೀಕಿಸುವ ಮೊದಲು ನಾನು ಯಾರ ಬಗ್ಗೆ ಮಾತನಾಡುತ್ತಿದ್ದೇನೆ ಎಂಬುದರ ಬಗ್ಗೆ ಯೋಚನೆ ಮಾಡಿ ಮಾತನಾಡಬೇಕು. ನಾರಾಯಣ ಗೌಡರ ಕಾಲಿನ ದೂಳಿಗೂ ಸಮನಾಗದ ನಾಡ ವಿರೋಧಿ ಶಿಳಕೆ. ದೊಡ್ಡ ನಾಯಕನಲ್ಲ ಇವನಿಗೆ ಬುದ್ದಿ ಕಲಿಸಲು ಕರವೇಯ ಮಹಿಳಾ ಕಾರ್ಯಕರ್ತರೇ ಸಾಕು. ಮುಂದೆ ಇವನಿಗೆ ಜಿಲ್ಲೆಯಲ್ಲಿ ಮಹಿಳಾ ಕಾರ್ಯಕರ್ತರಿಂದ ಚಪ್ಪಲಿ ಸೇವೆ ಮಾಡಲಾಗುವುದು. ಕರ್ನಾಟಕ ರಾಜ್ಯೋತ್ಸವ ಸಂಭ್ರಮದಲ್ಲಿರುವ ಬೆಳಗಾವಿಯಲ್ಲಿ ಮರಾಠಿ ಮತ್ತು ಕನ್ನಡಿಗರ ಮಧ್ಯೆ ವಿಷಭಿಜ ಬಿತ್ತುವ ಹೇಳಿಕೆ ನೀಡಿರುವ ಗೂಂಡಾ ಶಿಳಕೆ ಅವನನ್ನು ಜಿಲ್ಲಾಡಳಿತ ಈ ಕೂಡಲೇ ಗಡಿಪಾರು ಮಾಡಬೇಕು. ನಾಡ ದ್ರೋಹಿ ಎಂ.ಇ.ಎಸೆ.ಗೆ ಕರಾಳ ದಿನ ಆಚರಣೆಗೆ ಅವಕಾಶ ಕಲ್ಪಿಸಬಾರದು. ಜಿಲ್ಲಾಡಳಿತ ಇದರ ಬಗ್ಗೆ ಸ್ಪಷ್ಟ ನಿಲುವು ಹೇಳಬೇಕು. ಒಂದು ವೇಳೆ ಅವಕಾಶ ಕಲ್ಪಿಸಿದರೆ ರಾಜ್ಯದ ಎಲ್ಲಾ ಕರವೇ ಕಾರ್ಯಕರ್ತರು ಬೆಳಗಾವಿಗೆ ನುಗ್ಗಿ ಎಂ.ಇ.ಎಸ್.ಗೆ ತಕ್ಕಪಾಠ ಕಲಿಸುತ್ತೇವೆ ಎಂದು ಕರವೇ ಅಧ್ಯಕ್ಷ ಬಸವರಾಜ ಖಾನಪ್ಪನವರ ಜಿಲ್ಲಾಡಳಿತವನ್ನು ಎಚ್ಚರಿಸಿದ್ದಾರೆ.

ಈ ಸಂದರ್ಭದಲ್ಲಿ ಮಲ್ಲು ಸಂಪರ್ ನಿಜಾಮ ನದಾಫ್ ಮಹಾದೇವ ಮಕ್ಕಳಗೇರಿ, ಜಗದೀಶ್ ಪೂಜೇರಿ ವಜ್ರಕಾಂತ್ ಜೋತಾವರ್, ಮಲ್ಲಪ್ಪ ಅಂಬಿ, ಕೆಂಪಣ್ಣ ಕಡಕೋಳ ಕರೆಪ್ಪ ಹೊರಟ್ಟಿ, ಬಸವರಾಜ ಗಾಡಿವಡ್ಡರ್ ಸೈಯದ್ ಮುಲ್ಲಾ ಸೇರಿದಂತೆ ಅನೇಕರು ಉಪಸ್ಥಿತರಿದ್ದರು.



# ಚುನಾವಣೆಯಲ್ಲಿ ರೆಸಾರ್ಟ್ ರಾಜಕೀಯ ಸಾಮಾನ್ಯ: ಸಚಿವ ಜಾರಕಿಹೊಳಿ

**ಬೆಳಗಾವಿ:** ನಮ್ಮಲ್ಲಿ ಎಂಎಲ್‌ಎ ಹಾಗೂ ಎಂಪಿ ಚುನಾವಣೆ ಬಿಟ್ಟರೆ ಈ ರೆಸಾರ್ಟ್ ರಾಜಕೀಯ ಎಲ್ಲದರಲ್ಲೂ ಅನ್ವಯಿಸುತ್ತದೆ ಎಂದು ಲೋಕೋಪಯೋಗಿ ಸಚಿವ ಸತೀಶ್ ಜಾರಕಿಹೊಳಿ ಹೇಳಿದರು.

ನಗರದಲ್ಲಿ ಮಾಧ್ಯಮದವರೊಂದಿಗೆ ಮಾತನಾಡಿದ ಅವರು, ನಮ್ಮ ಜಿಲ್ಲೆಯಲ್ಲಿ ಎಂಎಲ್‌ಎ ಹಾಗೂ ಎಂಪಿ ಚುನಾವಣಾ ಬಿಟ್ಟರೆ ಸಹಕಾರ ಕ್ಷೇತ್ರ ಸೇರಿದಂತೆ ಎಲ್ಲ ಚುನಾವಣೆಯಲ್ಲೂ ಸಹ ರೆಸಾರ್ಟ್ ರಾಜಕೀಯ ಇದ್ದೆ ಇದೆ. ಇದು ಇಲ್ಲಿ ಸಾಮಾನ್ಯ ಎಂದು ಹೇಳಿದರು.

ಜಿಲ್ಲೆಯಲ್ಲಿ ಲಿಂಗಾಯತ ಒಡೆದು ಆಳುತ್ತಿದ್ದಾರೆ ಎಂಬ ಮಾಧ್ಯಮದವರ ಪ್ರಶ್ನೆಗೆ ಉತ್ತರಿಸಿದ ಅವರು, ಇದು ಚರ್ಚೆ ಅಷ್ಟೇ, ಇಂತಹ ಉಹಾಪೋಹ ಮಾತುಗಳಿಗೆ ಉತ್ತರ ಕೊಡಲು ಆಗುವುದಿಲ್ಲ.ಇದಕ್ಕೆ ಯಾವುದೇ ರೀತಿ ಜಿಎಸ್‌ಟಿ ಹಾಗೂ ಟ್ಯಾಕ್ಸ್ ಇಲ್ಲದರಿಂದ ಇಂತಹ ಮಾತುಗಳು ಸಾಮಾನ್ಯವಾಗಿ ಬರುತ್ತಲೇ ಇರುತ್ತವೆ ಎಂದು ಹಾಸ್ಯ ಚಟಾಕಿ ಹಾರಿಸಿದರು.

ಎಲ್ಲರಿಗೂ ಸೋಲಿನ ಬಯ ಇದ್ದೇ ಇರುತ್ತೆ: ಚುನಾವಣೆ ಎಂದ ಮೇಲೆ ಅಭ್ಯರ್ಥಿಗಳಲ್ಲಿ ಸೋಲಿನ ಭಯ ಇದ್ದೇ ಇರುತ್ತದೆ. ಯಾರಿಗೆ ಹೆಚ್ಚು ಸೋಲಿನ ಭಯ ಇರುತ್ತದೆಯೋ ಅವರೇ ಹೆಚ್ಚು ಮತಗಗಳಿಂದ ಲೀಡ್ ಪಡೆದು ಗೆದ್ದು ಬರುತ್ತಾರೆ. ಮುಖ್ಯವಾಗಿ ಚುನಾವಣೆ ಅಂದ ಮೇಲೆ ಭಯ ಇರಬೇಕು ಎಂದು ಹೇಳಿದರು.

ಕೆಲವು ಕಡೆ ಚುನಾವಣೆ ಅನಿವಾರ್ಯ : ಒಂದೆಷ್ಟು ಕ್ಷೇತ್ರಗಳಲ್ಲಿ ಹೊಂದಾಣಿಕೆ ಆದರೆ ಇನ್ನೊಂದಿಷ್ಟು ಕ್ಷೇತ್ರಗಳಲ್ಲಿ ನಮಗೆ ಚುನಾವಣೆ ಅನಿವಾರ್ಯವಾಗಿದೆ. ಅಲ್ಲದೆ ನಿಪ್ಪಾಣಿ, ಹುಕ್ಕೇರಿ, ರಾಮದುರ್ಗದಲ್ಲಿ ಇಕಡೆ ಇದ್ದವರು ಆ ಕಡೆ, ಆ ಕಡೆ ಇದ್ದವರು ಈ ಕಡೆ ಕ್ರಾಸ್ ಮತಗಳು ಹಾಕುವುದು ಈ ಕ್ಷೇತ್ರದಲ್ಲಿ ಸಾಮಾನ್ಯವಾಗಿ ನಡೆಯಲಿದೆ ಎಂದರು.

ಯಾರ ಮೇಲೆ ಪ್ರೀತಿ ಹೆಚ್ಚಿದೆಯೋ ಅವರೇ ಅಲ್ಲಿ ಗೆಲ್ಲುತ್ತಾರೆ: ಕಿತ್ತೂರು ಕ್ಷೇತ್ರದಲ್ಲಿ ಹೊಂದಾಣಿಕೆ ಪ್ರಶ್ನೆ ಇಲ್ಲವೇ ಇಲ್ಲ. ಅಲ್ಲಿ ಚುನಾವಣೆ ನಡೆಯುವುದು ಖಚಿತ. ಒಂದಿಷ್ಟು ಕಡೆ ನಮಗೆ ಹೊಂದಾಣಿಕೆಯಾದರೆ, ಇನ್ನೊಂದಿಷ್ಟು ಕಡೆ ನಮ್ಮ ಜೊತೆ ಹೊಂದಾಣಿಕೆ ಆಗಿಲ್ಲ. ಹೀಗಾಗಿ ಒಂದಿಷ್ಟು ಕ್ಷೇತ್ರಗಳಲ್ಲಿ ಚುನಾವಣೆ ನಡೆಯಲಿದೆ. ಯಾರ ಮೇಲೆ ಪ್ರೀತಿ ಹೆಚ್ಚಿದೆಯೋ ಅವರೇ ಅಲ್ಲಿ ಗೆಲ್ಲುತಾರೆ ಹೊರತು ಬೇರೆ ಯಾವ ಪ್ರಚಾರದಿಂದಲ್ಲ ಎಂದು ಹೇಳಿದರು.

'ಡಿಸಿಸಿ ಬ್ಯಾಂಕ್ ಚುನಾವಣೆಯಲ್ಲಿ ಸೋತರೆ, ಮುಂದೆ ಸಂಪುಟಕ್ಕೆ ಸೇರುವ ಸಾಧ್ಯತೆಗೆ ತೊಂದರೆ ಆಗಬಹುದೆಂದು ಶಾಸಕ ಅಶೋಕ ಪಟ್ಟಣ ನಾಮಪತ್ರ ವಾಪಸ್ ಪಡೆದಿದ್ದಾರೆ ಎಂಬ ಪ್ರಶ್ನೆಗೆ ಉತ್ತರಿಸಿದ ಸಚಿವರು, ಶಾಸಕ ಅಶೋಕ ಪಟ್ಟಣ ಅವರು ಡಿಸಿಸಿ ಬ್ಯಾಂಕ್ ಚುನಾವಣಾ ಕಣದಲ್ಲಿ ಉಳಿದುಕೊಂಡಿದ್ದರೆ, ಅವರೆ ಗೆಲ್ಲುತ್ತಿದ್ದರು. ನಾವು ಕೂಡಾ ಅವರಿಗೆ ಅ.19ರವರೆಗೆ ಕೂಡಿ ಒಂದು ಒಳ್ಳೆಯ ನಿರ್ಧಾರ ಮಾಡೋಣ ಎಂದು ಹೇಳಿದ್ದೇವು. ಆದರೆ ಅವರು ಒಂದು ವೇಳೆ ಸೋಲಾದರೆ ತಮಗೆ ತೊಂದರೆಯಾಗಬಹುದೆಂದು ಈ ನಿರ್ಧಾರ ತೆಗೆದುಕೊಂಡಿದ್ದಾರೆ ಎಂದು ಹೇಳಿದರು.

ನಿಪ್ಪಾಣಿಯಲ್ಲಿ ಉತ್ತಮ ಪಾಟೀಲ್ ಅವರಿಗೆ ಸಹಾಯ ಮಾಡಲು ಆಗಲ್ಲವೆಂದು ನಾನು ಮೊದಲೆ ಹೇಳಿದ್ದೇನೆ. ಈ ಚುನಾವಣೆಯಲ್ಲಿಅಣ್ಣಾಸಾಹೇಬ್ ಜೊಲ್ಲೆ ಪರ ನಿಂತಿದ್ದೇವೆ. ಅದರಂತೆ ಅವರನ್ನೇ ಆಯ್ಕೆ ಮಾಡುತ್ತೇವೆಂದು ಮಾಧ್ಯಮದವರ ಪ್ರಶ್ನೆಗೆ ಉತ್ತರಿಸಿದರು.



# ಬಸಾಪಟ್ಟಣಕ್ಕೆ ರೈಲ್ವೆ ನಿಲುಗಡೆಗೆ ಮನವಿ

**ಗಂಗಾವತಿ:** ತಾಲ್ಲೂಕಿನ ಬಸಾಪಟ್ಟಣಕ್ಕೆ ರೈಲ್ವೆ ನಿಲುಗಡೆ ಹಾಗೂ ನಿಲ್ದಾಣದ ನಿರ್ಮಿಸುವಂತೆ ಸಾರ್ವಜನಿಕರ ಒತ್ತಾಯವಾಗಿದ್ದು, ಮಾಜಿ ಶಾಸಕ ಪರಣ್ಣ ಮುನವಳ್ಳಿ ಅವರು ರೈಲ್ವೆ ಖಾತೆ ಸಚಿವ ವಿ.ಸೋಮಣ್ಣ ಅವರಿಗೆ ದೂರವಾಣಿ ಮೂಲಕ ಸಂಪರ್ಕಿಸಿ ಮಾತನಾಡಿದರು.

ನಂತರ ಬಸಾಪಟ್ಟಣ ಗ್ರಾಮಸ್ಥರ ಪರವಾಗಿ ಪರಣ್ಣ ಮುನವಳ್ಳಿಯವರು ಸಚಿವರಾದ ವಿ. ಸೋಮಣ್ಣ ಅವರನ್ನು ರಾಜಧಾನಿಯಲ್ಲಿ ಖುದ್ದಾಗಿ ಭೇಟಿ ಮಾಡಿ ಮನವಿ ಸಲ್ಲಿಸಿ ಬಸಾಪಟ್ಟಣ ರೈಲ್ವೆ ನಿಲುಗಡೆ ಹಾಗೂ ನಿಲ್ದಾಣದ ಬಗ್ಗೆ ಇಲ್ಲಿಯವರೆಗೆ ನೆಡೆದ ಪ್ರಕ್ರಿಯೆಯ ಬಗ್ಗೆ ಸವಿಸ್ತಾರವಾಗಿ ತಿಳಿಸಿದರು. ಇದಕ್ಕೆ ಸ್ಪಂದಿಸಿದ ಕೇಂದ್ರ ರೈಲ್ವೆ ಸಚಿವರು ಆದಷ್ಟು ಬೇಗ ನಿಮ್ಮ ಈ ಬೇಡಿಕೆ ಈಡೇರಿಸುತ್ತೇನೆ ಎಂದು ಭರವಸೆ ನೀಡಿದರು. ನಂತರ ಕೇಂದ್ರ ರೈಲ್ವೆ ಸಚಿವರು ಹುಬ್ಬಳ್ಳಿ ರೈಲ್ವೆ ಮೇಲಾಧಿಕಾರಿಗಳಿಗೆ ದೂರವಾಣಿ ಕರೆ ಮಾಡಿ ಮಾತನಾಡಿ ಆದಷ್ಟು ತೀವ್ರಗತಿಯಲ್ಲಿ ಬಸಾಪಟ್ಟಣಕ್ಕೆ ರೈಲ್ವೇ ನಿಲುಗಡೆ ಹಾಗೂ ನಿಲ್ದಾಣದ ಪ್ರಕ್ರಿಯೆಯನ್ನು ಕೈಗೊಳ್ಳುವಂತೆ ಆದೇಶ ನೀಡಿದರು.

# ಫುಟ್ಬಾಲ್ ಕ್ರೀಡೆಯಲ್ಲಿ ರಾಜ್ಯಮಟ್ಟಕ್ಕೆ ಆಯ್ಕೆ



**ಜಮಖಂಡಿ:** ಬೆಳಗಾವಿಯ ತಿಳಕವಾಡಿ ಲೀಲೆ ಕಾಲೇಜು ಮೈದಾನದಲ್ಲಿ. 17 ವರ್ಷದೊಳಗಿನ ಬೆಳಗಾವಿ ವಿಭಾಗ ಮಟ್ಟದ ಫುಟ್ಬಾಲ್ ಕ್ರೀಡೆಯಲ್ಲಿ ಜಮಖಂಡಿಯ ಸರಕಾರಿ ಪಿ.ಬಿ.ಪ್ರೌಢಶಾಲೆಯ ವಿದ್ಯಾರ್ಥಿಗಳು ವಿಭಾಗಮಟ್ಟದಲ್ಲಿ ಜಯಗಳಿಸುವ ಮೂಲಕ ರಾಜ್ಯಮಟ್ಟಕ್ಕೆ ಆಯ್ಕೆಯಾಗಿದ್ದಾರೆ.

ಸತತ ಕಳೆದ 5 ವರ್ಷಗಳಿಂದ ಸರಕಾರಿ ಪಿ.ಬಿ.ಪ್ರೌಢಶಾಲೆಯ ವಿದ್ಯಾರ್ಥಿಗಳು ರಾಜ್ಯಮಟ್ಟಕ್ಕೆ ಆಯ್ಕೆಗೊಂಡಿರುವದು ವಿಶೇಷವಾಗಿದೆ. ಹಳೆಯ ಫುಟ್ಬಾಲ್ ಕ್ರೀಡಾಪಟು ರಾಹುಲ ದಳವಾಯಿ ಅವರು ವಿದ್ಯಾರ್ಥಿಗಳಿಗೆ ಶೂ ಮತ್ತು ಸಮವಸ್ತ್ರ ನೀಡುವ ಮೂಲಕ ಫುಟಬಾಲ್ ಕ್ರೀಡೆಗೆ ಉತ್ತೇಜನ ನೀಡಿದ್ದರು. ದೈಹಿಕ ಶಿಕ್ಷಕ ಸುರೇಶ ಬೋಸ್ಲೆ ತಂಡದ ವಿದ್ಯಾರ್ಥಿಗಳಿಗೆ ತರಬೇತಿ ನೀಡಿದ್ದರು. ವಿದ್ಯಾರ್ಥಿಗಳ ಸಾಧನೆಗೆ ಪ್ರಾಚಾರ್ಯರು, ಆಡಳಿತ ಮಂಡಳಿ ಸದಸ್ಯರು ಅಭಿನಂದಿಸಿದ್ದಾರೆ

# ವಿಭಾಗ ಮಟ್ಟದ ಯೋಗಾಸನ ಸ್ಪರ್ಧೆ

**ಕಾರವಾರ:** ಜಿಲ್ಲಾಡಳಿತ, ಜಿಲ್ಲಾ ಪಂಚಾಯತ, ಉಪನಿರ್ದೇಶಕರು(ಆಡಳಿತ) ಶಾಲಾ ಶಿಕ್ಷಣ ಇಲಾಖೆ, ಉತ್ತರ ಕನ್ನಡ ಕ್ಷೇತ್ರ ಶಿಕ್ಷಣಾಧಿಕಾರಿಗಳ ಕಾರ್ಯಾಲಯ, ಭಟ್ಕಳ ಇವರ ಸಂಯುಕ್ತ ಆಶ್ರಯದಲ್ಲಿ ಬೆಳಗಾವಿ ವಿಭಾಗ ಮಟ್ಟದ 14 ವರ್ಷ ಮತ್ತು 17 ವಯೋಮಿತಿಯ ಪ್ರಾಥಮಿಕ ಹಾಗೂ ಪ್ರೌಢಶಾಲಾ ವಿದ್ಯಾರ್ಥಿಗಳ ಯೋಗಾಸನ ಸ್ಪರ್ಧೆ–2025–26 ರ ಉದ್ಘಾಟನಾ ಸಮಾರಂಭವು ಅ.25 ರಂದು ಸಂಜೆ 5 ಗಂಟೆಗೆ ಭಟ್ಕಳದ ದಿ.ನ್ಯೂ ಇಂಗ್ಲೀಷ್ ಪಿ.ಯು ಕಾಲೇಜು ಆವರಣದಲ್ಲಿ ನಡೆಯಲಿದೆ.

ಕಾರ್ಯಕ್ರಮದ ಉದ್ಘಾಟನೆ ಮತ್ತು ಅಧ್ಯಕ್ಷತೆಯನ್ನು ಮೀನುಗಾರಿಕೆ, ಬಂದರು ಮತ್ತು ಒಳನಾಡು ಜಲಸಾರಿಗೆ ಸಚಿವ ಹಾಗೂ ಜಿಲ್ಲಾ ಉಸ್ತುವಾರಿ ಸಚಿವ ಮಂಕಾಳ ವೈದ್ಯ ವಹಿಸಲಿದ್ದಾರೆ.

ಕಾರ್ಯಕ್ರಮದಲ್ಲಿ ವಿಧಾನ ಪರಿಷತ್ ಸಭಾಪತಿ ಬಸವರಾಜ ಹೊರಟ್ಟಿ, ಆಡಳಿತ ಸುಧಾರಣಾ ಆಯೋಗದ ಅಧ್ಯಕ್ಷ ಆರ್.ವಿ ದೇಶಪಾಂಡೆ, ಕರ್ನಾಟಕ ಮಾರ್ಕೆಟಿಂಗ್ ಕನ್ಸಲ್ಟೆಂಟ್ ಅಂಡ್ ಏಜೆನ್ಸಿಸ್ ಅಧ್ಯಕ್ಷ ಸತೀಶ ಕೆ. ಸೈಲ್, ಸಂಸದ ವಿಶ್ವೇಶ್ವರ ಹೆಗಡೆ ಕಾಗೇರಿ, ಶಾಸಕರಾದ ಶಿವರಾಮ ಹೆಬ್ಬಾರ್, ದಿನಕರ ಕೆ. ಶೆಟ್ಟಿ, ಭೀಮಣ್ಣ ಟಿ. ನಾಯ್ಕ, ವಿಧಾನ ಪರಿಷತ್ ಶಾಸಕರಾದ ಎಸ್. ವಿ.ಸಂಕನೂರು, ಶಾಂತಾರಾಮ ಬುಡ್ನ ಸಿದ್ದಿ, ಗಣಪತಿ ಡಿ.ಉಳ್ವೇಕರ ಹಾಗೂ ಪುರಸಭೆ ಅಧ್ಯಕ್ಷ ಅಲ್ತಾಫ್ ಮೊಹಿದ್ದೀನ್ ಖರೂರಿ, ಹಾಗೂ ಜಿಲ್ಲಾ ಗ್ಯಾರಂಟಿ ಯೋಜನೆಗಳ ಅನುಷ್ಠಾನ ಪ್ರಾಧಿಕಾರದ ಅಧ್ಯಕ್ಷ ಸತೀಶ ನಾಯ್ಕ ಮತ್ತಿತರರು ಪಾಲ್ಗೊಳ್ಳಲಿದ್ದಾರೆ.

# ಸರಕಾರದ ಸೌಲಭ್ಯಗಳನ್ನು ಸಾರ್ವಜನಿಕರಿಗೆ ಸಕಾಲಕ್ಕೆ ತಲುಪಿಸಿ

**ಧಾರವಾಡ:** ಸರಕಾರಗಳು ಜನರ ಕಲ್ಯಾಣಕ್ಕಾಗಿ, ರಾಜ್ಯದ ಅಭಿವೃದ್ಧಿಗಾಗಿ ಅನೇಕ ಯೋಜನೆಗಳನ್ನು ರೂಪಿಸಿ, ಸೌಲಭ್ಯಗಳನ್ನು ನೀಡುತ್ತವೆ. ಇವುಗಳನ್ನು ಅರ್ಹ ಫಲಾನುಭವಿ ಜನರಿಗೆ ಸಕಾಲದಲ್ಲಿ ತಲುಪಿಸುವ ಮೂಲಕ ಸಾರ್ವಜನಿಕರಲ್ಲಿ ಸರಕಾರದ ಬಗ್ಗೆ ವಿಶ್ವಾಸ, ಸದಾಭಿಪ್ರಾಯ ಮೂಡಿಸುವುದು ಎಲ್ಲ ಸರಕಾರಿ ನೌಕರರ ಆದ್ಯ ಕರ್ತವ್ಯವಾಗಿದೆ ಎಂದು ಜಿಲ್ಲಾ ಪಂಚಾಯತ ಆಡಳಿತಾಧಿಕಾರಿಗಳು ಮತ್ತು ಜಿಲ್ಲಾ ಉಸ್ತುವಾರಿ ಕಾರ್ಯದರ್ಶಿಗಳಾದ ಹಿರಿಯ ಐಎಎಸ್ ಅಧಿಕಾರಿ ಡಾ॥ ರಾಮ್ ಪ್ರಸಾತ್ ಮನೋಹರ್ ವಿ. ಅವರು ಹೇಳಿದರು.



ಅವರು ಸೋಮವಾರ ಮಧ್ಯಾಹ್ನ ಜಿಲ್ಲಾ ಪಂಚಾಯತ ಸಭಾಂಗಣದಲ್ಲಿ 2025–26 ನೇ ಸಾಲಿನ ಸೆಪ್ಟೆಂಬರ 2025 ರ ಅಂತ್ಯಕ್ಕೆ ಕೊನೆಗೊಂಡಂತೆ ಮಾಸಿಕ ಕೆ.ಡಿ.ಪಿ ಪ್ರಗತಿ ಪರಿಶೀಲನಾ ಸಭೆ ಜರುಗಿಸಿ, ಅಧ್ಯಕ್ಷತೆ ವಹಿಸಿ ಮಾತನಾಡಿದರು.

ಗ್ರಾಮ, ಹೋಬಳಿ, ತಾಲೂಕು ಹಂತದ ಕ್ಷೇತ್ರಮಟ್ಟದಲ್ಲಿ ಕರ್ತವ್ಯ ನಿರ್ವಹಿಸುವ ಎಲ್ಲ ಅಧಿಕಾರಿ, ಸಿಬ್ಬಂದಿಗಳು ಅಲ್ಲಿನ ಸಾರ್ವಜನಿಕರೊಂದಿಗೆ ನೇರವಾಗಿ, ನಿರಂತರ ಸಂಪರ್ಕದಲ್ಲಿರಬೇಕು. ಗ್ರಾಮ ಸಭೆಗಳಿಗೆ ಕಡ್ಡಾಯವಾಗಿ ಹಾಜರಾಗಿ, ಸರಕಾರದ ವಿವಿಧ ಇಲಾಖೆಗಳಿಂದ ಅನುಷ್ಠಾನಗೊಳ್ಳುವ ಯೋಜನೆ, ಸೌಲಭ್ಯಗಳ ಬಗ್ಗೆ ಮಾಹಿತಿ ನೀಡಿ, ಜನರಲ್ಲಿ ಜಾಗೃತಿ ಮೂಡಿಸಬೇಕು. ಇದು ಸರಕಾರದ ಕಾರ್ಯಕ್ರಮಗಳ ಬಗ್ಗೆ ಸಾರ್ವಜನಿಕರಲ್ಲಿ ಸದಾಭಿಪ್ರಾಯ ಮೂಡಲು ಪ್ರಮುಖ ಪಾತ್ರ ನಿರ್ವಹಿಸುತ್ತದೆ ಎಂದು ಅವರು ತಿಳಿಸಿದರು.

ಅನುದಾನ ಲ್ಯಾಪ್ಸ್ ಆಗಬಾರದು: ಪ್ರಸಕ್ತ ಸಾಲಿನ ಕಾಮಗಾರಿ, ಯೋಜನೆಗಳು ಕಾಲಮಿತಿಯಲ್ಲಿ ಅನುಷ್ಠಾನವಾಗಬೇಕು. ಬಿಡುಗಡೆ ಆದ ಅನುದಾನ ಲ್ಯಾಪ್ಸ್‌ಗೊಂಡರೆ ಸಂಬಂಧಿಸಿದ ಅಧಿಕಾರಿಯನ್ನು ಹೊಣೆ ಮಾಡಲಾಗುತ್ತದೆ. ಕಾಮಗಾರಿ ಅನುಷ್ಠಾನದಲ್ಲಿ ಸರಕಾರಿ ನಿಯಮಗಳ ಉಲ್ಲಂಘನೆ ಆಗಬಾರದು. ಕಾಮಗಾರಿಗಳು ಗುಣಮಟ್ಟದಿಂದ ಕೂಡಿದ್ದು, ಸಮರ್ಪಕವಾಗಿ ಜಾರಿ ಆಗಬೇಕು. ಜಿಲ್ಲಾ ಪಂಚಾಯತ ಸಿಇಓ ಅವರ ಮಾರ್ಗದರ್ಶನದಲ್ಲಿ ಹಿರಿಯ ಅಧಿಕಾರಿಗಳ ತಂಡ ತಾಲೂಕುವಾರು, ಘಟಕವಾರು ಕಾಮಗಾರಿ, ಕಾರ್ಯಕ್ರಮಗಳನ್ನು ಪರಿಶೀಲಿಸಿ, ನಿಯಮ ಪಾಲನೆ ಆಗಿರುವ ಬಗ್ಗೆ ಖಾತರಿ ಪಡಿಸಿಕೊಳ್ಳಬೇಕು. ಈ ಕುರಿತು ಪ್ರತಿ ತಿಂಗಳು ತಮ್ಮ ಕಚೇರಿಗೆ ವರದಿ ಸಲ್ಲಿಸಬೇಕೆಂದು ಡಾ॥ ರಾಮ್ ಪ್ರಸಾತ್ ಮನೋಹರ್ ವಿ. ಅವರು ನಿರ್ದೇಶನ ನೀಡಿದರು.

**ಕೃಷಿ ವಿಸ್ತರಿಸಿ:** ಜಿಲ್ಲೆಯ ರೈತರನ್ನು ವಿಶ್ವಾಸಕ್ಕೆ ತೆಗೆದುಕೊಂಡು ಕೆಲಸ ಮಾಡಿ, ಕೃಷಿ ಮತ್ತು ಕೃಷಿಗೆ ಪೂರಕವಾದ ಪಶುಸಂಗೋಪನೆ, ತೋಟಗಾರಿಕೆ, ಮೀನುಗಾರಿಕೆ, ರೇಷ್ಮೆ, ಎಪಿಎಂಸಿ ಇಲಾಖೆಗಳು ರೈತ ಸ್ನೇಹಿಯಾಗಿ ಕೆಲಸ ನಿರ್ವಹಿಸಬೇಕು. ಬೆಳೆ ವಿಮೆ ಮತ್ತು ಬೆಳೆ ಪರಿಹಾರದ ಬಗ್ಗೆ ತಿಳಿಸಿ, ಗ್ರಾಮವಾರು ರೈತರಿಗೆ ಪರಿಹಾರ ಲಭಿಸಿದ ಕುರಿತು ಸಾರ್ವಜನಿಕರಿಗೆ ಮಾಹಿತಿ ನೀಡಬೇಕು.

ಇಲಾಖೆಗಳ ಅಧಿಕಾರಿಗಳು ಇನ್ನೂ ಹೆಚ್ಚು ಕ್ರಿಯಾಶೀಲವಾಗಬೇಕು. ರೇಷ್ಮೆ, ತೋಟಗಾರಿಕೆ, ಮೀನುಗಾರಿಕೆ ಕ್ಷೇತ್ರದ ವಿಸ್ತೀರ್ಣವಾಗಬೇಕು. ಅಧಿಕಾರಿಗಳು ಬರೀ ಪೇಪರ್‌ದಲ್ಲಿ ಪ್ರಗತಿ ಕಾಣಿಸಿದರೆ ಸಾಲದು, ಕ್ಷೇತ್ರದಲ್ಲಿ ಕಣ್ಣಿಗೆ ಕಾಣುವಂತೆ ಬದಲಾವಣೆ ಆಗಬೇಕು ಎಂದು ಅವರು ಎಚ್ಚರಿಕೆ ನೀಡಿದರು.

ಜಿಲ್ಲಾಡಳಿತಕ್ಕೆ ಅಭಿನಂದನೆ: ಬೆಳೆಹಾನಿ ಕುರಿತು ಜಂಟಿ ಸಮೀಕ್ಷೆಯನ್ನು ಜಿಲ್ಲಾಧಿಕಾರಿಗಳ ನೇತೃತ್ವದಲ್ಲಿ ತುರ್ತಾಗಿ ಮುಗಿಸಿ, ರಾಜ್ಯದಲ್ಲಿ ಮೊದಲಿಗರಾಗಿದ್ದು, ರಾಜ್ಯ ಸರಕಾರದಿಂದ ಮೊದಲ ಹಂತದ ಪರಿಹಾರವು ಬಿಡುಗಡೆ ಆಗಿದೆ. ಜನಪರವಾಗಿ, ರೈತ ಪರವಾಗಿ ಬೆಳೆಹಾನಿ ಸಮೀಕ್ಷೆ, ಪೋರ್ಟಲ್ ಎಂಟ್ರಿ ಕಾರ್ಯವನ್ನು ತುರ್ತಾಗಿ ಮಾಡಿದಕ್ಕೆ ಜಿಲ್ಲಾಧಿಕಾರಿಗಳ ನೇತೃತ್ವದ ಜಿಲ್ಲಾಡಳಿತಕ್ಕೆ ಸರಕಾರದ ಪರವಾಗಿ ಅಭಿನಂದನೆಗಳನ್ನು ತಿಳಿಸಿದರು ಮತ್ತು ರೈತರಿಗೆ ಪರಿಹಾರ ಮೊತ್ತವನ್ನು ಹಂತ ಹಂತವಾಗಿ ಜಮೆ ಮಾಡಲು ತುರ್ತಾಗಿ ಕ್ರಮವಹಿಸಬೇಕೆಂದು ಅವರು ಸೂಚಿಸಿದರು.

**ಮಕ್ಕಳ ಆಹಾರ ಮಕ್ಕಳಿಗೆ ತಲುಪಿಸಿ:** ಜಿಲ್ಲೆಯಲ್ಲಿ ತಾಯಂದಿರ ಮರಣ ಪ್ರಮಾಣ ಹೆಚ್ಚಿದ್ದು, ಅದರ ಬಗ್ಗೆ ಪರಿಶೀಲಿಸಬೇಕು. ಮರಣ ಪ್ರಮಾಣ ಕಡಿಮೆ ಆಗುವಂತೆ ಆರೋಗ್ಯ ಇಲಾಖೆ ಮುನ್ನಚ್ಚರಿಕೆ ವಹಿಸಬೇಕು. ಮಹಿಳಾ ಮತ್ತು ಮಕ್ಕಳ ಅಭಿವೃದ್ಧಿ ಇಲಾಖೆ ಜಿಲ್ಲೆಯಲ್ಲಿ ಇನ್ನಷ್ಟು ತೃಪ್ತಿಕರವಾಗಿ ಕೆಲಸ ಮಾಡಬೇಕು. ಮಕ್ಕಳ ಆಹಾರ ಮಧ್ಯವರ್ತಿಗಳ ಪಾಲು, ಬೇರೆಯವರ ಪಾಲು ಆಗಬಾರದು. ಮುಂದಿನ ದಿನಗಳಲ್ಲಿ ಇಂತಹ ಲೋಪಗಳು ಕಂಡಬಂದರೆ ಜಿಲ್ಲಾ ಮಟ್ಟದ ಅಧಿಕಾರಿಯನ್ನು ಹೊಣೆ ಆಗಿಸಿ, ಶಿಸ್ತು ಕ್ರಮ ತೆಗೆದುಕೊಳ್ಳುತ್ತೇನೆ ಎಂದು ಡಾ॥ ರಾಮ್ ಪ್ರಸಾತ್ ಮನೋಹರ್ ವಿ. ಅವರು ಎಚ್ಚರಿಕೆ ನೀಡಿದರು.

**ಸಾಮಾಜಿಕ ಸಮೀಕ್ಷೆ ಯಶಸ್ವಿಗೊಳಿಸಿ:** ಜಿಲ್ಲೆಯಲ್ಲಿ ಹಿಂದುಳಿದ ವರ್ಗಗಳ ಸಾಮಾಜಿಕ ಮತ್ತು ಶೈಕ್ಷಣಿಕ ಸಮೀಕ್ಷೆ ಕಾರ್ಯ ಉತ್ತಮವಾಗಿ ನಡೆದಿದೆ. ಆದರೂ ಪೂರ್ಣ ಪ್ರಮಾಣದ ಗುರಿ ಸಾಧಿಸಿಲ್ಲ. ಅಕ್ಟೋಬರ್ 18 ರವರೆಗೆ ಮಾತ್ರ ಸಮೀಕ್ಷೆಗೆ ಕಾಲವಾಶವಿದೆ. ಸಮೀಕ್ಷೆ ಗ್ರಾಮೀಣ ಭಾಗದಲ್ಲಿ ತೃಪ್ತಿದಾಯಕವಾಗಿದ್ದು, ನಗರ ಪ್ರದೇಶದಲ್ಲಿ ಕುಂಠಿತವಾಗಿದೆ. ಸಮೀಕ್ಷೆ ನಿರೀಕ್ಷಿತಮಟ್ಟದಲ್ಲಿ ಪ್ರಗತಿ ಸಾಧಿಸಿದ ಪ್ರದೇಶಗಳಿಗೆ ಹಿರಿಯ ಅಧಿಕಾರಿಗಳು ಸ್ವತಃ ಭೇಟಿ ನೀಡಿ, ಸ್ಥಳೀಯ ತೊಂದರೆಗಳನ್ನು ಪರಿಹರಿಸಬೇಕು. ಕುಟುಂಬ ಹಾಗೂ ಜನಸಂಖ್ಯೆ ದೃಷ್ಟಿಯಿಂದ ಸಮೀಕ್ಷೆ ಶೇ. 100 ರಷ್ಟು ಆಗಬೇಕು. ಇದು ಎಲ್ಲ ಅಧಿಕಾರಿ, ಗಣತಿದಾರರ ಜವಾಬ್ದಾರಿ ಆಗಿದೆ ಎಂದು ಡಾ॥ ರಾಮ್ ಪ್ರಸಾತ್ ಮನೋಹರ್ ವಿ. ಅವರು ತಿಳಿಸಿದರು.

**ನರೇಗಾ ಒಗ್ಗೂಡಿಸಿ:** ನರೇಗಾ ಯೋಜನೆಯಡಿ ಹೆಚ್ಚಿನ ಉದ್ಯೋಗ ಸೃಜನೆ ಹಾಗೂ ಜೀವನೋಪಾಯ ಹೆಚ್ಚಿಸಲು ಮೀನುಗಾರಿಕೆ, ಅರಣ್ಯ, ತೋಗಾರಿಕೆ, ರೇಷ್ಮೆ ಮತ್ತು ಪಂಚಾಯತ ರಾಜ್ ಇಂಜಿನೀಯರಿಂಗ್ ಇಲಾಖೆಗಳ ಕಾರ್ಯಕ್ರಮ ಮತ್ತು ಕಾಮಗಾರಿಗಳನ್ನು ಒಗ್ಗೂಡುವಿಕೆ (ನರೇಗಾ ಕನ್ವರ್ಜನ್ಸ್) ಯಡಿ ಹಮ್ಮಿಕೊಳ್ಳಲು ಸೂಚಿಸಿದ ಉಸ್ತುವಾರಿ ಕಾರ್ಯದರ್ಶಿಗಳು ಈ ಕುರಿತು ಪರಿಶೀಲಿಸಿ, ಕ್ರಮವಹಿಸಲು ಜಿಲ್ಲಾ ಪಂಚಾಯತ ಉಪಕಾರ್ಯದರ್ಶಿಗಳಿಗೆ ಸೂಚನೆ ನೀಡಿದರು.

**ಅನುಮೋದನೆ ನೀಡಿದರೂ ಅಂದಾಜು ಪತ್ರಿಕೆ ಇಲ್ಲ:** ಪಂಚಾಯತ ರಾಜ್ ಇಂಜನೀಯರಿಂಗ್ ವಿಭಾಗದಿಂದ ಸಲ್ಲಿಕೆಯಾಗಿದ್ದ ಕ್ರಿಯಾಯೋಜನೆಗೆ ಮೂರು ತಿಂಗಳ ಹಿಂದೆಯೇ ಆಡಳಿತಾತ್ಮಕ ಅನುಮೊದನೆ ನೀಡಲಾಗಿದೆ. ಅನುಮೋದಿತ ಕ್ರಿಯಾಯೋಜನೆಯಲ್ಲಿನ ಕಾಮಗಾರಿಗಳಿಗೆ ಅಂದಾಜು ಪತ್ರಿಕೆ ತಯಾರಿಸುವಲ್ಲಿ ಇಲಾಖೆಯಿಂದ ವಿಳಂಬವಾಗಿದೆ. ಕಾಲಮಿತಿಯಲ್ಲಿ ಕಾಮಗಾರಿಯನ್ನು ಪೂರ್ಣಗೊಳಿಸಲು ಡಾ॥ ರಾಮ್ ಪ್ರಸಾತ್ ಮನೋಹರ್ ವಿ. ಅವರು ಸೂಚಿಸಿದರು.

ಮಹಾನಗರ ಪಾಲಿಕೆ ಆಯುಕ್ತ ಡಾ. ರುದ್ರೇಶ ಘಾಳಿ, ಪ್ರೊಬೇಷನರಿ ಐಎಎಸ್ ಅಧಿಕಾರಿ ರಿತೀಕಾ ವರ್ಮಾ ವೇದಿಕೆಯಲ್ಲಿದ್ದರು. ಜಿಲ್ಲಾ ಪಂಚಾಯತ ಮುಖ್ಯ ಯೋಜನಾಧಿಕಾರಿ ದೀಪಕ ಮಡಿವಾಳರ ಸ್ವಾಗತಿಸಿ, ಸಭೆ ನಿರ್ವಹಿಸಿದರು. ಜಿಲ್ಲಾ ಪಂಚಾಯತ ಉಪ ಕಾರ್ಯದರ್ಶಿ ಮಲ್ಲಿಕಾರ್ಜುನ ತೊದಲಬಾಗಿ ಅವರು ವಂದಿಸಿದರು.

ಸಭೆಯಲ್ಲಿ ವಿವಿಧ ಇಲಾಖೆಗಳ ಜಿಲ್ಲಾ ಮಟ್ಟದ ಅಧಿಕಾರಿಗಳು ಭಾಗವಹಿಸಿ, ಇಲಾಖಾವಾರು ಕಾಮಗಾರಿ ಮತ್ತು ಕಾರ್ಯಕ್ರಮಗಳ ಪ್ರಗತಿ ವರದಿಯನ್ನು ಮಂಡಿಸಿದರು.

## ರಸ್ತೆ ಸರಿಗೊಳಿಸಲು ಸಚಿವ ಜಾರಕಿಹೊಳಿ ಸೂಚನೆ



**ಚ. ಕಿತ್ತೂರು:** ಚನ್ನಮ್ಮನ ಕಿತ್ತೂರು ಹಾಗೂ ಖಾನಾಪುರ ಕ್ಷೇತ್ರದಲ್ಲಿ ಕೆಟ್ಟು ಹೋಗಿರುವ ರಸ್ತೆಗಳ ಕುರಿತು ಕಿತ್ತೂರು ಶಾಸಕರಾದ ಬಾಬಾಸಾಹೇಬ ಪಾಟೀಲ ಹಾಗೂ ಖಾನಾಪುರ ಶಾಸಕ ವಿಠ್ಠಲ ಹಲಗೇಕರ ಅವರ ಮನವಿಯ ಮೇರೆಗೆ ಮಂಗಳವಾರ ರಾಜ್ಯ ಲೋಕೋಪಯೋಗಿ ಸಚಿವ ಹಾಗೂ ಬೆಳಗಾವಿ ಜಿಲ್ಲಾ ಉಸ್ತುವಾರಿ ಸಚಿವ ಯಾವ ಭಾಗಗಳಲ್ಲಿ ಕೆಟ್ಟ ರಸ್ತೆ ಇದೆಯೋ ಅಲ್ಲಿ ಸ್ವತಃ ಸಚಿವರು ಬೇಟಿ ನೀಡಿ, ಸಂಬಂದಿಸಿದ ಅಧಿಕಾರಿಗಳೊಂದಿಗೆ ಪರಿಶೀಲನೆ ನಡೆಸಿ ಆದಷ್ಟು ಬೇಗ ರಸ್ತೆ ಸರಿ ಮಾಡಲು ಅಧಿಕಾರಿಗಳಿಗೆ ಸೂಚಿಸಿದರು.

ಈ ಸಂದರ್ಭದಲ್ಲಿ ಕಿತ್ತೂರು ಶಾಸಕ ಬಾಬಾಸಾಹೇಬ ಪಾಟೀಲ, ಖಾನಾಪುರ ಶಾಸಕ ವಿಠ್ಠಲ ಹಲಗೇಕರ, ಲೋಕೋಪಯೋಗಿ ಇಲಾಖೆಯ ಅಧಿಕಾರಿಗಳು ಉಪಸ್ಥಿತರಿದ್ದರು.



**ಬೈಲಹೊಂಗಲ: ಪಟ್ಟಣದ ಬಜಾರ ರಸ್ತೆಯಲ್ಲಿನ ಎಸ್.ಜಿ.ಚಿಕ್ಕಮಠ ಅವರ ಮೈದಾನದಲ್ಲಿ ಶ್ರೀ ಗುರು ತೋಂಟದಾರ್ಯ ನಾಟ್ಯ ಸಂಘ ಮಂಡಲಗಿರಿ, ತಾ.ಕುಕನೂರ ಇವರು ಅರ್ಪಿಸುವ, ಆನಂದ ಆರ್.ಬೆಂಗಳೂರು ವಿರಚಿತ "ಹೆಂಡ್ತಿ ಟೂರಿಗೆ ಗಂಡ ಬಾರ್‍ಗೆ" ಎಂಬ ಸಾಮಾಜಿಕ ನಾಟಕ ಪ್ರದರ್ಶನವಾಗುತ್ತಿದೆ.**

## ಪ್ರತಿಭಾ ಪುರಸ್ಕಾರ ಕಾರ್ಯಕ್ರಮ

**ಕಾರವಾರ:** ಉತ್ತರ ಕನ್ನಡ ಜಿಲ್ಲೆಯ ಸರ್ಕಾರಿ ನೌಕರರ ಸಂಘದ ವತಿಯಿಂದ ಸರ್ಕಾರಿ ನೌಕರರ ಮಕ್ಕಳ ಪ್ರತಿಭಾ ಪುರಸ್ಕಾರ ಕಾರ್ಯಕ್ರಮವನ್ನು ಅ. 18 ರಂದು ಬೆಳಿಗ್ಗೆ 11 ಗಂಟೆಗೆ ದೈವಜ್ಞ ಕಲ್ಯಾಣ ಮಂಟಪದಲ್ಲಿ ಹಮ್ಮಿಕೊಳ್ಳಲಾಗಿದೆ.

ಕಾರ್ಯಕ್ರಮದಲ್ಲಿ ಜಿಲ್ಲಾಧಿಕಾರಿ ಕೆ.ಲಕ್ಷ್ಮೀಪ್ರಿಯಾ, ಜಿಲ್ಲಾ ಪಂಚಾಯತ್ ಮುಖ್ಯ ಕಾರ್ಯನಿರ್ವಹಣಾಧಿಕಾರಿ ಡಾ.ದಿಲೀಷ್ ಶಶಿ, ಜಿಲ್ಲಾ ಪೊಲೀಸ್ ವರಿಷ್ಠಾಧಿಕಾರಿ ದೀಪನ್ ಎಂ.ಎನ್ ಮತ್ತಿತರರು ಭಾಗವಹಿಸಲಿದ್ದು, ಸರ್ಕಾರಿ ನೌಕರರ ಸಂಘದ ರಾಜ್ಯಾಧ್ಯಕ್ಷ ಸಿ.ಎಸ್. ಷಡಕ್ಷರಿ ಕಾರ್ಯಕ್ರಮದ ಅಧ್ಯಕ್ಷತೆ ವಹಿಸಲಿದ್ದಾರೆ.

ಪ್ರತಿಭಾ ಪುರಸ್ಕಾರ ಕಾರ್ಯಕ್ರಮದಲ್ಲಿ ಕಾರವಾರ ಮತ್ತು ಶಿರಸಿ ಶೈಕ್ಷಣಿಕ ಜಿಲ್ಲೆಯ ಸುಮಾರು 300 ಕ್ಕೂ ಹೆಚ್ಚು ಮಕ್ಕಳಿಗೆ ಮಕ್ಕಳನ್ನು ಗೌರವಿಸಲಾಗುವುದು. ಈ ಕಾರ್ಯಕ್ರಮದಲ್ಲಿ ಎಲ್ಲಾ ಸರ್ಕಾರಿ ನೌಕರರು ಭಾಗವಹಿಸುವಂತೆ ಜಿಲ್ಲಾ ಸರ್ಕಾರಿ ನೌಕರರ ಸಂಘದ ಜಿಲ್ಲಾಧ್ಯಕ್ಷ ಸಂಜೀವ ಕುಮಾರ ಎಸ್ ನಾಯ್ಕ ಪ್ರಕಟಣೆಯಲ್ಲಿ ತಿಳಿಸಿದ್ದಾರೆ.

## ಉಚಿತ ಕುರಿ, ಮೇಕೆ ಸಾಕಾಣಿಕೆ ತರಬೇತಿ

**ಕಾರವಾರ:** ಬೆಂಗಳೂರು ಗ್ರಾಮಾಂತರ ಜಿಲ್ಲೆ ಹೊಸಕೋಟೆ ತಾಲ್ಲೂಕು ಸೊಣ್ಣಹಳ್ಳಿಪುರದಲ್ಲಿರುವ ಕೆನರಾ ಬ್ಯಾಂಕ್ ಗ್ರಾಮೀಣ ಸ್ವ ಉದ್ಯೋಗ ತರಬೇತಿ ಸಂಸ್ಥೆಯಲ್ಲಿ ಅ.27 ರಿಂದ 13 ದಿನಗಳ ಕಾಲ ನಿರುದ್ಯೋಗಿ ಪುರುಷ ಹಾಗೂ ಮಹಿಳೆಯರಿಗೆ ಉಚಿತ ಕುರಿ ಮತ್ತು ಮೇಕೆ ಸಾಕಾಣಿಕೆ ತರಬೇತಿ ಶಿಬಿರವನ್ನು ಹಮ್ಮಿಕೊಳ್ಳಲಾಗಿದೆ. ಸ್ವಯಂ ಉದ್ಯೋಗಿಗಳಾಗಲು ಬಯಸುವ 18 ರಿಂದ 45 ವರ್ಷವಯಸ್ಸಿನ ಕರ್ನಾಟಕ ರಾಜ್ಯದ ಯಾವುದೇ ಜಿಲ್ಲೆಯ ನಿರುದ್ಯೋಗಿ ಪುರುಷರು ಹಾಗೂ ಮಹಿಳೆಯರು ಈ ಶಿಬಿರದಲ್ಲಿ ಪಾಲ್ಗೊಳ್ಳಬಹುದಾಗಿದೆ. ಈ ಶಿಬಿರದ ಸಮಯದಲ್ಲಿ ತರಬೇತಿ, ಊಟ ಹಾಗೂ ವಸತಿ ಸೌಕರ್ಯಗಳು ಉಚಿತವಾಗಿ ಶಿಬಿರಾರ್ಥಿಗಳಿಗೆ ಕಲ್ಪಿಸಲಾಗುವುದು. ಗ್ರಾಮೀಣ ಭಾಗದ ಬಿಪಿಎಲ್ ಅಭ್ಯರ್ಥಿಗಳಿಗೆ ಮೊದಲ ಆದ್ಯತೆಯನ್ನು ನೀಡಲಾಗುವುದು. ಅಭ್ಯರ್ಥಿಗಳು ಸ್ಥಳಿಯ ಭಾಷೆ ಬಲ್ಲವರಾಗಿದ್ದು, ಕನ್ನಡ ಓದಲು ಮತ್ತು ಬರೆಯಲು ತಿಳಿದಿರಬೇಕು. ತರಬೇತಿ ನಂತರ ಕೇಂದ್ರ ಸರ್ಕಾರದ ಗ್ರಾಮೀಣ ಸಚಿವಾಲಯದಿಂದ ಪ್ರಮಾಣ ಪತ್ರವನ್ನು ವಿತರಿಸಲಾಗುವುದು. ಆಸಕ್ತಿಯುಳ್ಳ ಅಭ್ಯರ್ಥಿಗಳು ಅ.27 ಬೆಳಗ್ಗೆ 9 ಗಂಟೆಗೆ ಕೆನರಾ ಬ್ಯಾಂಕ್ ಗ್ರಾಮೀಣ ಸ್ವ ಉದ್ಯೋಗ ತರಬೇತಿ ಸಂಸ್ಥೆ, ಸೊಣ್ಣಹಳ್ಳಿಪುರ, ಹಸಿಗಾಳ(ಅಂಚೆ), ಹೊಸಕೋಟೆ ತಾಲ್ಲೂಕು, ಬೆಂಗಳೂರು ಗ್ರಾಮಾಂತರ ಜಿಲ್ಲೆ ಇಲ್ಲಿ ನಡೆಯುವ ತರಬೇತಿಗೆ ನೇರವಾಗಿ ವಿದ್ಯಾರ್ಹತೆ ಮತ್ತು ವಿಳಾಸ ದಾಖಲಾತಿಗಳೊಂದಿಗೆ ಹಾಜರಾಗಲು ಸೂಚಿಸಲಾಗಿದೆ. ಹೆಚ್ಚಿನ ಮಾಹಿತಿಗಾಗಿ ಸಂಸ್ಥೆಯನ್ನು ದೂರವಾಣಿ ಸಂಖ್ಯೆ 8970476050, 9591514154, 9686248369 ಅನ್ನು ಸಂಪರ್ಕಿಸಬಹುದೆಂದು ಸಂಸ್ಥೆಯ ನಿರ್ದೇಶಕರು ಪ್ರಕಟಣೆಯಲ್ಲಿ ತಿಳಿಸಿದ್ದಾರೆ.

## ಕುಮಟಾ: ಇಂದು ವಿದ್ಯುತ್ ವ್ಯತ್ಯಯ

**ಕಾರವಾರ:** ಹೆಸ್ಕಾಂ, ಕುಮಟಾ ಉಪವಿಭಾಗದ ನಗರ ಶಾಖೆಯ ವ್ಯಾಪ್ತಿಯ 11ಕೆ.ವಿ ಇಂಡಸ್ಟ್ರೀಯಲ್ ಮಾರ್ಗದಲ್ಲಿ ಐ.ಆರ್.ಬಿ ರವರ ಲೈನ್ ಕಾಮಗಾರಿ ಹಾಗೂ 11ಕೆ.ವಿ ಚಿತ್ರಗಿ ಭಾಗದಲ್ಲಿ ತುರ್ತುನಿರ್ವಹಣಾ ಕಾರ್ಯವಿರುವುದರಿಂದ, ಅ.15 ರಂದು ಬೆಳಗ್ಗೆ 10 ಗಂಟೆಯಿಂದ ಸಂಜೆ 4 ಗಂಟೆವರೆಗೆ ಮತ್ತು ಗ್ರಾಮೀಣ ಶಾಖೆಯ ವ್ಯಾಪ್ತಿಯ 11ಕೆ.ವಿ ಮಿರ್ಜಾನ್ ಫೀಡರಿನ ಮಾರ್ಗದಲ್ಲಿ ಮತ್ತು 11ಕೆ.ವಿ ಕತಗಾಲ್ ಮಾರ್ಗದ ದಿವಗಿ ಹತ್ತಿರ ಹೊಸ 11ಕೆ.ವಿ ಮಾರ್ಗವನ್ನು ನಿರ್ಮಿಸುವ ಕಾರ್ಯವಿರುವುದರಿಂದ ಬೆಳಗ್ಗೆ 10 ಗಂಟೆಯಿಂದ ಸಂಜೆ ಸ ಗಂಟೆಯವರೆಗೆ ಮತ್ತು ಗೋಕರ್ಣ ಶಾಖೆಯ 11ಕೆ.ವಿ ಮಾದನಗೇರಿ, 11ಕೆ.ವಿ ಬಿಜ್ಜೂರ ಮತ್ತು 11ಕೆ.ವಿ ಗಂಗಾವಳಿ ಮಾರ್ಗಗಳ ಜಂಗಲ್ ಕಟ್ಟಿಂಗ್ ಕಾರ್ಯವಿರುವುದರಿಂದ ಬೆಳಗ್ಗೆ 10ಗಂಟೆಯಿಂದ ಮಧ್ಯಾಹ್ನ 2 ಗಂಟೆವರೆಗೆ ಹಾಗೂ 33/11ಕೆ.ವಿ ಮರಾಕಲ್ ಮಾರ್ಗದಲ್ಲಿ ಜಂಗಲ್ ಕಟ್ಟಿಂಗ್ ಕಾಮಗಾರಿ ಇರುವುದರಿಂದ ಬೆಳಗ್ಗೆ 10 ಗಂಟೆಯಿಂದ ಮಧ್ಯಾಹ್ನ 2 ಗಂಟೆವರೆಗೆ ವಿದ್ಯುತ್ ವ್ಯತ್ಯಯವಾಗಲಿದೆ. ಗ್ರಾಹಕರು ಸಹಕರಿಸುವಂತೆ ಹೆಸ್ಕಾಂ, ಕುಮಟಾ ಸಹಾಯಕ ಕಾರ್ಯನಿರ್ವಾಹಕ ಇಂಜಿನಿಯರು(ವಿ) ರವರು ಪ್ರಕಟಣೆಯಲ್ಲಿ ತಿಳಿಸಿದ್ದಾರೆ.

### ವಿದ್ಯಾರ್ಥಿ ನಿಲಯಗಳ ಪ್ರವೇಶ

## ಅರ್ಜಿ ಸಲ್ಲಿಸಲು ಅವಧಿ ವಿಸ್ತರಣೆ

**ಹಾವೇರಿ:** ಹಿಂದುಳಿದ ವರ್ಗಗಳ ಕಲ್ಯಾಣ ಇಲಾಖೆಯ ಮೆಟ್ರಿಕ್-ನಂತರದ ವಿದ್ಯಾರ್ಥಿನಿಲಯಗಳ (ವೃತ್ತಿಪರ ಪದವಿ ಮತ್ತು ಸ್ನಾತಕೋತರ ಪದವಿ ಕೋರ್ಸಿನ ವಿದ್ಯಾರ್ಥಿಗಳಿಗೆ ಮಾತ್ರ) ಪ್ರವೇಶಕ್ಕೆ, ಆನ್‌ಲೈನ್ ಮೂಲಕ ಅರ್ಜಿ ಸಲ್ಲಿಸಲು ಅವಧಿ ವಿಸ್ತರಿಸಲಾಗಿದೆ.

ಎಲ್ಲಾ ಜಿಲ್ಲೆಗಳಲ್ಲಿ ಕಾರ್ಯನಿರ್ವಹಿಸುತ್ತಿರುವ ಹಿಂದುಳಿದ ವರ್ಗಗಳ ಕಲ್ಯಾಣ ಇಲಾಖೆಯ ಮೆಟ್ರಿಕ್ ನಂತರದ ಬಾಲಕ ಮತ್ತು ಬಾಲಕಿಯರ ವಿದ್ಯಾರ್ಥಿನಿಲಯಗಳಲ್ಲಿ ಪ್ರವೇಶಕ್ಕಾಗಿ ಹೊಸದಾಗಿ ಪ್ರವೇಶ ಬಯಸುವ ಪ್ರವರ್ಗ-1, 2ಎ, 2ಬಿ, 3ಎ, 3ಬಿ, ಪ.ಜಾ ಮತ್ತು ಪ.ವರ್ಗದ ವೃತ್ತಿಪರ ಪದವಿ ಮತ್ತು ಸ್ನಾತಕೋತ್ತರ ಪದವಿ ಕೋರ್ಸಿನಲ್ಲಿ ವ್ಯಾಸಂಗ ಮಾಡುತ್ತಿರುವ ವಿದ್ಯಾರ್ಥಿಗಳಿಂದ 2025-26ನೇ ಸಾಲಿಗೆ ಆನ್‌ಲೈನ್ ಮೂಲಕ ಅರ್ಜಿ ಸಲ್ಲಿಕೆಯ ದಿನಾಂಕ 14-10-2025 ರವರೆಗೆ ವಿಸ್ತರಿಸಲಾಗಿದೆ.

ತಾಲ್ಲೂಕುವಾರು ವಿದ್ಯಾರ್ಥಿನಿಲಯಗಳ ವಿವರ ಹಾಗೂ ವಿದ್ಯಾರ್ಥಿನಿಲಯದ ಪ್ರವೇಶಕ್ಕೆ ಇರಬೇಕಾದ ಅರ್ಹತೆ, ಸಲ್ಲಿಸಬೇಕಾದ ದಾಖಲೆಗಳ ವಿವರ ಮತ್ತು ಸರ್ಕಾರದ ಆದೇಶಕ್ಕಾಗಿ ಇಲಾಖೆಯ ವೆಬ್‌ಸೈಟ್ **https://ocwd karnataka.gov.in/** ನ್ನು ನೋಡಬಹುದು. ಅರ್ಜಿ ಸಲ್ಲಿಸಲು ತಾಂತ್ರಿಕ ತೊಂದರೆಗಳಾದಲ್ಲಿ bowdhelpline@gmail.com ಇ-ಮೇಲ್ ಮುಖಾಂತರ ಅಥವಾ ಜಿಲ್ಲಾ ಅಥವಾ ತಾಲ್ಲೂಕು ಹಿಂದುಳಿದ ವರ್ಗಗಳ ಕಲ್ಯಾಣ ಇಲಾಖೆ ಅಧಿಕಾರಿಗಳು, ಅಗತ್ಯ ದಾಖಲೆಗಳೊಂದಿಗೆ ಸಂಪರ್ಕಿಸಬಹುದು ಹಾಗೂ ಸಹಾಯವಾಣಿ ಸಂಖ್ಯೆ 8050770004 ಮತ್ತು 8050770005ನ್ನು ಸಂಪರ್ಕಿಸಬಹುದುಎಂದು ಹಿಂದುಳಿದ ವರ್ಗಗಳ ಕಲ್ಯಾಣ ಇಲಾಖೆ ಅಧಿಕಾರಿಗಳು ಪ್ರಕಟಣೆಯಲ್ಲಿ ತಿಳಿಸಿದ್ದಾರೆ.

### ರಾಷ್ಟ್ರೀಯ ಸಾರ್ವತ್ರಿಕ ಲಸಿಕಾ ಕಾರ್ಯಕ್ರಮದ ಜಿಲ್ಲಾ ಮಟ್ಟದ ಜಾಗೃತಿ ಸಮಿತಿ ಸಭೆಯಲ್ಲಿ ಡಾ.ಸುರೇಶ ಬಿ. ಇಟ್ನಾಳ ಸೂಚನೆ

# ಲಸಿಕೆಯಿಂದ ಯಾವುದೇ ಮಗು ವಂಚಿತವಾಗದಂತೆ ಎಚ್ಚರ ವಹಿಸಿ

**ಕೊಪ್ಪಳ:** ಮಗುವಿನ ಆರೋಗ್ಯದ ಬಗ್ಗೆ ಅತಿ ಹೆಚ್ಚಿನ ಕಾಳಜಿ ವಹಿಸಲು ಮತ್ತು ನಿಗದಿತ ಸಮಯಕ್ಕೆ ಲಸಿಕೆ ಹಾಕುವಂತೆ ಸ್ಥಳೀಯವಾಗಿ ಕಾರ್ಯನಿರ್ವಹಿಸುವ ಆಶಾ ಕಾರ್ಯಕರ್ತೆಯರು, ಆರೋಗ್ಯ ಕಾರ್ಯಕರ್ತರು ಸೂಕ್ತ ಸಮಯದಲ್ಲಿ ತಿಳಿವಳಿಕೆ ಮೂಡಿಸಲು ಅಗತ್ಯ ಕ್ರಮಕೈಗೊಳ್ಳಬೇಕು. ಲಸಿಕೆಯಿಂದ ಯಾವುದೇ ಮಗು ವಂಚಿತವಾಗದಂತೆ ಎಚ್ಚರ ವಹಿಸಬೇಕು ಎಂದು ಸಂಬಂಧಪಟ್ಟ ಅಧಿಕಾರಿಗಳಿಗೆ ಜಿಲ್ಲಾಧಿಕಾರಿ ಡಾ. ಸುರೇಶ ಬಿ. ಇಟ್ನಾಳ ಅವರು ಸೂಚನೆ ನೀಡಿದರು.



ಸೋಮವಾರದಂದು ಜಿಲ್ಲಾ ಆರೋಗ್ಯ ಮತ್ತು ಕುಟುಂಬ ಕಲ್ಯಾಣ ಇಲಾಖೆಯಿಂದ ಜಿಲ್ಲಾಧಿಕಾರಿಗಳ ಕಚೇರಿ ಸಭಾಂಗಣದಲ್ಲಿ ನಡೆದ ರಾಷ್ಟ್ರೀಯ ಸಾರ್ವತ್ರಿಕ ಲಸಿಕಾ ಕಾರ್ಯಕ್ರಮದ ಜಿಲ್ಲಾ ಮಟ್ಟದ ಜಾಗೃತಿ ಸಮಿತಿ ಸಭೆಯ ಅಧ್ಯಕ್ಷತೆ ವಹಿಸಿ ಅವರು ಮಾತನಾಡಿದರು.

ಮಗು ಜನಿಸಿದ 24 ಗಂಟೆಯೊಳಗೆ ಹಾಕಬೇಕಾದ ಕಡ್ಡಾಯ ಲಸಿಕೆಗಳು, ಮಗುವಿನ ಬೆಳವಣಿಗೆಯ ವಿವಿಧ ಹಂತಗಳಲ್ಲಿ ಹಾಕಬೇಕಾದ ಲಸಿಕೆಗಳು, ಲಸಿಕೆಯಿಂದ ಮಗುವಿಗೆ ಆಗುವ ಆರೋಗ್ಯ ಪ್ರಯೋಜನಗಳು, ಲಸಿಕೆ ಹಾಕಿಸದೇ ಇರುವುದರಿಂದ ಆಗುವ ತೊಂದರೆಗಳು ಸೇರಿದಂತೆ ನಾನಾ ವಿಷಯಗಳ ಬಗ್ಗೆ ಪ್ರತಿಯೊಬ್ಬ ತಾಯಂದಿರಿಗೆ ಗೊತ್ತಿರಬೇಕು. ಹಾಗಾಗಿ ಸಂಬಂಧಿಸಿದ ಅಧಿಕಾರಿಗಳು ಅವರಿಗೆ ತಿಳಿವಳಿಕೆ ಮೂಡಿಸಲು ಅಗತ್ಯ ಕ್ರಮಕೈಗೊಳ್ಳಬೇಕು ಎಂದು ಅವರು ಹೇಳಿದರು.

ಹಾವು ಕಡಿತದ ಬಗ್ಗೆಯೂ ಸಹ ಸಾರ್ವಜನಿಕರಲ್ಲಿ ಜಾಗೃತಿ ಮೂಡಿಸುವ ಕಾರ್ಯ ಮಾಡಬೇಕು, ಹಾವು ಕಚ್ಚಿದ 30 ನಿಮಿಷಗಳ ಒಳಗಾಗಿ ಹತ್ತಿರದ ಆರೋಗ್ಯ ಕೇಂದ್ರಕ್ಕೆ ಭೇಟಿ ನೀಡಿ ಸರಿಯಾದ ಸಮಯಕ್ಕೆ ಚಿಕಿತ್ಸೆ ಪಡೆಯಲು ತಿಳುವಳಿಕೆ ನೀಡುವಂತೆ ತಿಳಿಸಿದರು.

ಜಿಲ್ಲೆಯಲ್ಲಿನ ತಾಯಿ-ಮಗು ಮರಣ ಸಂಖ್ಯೆಯನ್ನು ತಗ್ಗಿಸಲು ಅಗತ್ಯ ಕ್ರಮಗಳನ್ನು ಕೈಗೊಳ್ಳಿ ಹಾಗೂ ಮಾರ್ಚ್ ಅಂತ್ಯದವರೆಗೂ ಯಾವುದೇ ತಾಯಿ-ಮಗು ಮರಣ ಪ್ರಕರಣ ದಾಖಲಾಗದಂತೆ ಕ್ರಮ ವಹಿಸಿ. ನಿಮ್ಮ ಕರ್ತವ್ಯದಲ್ಲಿ ಪ್ರಾಮಾಣಿಕತೆ ಇರಲಿ, ಬೇಜವಾಬ್ದಾರಿ ತೋರದಿರಿ ಎಂದರು.

ಜಿಲ್ಲಾ ಪಂಚಾಯತ್‌ನ ಮುಖ್ಯ ಕಾರ್ಯನಿರ್ವಾಹಕ ಅಧಿಕಾರಿಗಳಾದ ವರ್ಣಿತ್ ನೇಗಿ ಅವರು ಮಾತನಾಡಿ, ಅರ್ಹವಿರುವ ಪ್ರತಿಯೊಬ್ಬ ಮಗುವಿಗೂ ಲಸಿಕೆ ಹಾಕಿಸಲು ಕ್ರಮಕೈಗೊಳ್ಳಬೇಕು. ಈ ಕಾರ್ಯಕ್ಕೆ ಮಹಿಳಾ ಮತ್ತು ಮಕ್ಕಳ ಅಭಿವೃದ್ಧಿ ಇಲಾಖೆ ಹಾಗೂ ಸಾರ್ವಜನಿಕ ಶಿಕ್ಷಣ ಇಲಾಖೆಯವರು ಆರೋಗ್ಯ ಇಲಾಖೆಯೊಂದಿಗೆ ಕೈಜೋಡಿಸಬೇಕು ಎಂದು ಹೇಳಿದರು.

ಸಭೆಯಲ್ಲಿ ಜಿಲ್ಲಾ ಆರೋಗ್ಯ ಮತ್ತು ಕುಟುಂಬ ಕಲ್ಯಾಣಾಧಿಕಾರಿಗಳಾದ ಡಾ.ಲಿಂಗರಾಜು ಟಿ., ಎಸ್.ಎಂ.ಓ ಡಾ.ಶ್ರೀಧರ್, ಶಾಲಾ ಶಿಕ್ಷಣ ಮತ್ತು ಸಾಕ್ಷರತಾ ಇಲಾಖೆಯ ಉಪನಿರ್ದೇಶಕ ಸೋಮಶೇಖರಗೌಡ ಪಾಟೀಲ್, ಜಿಲ್ಲಾ ಕುಟುಂಬ ಕಲ್ಯಾಣ ಅಧಿಕಾರಿ ಡಾ.ರವೀಂದ್ರನಾಥ ಎಂ.ಹೆಚ್., ಜಿಲ್ಲಾ ಸರ್ವೇಕ್ಷಣಾಧಿಕಾರಿ ಡಾ.ನಂದಕುಮಾರ್, ಜಿಲ್ಲಾ ರೋಗವಾಹಕ ಆಶ್ರಿತ ರೋಗಗಳ ನಿಯಂತ್ರಣಾಧಿಕಾರಿ ಡಾ. ಕುಮಾರಸ್ವಾಮಿ ಗೋನಾಳ, ಕ್ಷಯರೋಗ ನಿಯಂತ್ರಣಾಧಿಕಾರಿ ಡಾ.ಶಶಿಧರ, ಕುಷ್ಠರೋಗ ನಿರ್ಮೂಲನಾಧಿಕಾರಿ ಡಾ. ಪ್ರಕಾಶ ಹೆಚ್., ಜಿಲ್ಲಾ ಮಲೇರಿಯಾ ನಿಯಂತ್ರಣಾಧಿಕಾರಿ ಡಾ.ವೆಂಕಟೇಶ, ಕಿಮ್ಸ್ ಸ್ತ್ರೀರೋಗ ತಜ್ಞರಾದ ಡಾ.ಧನಲಕ್ಷ್ಮೀ, ಮಹಿಳಾ ಮತ್ತು ಮಕ್ಕಳ ಅಭಿವೃದ್ಧಿ ಇಲಾಖೆ ಉಪನಿರ್ದೇಶಕ ಪಿ.ವೈ.ಶೆಟ್ಟೆಪ್ಪನವರ್, ಗಂಗಾವತಿ ಸ್ತ್ರೀರೋಗ ತಜ್ಞರಾದ ಡಾ. ಈಶ್ವರ ಸವಡಿ ಅವರು ಸೇರಿದಂತೆ ಎಲ್ಲಾ ತಾಲೂಕುಗಳ ಆರೋಗ್ಯಾಧಿಕಾರಿಗಳು, ತಜ್ಞ ವೈದ್ಯರು, ವೈದ್ಯಾಧಿಕಾರಿಗಳು, ವಿವಿಧ ಇಲಾಖೆಗಳ ಅಧಿಕಾರಿಗಳು ಉಪಸ್ಥಿತರಿದ್ದರು.

## ರೈತರ ಜಮೀನುಗಳಿಗೆ ಭೇಟಿ ನೀಡಿ ಸಮಸ್ಯೆ ಆಲಿಸಿ: ಪಾಟೀಲ

**ಬಾಗಲಕೋಟೆ:** ರೈತರ ಸಂಕಷ್ಟಗಳನ್ನು ತಿಳಿಯಲು ಅಧಿಕಾರಿಗಳು ರೈತರ ಜಮೀನುಗಳಿಗೆ ಭೇಟಿ ನೀಡಿ, ಅಲ್ಲಿನ ನಷ್ಟದ ಬಗ್ಗೆ ತಿಳಿದು, ಅದಕ್ಕೆ ಯಾವ ರೀತಿ ಪರಿಹಾರ ಕಲ್ಪಿಸಿ ಕೊಡಬಹುದು ಎಂಬುದರ ಕುರಿತು ವರದಿಸಲ್ಲಿಸುವಂತೆ ಶಾಸಕ ಜೆ.ಟಿ.ಪಾಟೀಲ್ ಅಧಿಕಾರಿಗಳಿಗೆ ಸೂಚಿಸಿದರು.

ನವನಗರದ ಹೊಸ ಜಿಲ್ಲಾ ಪಂಚಾಯತ್ ಸಭಾ ಭವನದಲ್ಲಿ ಸೋಮವಾರ ಹೆರಕಲ್ ಏತ ನೀರಾವರಿ ಉತ್ತರ ಮತ್ತು ದಕ್ಷಿಣ ಯೋಜನೆಗೆ ಸಂಬಂಧಿಸಿದಂತೆ ಸಮಸ್ಯೆಗಳ ಕುರಿತು ಚರ್ಚಿಸಲು ಆಯೋಜಿಸಲಾದ ಸಭೆಯ ಅಧ್ಯಕ್ಷತೆ ವಹಿಸಿ ಮಾತನಾಡಿದ ಅವರು ಯೋಜನೆಗೆ ರೈತರು ನೀಡಿದ ಜಮೀನಿಗೆ ಪರಿಹಾರ ತಡವಾದರೂ ಪರವಾಗಿಲ್ಲ, ಕೆಲಸ ಬೇಗ ಆಗಲಿ ಎಂದು ಆಗ್ರಹಿಸುತ್ತಿದ್ದು, ಕೆಲಸ ಶೀಘ್ರವಾಗಬೇಕು. ಅಧಿಕಾರಿಗಳು ವಿಳಂಬ ಅಥವಾ ಅಸಡ್ಡೆ ತೋರಿದಲ್ಲಿ ಅವರ ವಿರುದ್ಧ ಕ್ರಮ ಕೈಗೊಳ್ಳಲಾಗುವುದು ಎಂದರು.

ರೈತರ ಜಮೀನಿನ ಜೊತೆಗೆ ಅದರಲ್ಲಿನ ಬೆಳೆ, ಕಟ್ಟಡ ಎಲ್ಲದಕ್ಕೂ ಪರಿಹಾರ ದೊರೆಯಲಿದೆ. ಕಾಲುವೆ ಕಾಮಗಾರಿ ಪ್ರಯುಕ್ತ ದಾರಿ ಇಲ್ಲದ ಜಮೀನುಗಳಿಗೆ ದಾರಿ ಮಾಡಿ ಕೊಡುವಂತೆ, ಎಲ್ಲ ಸರ್ಕಾರಿ ಕಛೇರಿಗಳಲ್ಲೂ ಯಾವುದೇ ಕೆಲಸಕ್ಕೆ ಬಂದ ರೈತರನ್ನು ಗೌರವದಿಂದ ಕಾಣುವಂತೆ ಅಧಿಕಾರಿಗಳಿಗಳಿಗೆ ಸೂಚಿಸಿದರು.

ಸಭೆಯಲ್ಲಿ ಅಪರ ಜಿಲ್ಲಾಧಿಕಾರಿ ಅಶೋಕ ತೇಲಿ, ಮುಖ್ಯ ಅಭಿಯಂತರರು, ವಿಶೇಷ ಭೂಸ್ವಾಧೀನ ಅಧಿಕಾರಿಗಳು , ತಹಶೀಲ್ದಾರರು ಮತ್ತು ಯೋಜನೆಗೆ ಸಂಬಂಧಿಸಿದ ಗ್ರಾಮಗಳ ಹಿರಿಯರು, ರೈತರು ಹಾಗೂ ಕೆ ಬಿ ಜೆ ಎನ್ ಎಲ್, ಕಂದಾಯ ಇಲಾಖೆಯ ಅಧಿಕಾರಿಗಳು ಉಪಸ್ಥಿತರಿದ್ದರು.



## ಕೇಂದ್ರ ತಂಡದಿಂದ ಈರುಳ್ಳಿ ಬೆಳೆ ಸ್ಥಿತಿಗತಿ ವೀಕ್ಷಣೆ



**ಬಾಗಲಕೋಟೆ:** ಜಿಲ್ಲೆಗೆ ಆಗಮಿಸಿದ ಕೇಂದ್ರದ ಉಪ ಕೃಷಿ ಮಾರುಕಟ್ಟೆ ಸಲಹೆಗಾರಾದ ಬಿ.ಕೆ.ಪೃಷ್ಟಿ ನೇತೃತ್ವದ ಕೇಂದ್ರ ತಂಡ ವಿವಿಧ ಈರುಳ್ಳಿ ಕ್ಷೇತ್ರಗಳಿಗೆ ಭೇಟಿ ನೀಡಿ ಬೆಳೆ ಸ್ಥಿತಿಗತಿಯನ್ನು ವೀಕ್ಷಣೆ ಮಾಡಿದರು.

ಮಂಗಳವಾರ ಭೇಟಿ ನೀಡಿದ ಅವರು ಜಿಲ್ಲೆಯ ವಿವಿಧ ಈರುಳ್ಳಿ ಬೆಳೆ ತಾಕುಗಳಿಗೆ ಭೇಟಿ ನೀಡಿ ಬೆಳೆ ಹಾನಿ ವೀಕ್ಷಣೆ ಮಾಡಿದರು. ಅಲ್ಲದೇ ರೈತರಿಂದ ಹಾನಿಯ ಮಾಹಿತಿಯನ್ನು ಪಡೆದುಕೊಂಡು ನಂತರ ಬಾಗಲಕೋಟೆ ಕೃಷಿ ಮಾರುಕಟ್ಟೆ ಪ್ರಾಂಗಣಕ್ಕೆ ಭೇಟಿ ನೀಡಿ ಈರುಳ್ಳಿ ಮಾರಾಟದ ಹರಾಜು ಪ್ರಕ್ರಿಯೆಯನ್ನು ವೀಕ್ಷಣೆ ಮಾಡಿದರು. ನಂತರ ಜಿಲ್ಲಾಧಿಕಾರಿಗಳನ್ನು ಭೇಟಿ ಮಾಡಿ ಜಿಲ್ಲೆಯಲ್ಲಿ ಹಾನಿಗೊಳಗಾದ ಈರುಳ್ಳಿ ಬೆಳೆಯ ಮಾಹಿತಿಯನ್ನು ಪಡೆದುಕೊಂಡು ಹಾನಿ ಕುರಿತು ಸರಕಾರಕ್ಕೆ ಪ್ರಸ್ತಾವಣೆ ಕಳುಹಿಸುವುದಾಗಿ ಹೇಳಿದರು.

ರೈತರು ಬೆಳೆದ ಈರುಳ್ಳಿ ಬೆಳೆ ಸಂಪೂರ್ಣವಾಗಿ ಹಾನಿಗೊಳಗಾಗಿದ್ದು, ರೈತರಿಗೆ ಸೂಕ್ತ ಪರಿಹಾರ ದೊರೆಯುಂತೆ ಮಾಡಬೇಕೆಂದು ಸಂಸದ ಪಿ.ಸಿ.ಗದ್ದಿಗೌಡರ ಮತ್ತು ಜಿಲ್ಲಾಧಿಕಾರಿ ಸಂಗಪ್ಪ ಕೇಂದ್ರ ತಂಡಕ್ಕೆ ಮನವಿ ಮಾಡಿಕೊಂಡರು. ಕೇಂದ್ರ ತಂಡದಲ್ಲಿ ಡಿಪಿಪಿಕ್ಯೂನ ಉಪನಿರ್ದೇಶಕರು ಡಾ.ವಿ.ಡಿ.ನಿಗಮ್, ಗ್ರಾಹಕರ ವ್ಯವಹಾರಗಳ ಇಲಾಖೆಯ ಬೆಲೆ ಮೇಲ್ವಿಚಾರಣಾ ವಿಭಾಗದ ಉಪ ನಿರ್ದೇಶಕ ರಾಜೀವ್ ಕುಮಾರ, ಡಿ.ಎ & ಎಫ್.ಡಬ್ಲೂನ ಅಂಡರ್ ಸೆಕ್ರೆಟರಿ ಮನೋಜ್ ಕೆ, ಎನ್.ಎಚ್.ಆರ್.ಡಿ.ಎಫ್‌ನ ಕೇಂದ್ರದ ಮುಖ್ಯಸ್ಥ ಡಾ.ತಿಲಕ ಜೆ.ಸಿ ಸೇರಿದಂತೆ ಬೆಳಗಾವಿ ವಿಭಾಗೀಯ ತೋಟಗಾರಿಕೆ ಜಂಟಿ ನಿರ್ದೇಶಕ ಐ.ಕೆ. ದೊಡಮನಿ, ಜಿಲ್ಲಾ ತೋಟಗಾರಿಕೆ ಜಂಟಿ ನಿರ್ದೇಶಕ ರವೀಂದ್ರ ಹಕಾಟಿ ಸೇರಿದಂತೆ ಇತರರು ಉಪಸ್ಥಿತರಿದ್ದರು.

## ಇಂದು ವಿದ್ಯುತ್ ವ್ಯತ್ಯಯ

**ಕಾರವಾರ:** ಹೊನ್ನಾವರ ತಾಲೂಕಿನ ಪಟ್ಟಣ ಶಾಖೆಯ ಎಲ್.ಐ.ಸಿ, ಫೀಡರ್ ವ್ಯಾಪ್ತಿಯಲ್ಲಿ ಹಾಘೂ ಗೇರುಸೊಪ್ಪ ಶಾಖಾ ವ್ಯಾಪ್ತಿಯ ಮಾಗೋಡ ಫೀಡರ್ ವ್ಯಾಪ್ತಿಯಲ್ಲಿ 11 ಕೆ.ವಿ ಮಾರ್ಗದ ನಿರ್ವಹಣೆಯ ಕೆಲಸದ ನಿಮಿತ್ತ ಅ.15 ರಂದು ಬೆಳಗ್ಗೆ 10 ರಿಂದ ಸಂಜೆ 4 ಗಂಟೆಯವರೆಗೆ ವಿದ್ಯುತ್ ವ್ಯತ್ಯಯವಾಗಲಿದೆ. ಗ್ರಾಹಕರು ಸಹಕರಿಸುವಂತೆ ಹೊನ್ನಾವರ ಉಪ-ವಿಭಾಗದ ಸಹಾಯಕ ನಿರ್ದೇಶಕರು ಪ್ರಕಟಣೆಯಲ್ಲಿ ತಿಳಿಸಿದ್ದಾರೆ.

## ಅರ್ಜಿ ಆಹ್ವಾನ

**ಧಾರವಾಡ:** ಧಾರವಾಡದ ಜಿಲ್ಲಾ ಕಾನೂನು ಸೇವೆಗಳ ಪ್ರಾಧಿಕಾರದಡಿಯಲ್ಲಿ ರಚನೆಗೊಂಡ ಕಾನೂನು ನೆರವು ಅಭಿರಕ್ಷಕರ ಕಛೇರಿ (ಐಜಿಅಚಿಟ ಯಜ ಆಜಜಿಜಿಟ್ಟಿಜ ಅಡಿಣ್ಟಿಜಟ ಖಥಿಣಜಟ) ಯಲ್ಲಿ ಗುತ್ತಿಗೆ ಆಧಾರದ ಮೇಲೆ ಕಾರ್ಯನಿರ್ವಹಿಸಲು ಖಾಲಿ ಇರುವ ಉಪ ಕಾನೂನು ನೆರವು ಅಭಿರಕ್ಷಕರು-03, ಸಹಾಯಕ ಕಾನೂನು ನೆರವು ಅಭಿರಕ್ಷಕ-01 ಹುದ್ದೆಗಳಿಗೆ ಅರ್ಹ ನ್ಯಾಯವಾದಿಗಳಿಂದ ಅರ್ಜಿ ಆಹ್ವಾನಿಸಲಾಗಿದೆ.ಆಸಕ್ತ ಅರ್ಹ ಅಭ್ಯರ್ಥಿಗಳು ಅಕ್ಟೋಬರ 25, 2025 ರೊಳಗಾಗಿ ಭರ್ತಿಮಾಡಿದ ಅರ್ಜಿಗಳನ್ನು (ದ್ವಿಪ್ರತಿಯಲ್ಲಿ) ಸದಸ್ಯ ಕಾರ್ಯದರ್ಶಿಗಳ ಕಾರ್ಯಾಲಯ, ಜಿಲ್ಲಾ ಕಾನೂನು ಸೇವೆಗಳ ಪ್ರಾಧಿಕಾರ, ಎಡಿಆರ್ ಕಟ್ಟಡ ಸಿವಿಲ್ ನ್ಯಾಯಾಲಯಗಳ ಆವರಣ, ಧಾರವಾಡ ಇಲ್ಲಿಗೆ ಸಲ್ಲಿಸಬೇಕು. ಜಿಲ್ಲಾ ನ್ಯಾಯಾಲಯದ ಅಂತರ್ಜಾಲದಲ್ಲಿ ಪ್ರಕಟಿಸಲಾಗಿರುತ್ತದೆ. ಹಾಗೂ ಹೆಚ್ಚಿನ ಮಾಹಿತಿಗಾಗಿ ಜಿಲ್ಲಾ ಕಾನೂನು ಸೇವೆಗಳ ಪ್ರಾಧಿಕಾರ ಅಥವಾ ತಾಲ್ಲೂಕು ಕಾನೂನು ಸೇವಾ ಸಮಿತಿಗಳ ಕಛೇರಿಯನ್ನು ಸಂಪರ್ಕಿಸಬಹುದು ಎಂದು ಪ್ರಧಾನ ಜಿಲ್ಲಾ ಮತ್ತು ಸತ್ರ ನ್ಯಾಯಾಧೀಶರಾದ ಬಿ.ಎಸ್. ಭಾರತಿ ಅವರು ಪ್ರಕಟಣೆಯಲ್ಲಿ ತಿಳಿಸಿದ್ದಾರೆ.

## ದೀಪಾವಳಿ ಹಬ್ಬ: ಮದ್ದು ಮಾರಾಟಕ್ಕೆ ಸ್ಥಳ ನಿಗದಿ

**ಹಾವೇರಿ:** ದೀಪಾವಳಿ ಹಬ್ಬದ ಅಂಗವಾಗಿ ಸಾರ್ವಜನಿಕ ಸುರಕ್ಷತೆ ಹಿತದೃಷ್ಟಿಯಿಂದ ಹಾಗೂ ಅಹಿತಕರ ಘಟನೆಗಳನ್ನು ತಪ್ಪಿಸಲು ಮುಂಜಾಗ್ರತಾ ಕ್ರಮವಾಗಿ ಜಿಲ್ಲೆಯಲ್ಲಿ ಅ.15 ರಿಂದ ಅ.27ರವರೆಗೆ ಮದ್ದು ಮಾರಾಟ ಮಾಡಲು ಜಿಲ್ಲೆಯಲ್ಲಿ ಈ ಕೆಳಕಂಡ ಸ್ಥಳ ನಿಗಧಿಗೊಳಿಸಿ ಜಿಲ್ಲಾಧಿಕಾರಿ ಹಾಗೂ ಜಿಲ್ಲಾ ದಂಡಾಧಿಕಾರಿ ಡಾ.ವಿಜಯಮಹಾಂತೇಶ ದಾನಮ್ಮನವರ ಅವರು ಆದೇಶ ಹೊರಡಿಸಿದ್ದಾರೆ.

ಅಧಿಕೃತವಾಗಿ ಪರವಾನಿಗೆ ಪಡೆದ ಮಾರಾಟಗಾರರು ಮಾತ್ರ ಕೇವಲ ಹಸಿರು ಪಟಾಕಿಗಳನ್ನಷ್ಟೇ ತಾತ್ಕಾಲಿಕ ಶೆಡ್ಡುಗಳನ್ನು ಅಗ್ನಿಶಾಮಕ ಇಲಾಖೆಯ ನಿರ್ದೇಶನದಂತೆ ನಿರ್ಮಿಸಿಕೊಂಡು , ಎಲ್ಲ ಸುರಕ್ಷತಾ ವ್ಯವಸ್ಥೆಗಳನ್ನು ಅಳವಡಿಸಿಕೊಂಡು, ಆಯಾ ನಗರಸಭೆ, ಪುರಸಭೆ, ಪಟ್ಟಣ ಪಂಚಾಯತ್ ಹಾಗೂ ಗ್ರಾಮ ಪಂಚಾಯತಿಯವರಿಂದ ಪ್ರತ್ಯೇಕ ಅನುಮತಿ, ನಿರಾಕ್ಷೇಪಣಾ ಪತ್ರ ಪಡೆದುಕೊಂಡು ಮಾರಾಟ ಮಾಡಲು ಆದೇಶಿಸಲಾಗಿದೆ.

**ಮದ್ದು ಮಾರಾಟ ಸ್ಥಳ:** ಹಾವೇರಿ ನಗರದ ಮುನ್ಸಿಪಲ್ ಹೈಸ್ಕೂಲ್ ಮೈದಾನ, ಗುತ್ತಲ ಗ್ರಾಮದ ಆಸ್ತಿ ನಂ.586/1 ಖುಲ್ಲಾ ಜಾಗ, ಹೊಸರಿತ್ತಿ ಗ್ರಾಮದ ಆಸ್ತಿ ಸರ್ವೇ ನಂ.1066ಪ್ಲಾಟ ನಂ.10, ಬ್ಯಾಡಗಿ ಹಾಗೂ ರಾಣೇಬೆನ್ನೂರು ತಾಲೂಕು ಕ್ರೀಡಾಂಗಣ, ಮೆಡ್ಲೇರಿ ಗ್ರಾಮದ ರಿ.ಸ.ನಂ.137/7 ಹಾಗೂ ರಿ.ಸ.ನಂ.289/1ಗ/3, ಹಲಗೇರಿ ಗ್ರಾಮದ ರಿ.ಸ.ನಂ.215/1 ಬಯಲು ಜಾಗ, ಆರೇಮಲ್ಲಾಪೂರ ಗ್ರಾಮದ ರಿ.ಸ.ನಂ.7/12, ಹಿರೇಕೆರೂರು ಪೊಲೀಸ್ ಮೈದಾನದ ಬಯಲು ಪ್ರದೇಶ, ಚಿಕ್ಕೇರೂರು ಗ್ರಾಮ ಪಂಚಾಯತಿ ಆಸ್ತಿ ನಂ.284/4ರ ಖುಲ್ಲಾ ಜಾಗೆ, ಹಂಸಭಾವಿ ಗ್ರಾಮ ಸರ್ವೇ ನಂ.103 ಖುಲ್ಲಾ ಜಾಗೆ, ರಟ್ಟಿಹಳ್ಳಿ ಪಟ್ಟಣದ ರಿಸನಂ.87/* ಖುಲ್ಲಾ ಜಾಗೆ, ಮಾಸೂರ ಗ್ರಾಮದ ರಿಸನಂ 982/ಎ ಖುಲ್ಲಾ ಜಾಗೆ ಹಾಗೂ ಹಿರೇಮೊರಬ ಗ್ರಾಮದ ರಿ.ಸ.ನಂ.147/2 ಖುಲ್ಲಾ ಜಾಗೆ, ಶಿಗ್ಗಾಂವ ಪುರಸಭೆ ವ್ಯಾಪ್ತಿಯ ಕೃಷಿ ಉತ್ಪನ್ನ ಮಾರುಕಟ್ಟೆ ಸಮಿತಿಯ ಬಯಲು ಜಾಗೆ, ಬಂಕಾಪುರದ ಸರ್ಕಾರಿ ಪ್ರಥಮ ದರ್ಜೆ ಕಾಲೇಜು ಬಯಲು ಪ್ರದೇಶ, ಹುಲಗೂರ ಗ್ರಾಮ ಪಂಚಾಯತ್ ಆಸ್ತಿ ನಂ.234/3 ಹಾಗೂ ಆಸ್ತಿ ನಂ.234/37 ಖುಲ್ಲಾ ಜಾಗೆ, ಸವಣೂರ ಹಾಗೂ ಹಾನಗಲ್ ತಾಲೂಕು ಕ್ರೀಡಾಂಗಣ, ಆಕ್ಕಿಆಲೂರು ಗ್ರಾ.ಪಂ. ಆಸ್ತಿ ನಂ.75/1 ಖುಲ್ಲಾ ಜಾಗೆ ನಿಗಧಿಪಡಿಸಲಾಗಿದೆ.

## ಬೆಂಬಲ ಬೆಲೆ ಯೋಜನೆಯಡಿ ವಿವಿಧ ಕೃಷಿ ಉತ್ಪನ್ನಗಳ ಖರೀದಿ ಕೇಂದ್ರ ಆರಂಭ

**ಹಾವೇರಿ:** ಪ್ರಸಕ್ತ 2025-26 ನೇ ಸಾಲಿನ ಬೆಂಬಲ ಬೆಲೆ ಯೋಜನೆಯಡಿಯಲ್ಲಿ ಜಿಲ್ಲೆಯಲ್ಲಿ ಸೋಯಾಬೀನ್, ಶೇಂಗಾ, ಭತ್ತ ಮತ್ತು ಹೆಸರುಕಾಳು ಉತ್ಪನ್ನಗಳ ಖರೀದಿ ಕೇಂದ್ರಗಳನ್ನು ಪ್ರಾರಂಭಿಸಿದ್ದು, ಈ ಖರೀದಿ ಕೇಂದ್ರಗಳಲ್ಲಿ ನವಂಬರ್ 30 ರೊಳಗಾಗಿ ರೈತರು ನೊಂದಣಿ ಮಾಡಿಕೊಳ್ಳಬೇಕು ಎಂದು ಕೃಷಿ ಮಾರಾಟ ಇಲಾಖೆ ಸಹಾಯಕ ನಿರ್ದೇಶಕರು ತಿಳಿಸಿದ್ದಾರೆ.

ಖರೀದಿ ಕೇಂದ್ರಗಳ ವಿವರ: ಸೋಯಾಬಿನ್ ಉತ್ಪನ್ನಕ್ಕೆ ಕೇಂದ್ರ ಸರ್ಕಾರ ರೂ.5,328 ದರ ನಿಗದಿಪಡಿಸಿದ್ದು, ಖರೀದ ಕೇಂದ್ರವನ್ನು ಹಾವೇರಿ ಜಿಲ್ಲಾ ರೈತ ಉತ್ಪಾದಕರ ಕಂಪನಿ, ರಾಣೇಬೆನ್ನೂರಿನ ಹಾವೇರಿ ಜಿಲ್ಲಾ ರೈತ ಉತ್ಪಾದಕ ಕಂಪನಿ, ಶಿಗ್ಗಾಂವಿಯ ಶ್ರೀ ಮಹಾನಂದಿ ಗ್ರೀನ್ ರೈತರ ಉತ್ಪಾದಕರ ಕಂಪನಿ, ಬಂಕಾಪುರ, ಹಾನಗಲ್, ಸವಣೂರ ಹಾಗೂ ಶಿಗ್ಗಾಂವಿಯಲ್ಲಿ ಟಿ.ಎ.ಪಿ.ಸಿ.ಎಂ. ಎಸ್.ನಲ್ಲಿ ಆರಂಭಿಸಲಾಗಿದೆ.

ಸಾಮಾನ್ಯ ಭತ್ತಕ್ಕೆ ರೂ.2,369 ಹಾಗೂ ಗ್ರೇಡ್- ಎ ಭತ್ತಕ್ಕೆ ರೂ.2,389 ದರ ನಿಗದಿಮಾಡಲಾಗಿದ್ದು, ಹಾನಗಲ್, ರಾಣೇಬೆನ್ನೂರು, ಶಿಗ್ಗಾಂವ ಹಾಗೂ ಹಿರೇಕೆರೂರು ಎ.ಪಿ.ಎಸ್.ಎಂ.ಸಿ. ಯಾರ್ಡ್‌ನಲ್ಲಿ ಖರೀದಿ ಕೇಂದ್ರ ಆರಂಭಿಸಲಾಗಿದೆ.

ಶೇಂಗಾ ಉತ್ಪನ್ನಕ್ಕೆ ರೂ.7,263 ದರ ನಿಗದಿಮಾಡಲಾಗಿದ್ದು, ಖರೀದ ಕೇಂದ್ರವನ್ನು ಹಾವೇರಿ ಜಿಲ್ಲಾ ರೈತ ಉತ್ಪಾದಕರ ಕಂಪನಿ ಲಿಮಿಟೆಡ್, ರಾಣೇಬೆನ್ನೂರಿನ ಹಾವೇರಿ ಜಿಲ್ಲಾ ರೈತ ಉತ್ಪಾದಕ ಕಂಪನಿ, ಶಿಗ್ಗಾಂವಿಯ ಶ್ರೀ ಮಹಾನಂದಿ ಗ್ರೀನ್ ರೈತರ ಉತ್ಪಾದಕರ ಕಂಪನಿ, ಹುಲಗೂರ ಪ್ರಾಥಮಿಕ ಕೃಷಿ ಪತ್ತಿನ ಸಹಕಾರಿ ಸಂಘ, ಸವಣೂರ, ರಟ್ಟಿಹಳ್ಳಿ ಟಿ.ಎ.ಪಿ.ಸಿ.ಎಂ.ಎಸ್.ನಲ್ಲಿ ಆರಂಭಿಸಲಾಗಿದೆ. ಹೆಸರುಕಾಳು ಉತ್ಪನ್ನಕ್ಕೆ ರೂ.8,768 ದರ ನಿಗದಿ ಮಾಡಲಾಗಿದ್ದು, ಖರೀದಿ ಕೇಂದ್ರವನ್ನು ಸವಣೂರು ಹಾಗೂ ಹಾವೇರಿಯ ಟಿ.ಎ.ಪಿ.ಸಿ.ಎಂ.ಎಸ್.ನಲ್ಲಿ ಆರಂಭಿಸಲಾಗಿದೆ.

# ದೇಹದ ಅಭಿವೃದ್ಧಿಗೆ ಪೌಷ್ಠಿಕ ಆಹಾರ ತುಂಬಾ ಮುಖ್ಯ

**ಕೊಪ್ಪಳ:** ಪೌಷ್ಠಿಕ ಆಹಾರವನ್ನು ಕ್ರಮಬದ್ಧವಾಗಿ ಸೇವನೆ ಮಾಡಬೇಕು. ದೇಹದ ಸರ್ವಾಂಗೀಣ ಅಭಿವೃದ್ಧಿಗೆ ಪೌಷ್ಠಿಕ ಆಹಾರ ಸೇವನೆ ತುಂಬಾ ಮುಖ್ಯ. ಆಹಾರದಲ್ಲಿ ವೈವಿಧ್ಯತೆ ಕಂಡುಕೊಳ್ಳಿ ಎಂದು ಹಿರಿಯ ಸಿವಿಲ್ ನ್ಯಾಯಾಧೀಶರು ಹಾಗೂ ಜಿಲ್ಲಾ ಕಾನೂನು ಸೇವೆಗಳ ಪ್ರಾಧಿಕಾರದ ಸದಸ್ಯ ಕಾರ್ಯದರ್ಶಿಗಳಾದ ನ್ಯಾ.ಮಹಾಂತೇಶ ದರಗದ ಅವರು ಹೇಳಿದರು.



ಜಿಲ್ಲಾಡಳಿತ, ಜಿಲ್ಲಾ ಪಂಚಾಯತ, ಜಿಲ್ಲಾ ಕಾನೂನು ಸೇವೆಗಳ ಪ್ರಾಧಿಕಾರ, ಜಿಲ್ಲಾ ವಕೀಲರ ಸಂಘ, ಮಹಿಳಾ ಮತ್ತು ಮಕ್ಕಳ ಅಭಿವೃದ್ಧಿ ಇಲಾಖೆ ಹಾಗೂ ಶಿಶು ಅಭಿವೃದ್ಧಿ ಯೋಜನಾಧಿಕಾರಿಗಳ ಕಾರ್ಯಾಲಯ, ಕೊಪ್ಪಳ ಇವರ ಸಂಯುಕ್ತಾಶ್ರದಲ್ಲಿ ಸೋಮವಾರದಂದು ಕೊಪ್ಪಳ ಯೋಜನೆಯ ಭಾಗ್ಯನಗರದ ಅಂಬೇಡ್ಕರ್ ಸಮುದಾಯ ಭವನದಲ್ಲಿ 8ನೇ ರಾಷ್ಟ್ರೀಯ ಪೋಷಣ್ ಮಾಸಾಚರಣೆಯ ಅಂಗವಾಗಿ ಹಮ್ಮಿಕೊಳ್ಳಲಾಗಿದ್ದ ಸಮಾರೋಪ ಕಾರ್ಯಕ್ರಮವನ್ನು ಹಾಗೂ ಅಂತರಾಷ್ಟ್ರೀಯ ಹೆಣ್ಣು ಮಕ್ಕಳ ದಿನಾಚರಣೆ ಕಾರ್ಯಕ್ರಮವನ್ನು ಉದ್ಘಾಟಿಸಿ ಅವರು ಮಾತನಾಡಿದರು.

ಶಿಶು ಅಭಿವೃದ್ಧಿ ಯೋಜನಾಧಿಕಾರಿ ರೋಹಿಣಿ ಕೋಟಗಾರ ರವರು ಮಾತನಾಡಿ, ಪೌಷ್ಠಿಕ ಆಹಾರ ಹಾಗೂ ಉತ್ತಮ ಜೀವನ ಶೈಲಿಯನ್ನು ಅಳವಡಿಸಿಕೊಂಡು ಎಲ್ಲಾ ಗರ್ಭಿಣಿ, ಬಾಣಂತಿಯರು ಆರೋಗ್ಯಕರ ಮಗುವಿಗೆ ಜನ್ಮ ನೀಡುವ ನಿಟ್ಟಿನಲ್ಲಿ ವಹಿಸಬೇಕಾದ ಕ್ರಮಗಳನ್ನು ತಿಳಿಸಿದರು. ಅಂಗನವಾಡಿ ಕೇಂದ್ರದಲ್ಲಿ ಪಡೆಯುವ ಎಲ್ಲಾ ಪೌಷ್ಠಿಕ ಆಹಾರಗಳ ಸದುಪಯೋಗದ ಬಗ್ಗೆ ತಿಳಿಸಿದರು. ಹೆಣ್ಣನ್ನು ಓದಿಸಿ, ಬೆಳೆಸಿ ಎಂದು ಹೇಳಿದರು.

ಪಟ್ಟಣ ಪಂಚಾಯತಿ ಉಪಾಧ್ಯಕ್ಷ ಹೊನ್ನೂರುಸಾಬ ಭೈರಾಪುರ ಅವರು ಮಾತನಾಡಿ, ಮಕ್ಕಳು ಮತ್ತು ಮಹಿಳೆಯರು ಸಧೃಡವಾಗಿ ಮತ್ತು ಆರೋಗ್ಯವಾಗಿದ್ದರೆ ದೇಶದ ನಿರ್ಮಾಣ ಮಾಡಬಹುದು. ಜಂಕ್‌ಫುಡ್ ನಿರಾಕರಣೆ ಮಾಡಲು ತಿಳಿಸಿದರು. ಕಾರ್ಯಕ್ರಮದಲ್ಲಿ ಭಾಗ್ಯನಗರ ಪಟ್ಟಣ ಪಂಚಾಯತ್ ಅಧ್ಯಕ್ಷ ತುಕಾರಾಮಪ್ಪ ಗಡಾದ, ಭಾಗ್ಯನಗರ ಪ.ಪಂ. ಮುಖ್ಯಾಧಿಕಾರಿ ಸುರೇಶ ಬಬಲಾದ, ಸಹಾಯಕ ಶಿಶು ಅಭಿವೃದ್ಧಿ ಯೋಜನಾಧಿಕಾರಿಗಳಾದ ಶಿವಶರಣಪ್ಪ ಗದ್ದಿ ಮತ್ತು ರೂಪ ಗಂಧದ, ಭಾಗ್ಯನಗರ ವಲಯದ ಮೇಲ್ವಿಚಾರಕಿ ರೋಜಾ ಎಲ್.ಹೆಚ್.ವಿ., ಪೋಷಣ್ ಅಭಿಯಾನ ಸಿಬ್ಬಂದಿ, ಅಂಗನವಾಡಿ ಕಾರ್ಯಕರ್ತೆಯರು, ಆಶಾ ಕಾರ್ಯಕರ್ತೆಯರು ಹಾಗೂ ಸಹಾಯಕರು, ಕಾರ್ಯಕ್ರಮದ ರೂವಾರಿಗಳಾದ ಗರ್ಭಿಣಿಯರು, ಬಾಣಂತಿಯರು, ತಾಯಂದಿರು, ಮುದ್ದು ಮಕ್ಕಳು ಭಾಗವಹಿಸಿದ್ದರು. ಈ ಕಾರ್ಯಕ್ರಮದಲ್ಲಿ ಸೀಮಂತ, ಅನ್ನಪ್ರಾಶನ ಕಾರ್ಯಕ್ರಮ ಹಾಗೂ ವೇಷಭೂಷಣ ಸ್ಪರ್ಧೆ ಏರ್ಪಡಿಸಲಾಗಿತ್ತು.

## ಅರ್ಜಿ ಆಹ್ವಾನ

**ಮುದ್ದೇಬಿಹಾಳ:** ನೋಂದಾಯಿತ ಕಟ್ಟಡ ಕಾರ್ಮಿಕರಿಗೆ ಸುರಕ್ಷಾ ಕಿಟ್ (ಗೌಂಡಿ, ಎಲೆಕ್ಟ್ರಿಷಿಯನ್, ಕಾರಪೇಂಟರ್, ವೆಲ್ಡಿಂಗ್, ಪ್ಲಂಬರ್, ಪೇಂಟರ್) ವಿತರಿಸಲು ಕಾರ್ಮಿಕ ಇಲಾಖೆಯಿಂದ ಅರ್ಜಿ ಆಹ್ವಾನಿಸಲಾಗಿದೆ.

ಕಾರ್ಮಿಕ ಇಲಾಖೆ ಹಾಗೂ ಕರ್ನಾಟಕ ಕಟ್ಟಡ ಮತ್ತು ಇತರೆ ನಿರ್ಮಾಣ ಕಾರ್ಮಿಕರ ಕಲ್ಯಾಣ ಮಂಡಳಯಿಂದ ನೋಂದಣಿಯಾದ ಫಲಾನುಭವಿಗಳಿಗೆ ಸುರಕ್ಷಾ ಕಿಟ್ ವಿತರಿಸಲಾಗುವುದು ಫಲಾನುಭವಿಗಳು ಚಾಲ್ತಿಯಲ್ಲಿರುವ ಕಾರ್ಮಿಕ ಗುರುತಿನ ಚೀಟಿ, ಆಧಾರ್ ಕಾರ್ಡ, ಬ್ಯಾಂಕ್ ಪಾಸ್‌ಬುಕ್ ಹಾಗೂ ಫಲಾನುಭವಿಯ ಎರಡು ಭಾವಚಿತ್ರ ದ್ವಿಪ್ರತಿಗಳಲ್ಲಿ ಅ.24ರೊಳಗೆ ಕಾರ್ಮಿಕರ ನಿರೀಕ್ಷಕರ ಕಚೇರಿ, ಹುಡ್ಕೊ ಕಾಲನಿ,21ನೇ ಕ್ರಾಸ್ ಮುದ್ದೇಬಿಹಾಳ ಇಲ್ಲಿಗೆ ಖುದ್ದಾಗಿ ಸಲ್ಲಿಸಬೇಕು ಎಂದು ಕಾರ್ಮಿಕ ನಿರೀಕ್ಷಕರ ಕಚೇರಿ ಪ್ರಕಟಣೆಯಲ್ಲಿ ತಿಳಿಸಿದ್ದಾರೆ.

## ದೇಶಿ ಕೋಳಿಮರಿ ವಿತರಣೆಗೆ ಅರ್ಜಿ ಆಹ್ವಾನ

**ಧಾರವಾಡ:** ನವಲಗುಂದ ತಾಲ್ಲೂಕಿನ ಪಶುಪಾಲನಾ ಮತ್ತು ಪಶುವೈದ್ಯಕೀಯ ಸೇವಾ ಇಲಾಖೆಯಿಂದ 2025-26 ನೇ ಸಾಲಿನ ಕರ್ನಾಟಕ ಸಹಕಾರ ಕುಕ್ಕುಟ ಮಹಾಮಂಡಳ ನಿಯಮಿತದಿಂದ ನವಲಗುಂದ ತಾಲ್ಲೂಕಿನ ಗ್ರಾಮೀಣ ರೈತ ಮಹಿಳೆಯರಿಗೆ 5 ವಾರದ ದೇಶಿ ಕೋಳಿ ಮರಿಗಳನ್ನು ಉಚಿತವಾಗಿ ವಿತರಿಸುವ ಸಂಬಂಧ ಅರ್ಜಿ ಆಹ್ವಾನಿಸಲಾಗಿದೆ. ಮಾಹಿತಿಗಾಗಿ ಹತ್ತಿರದ ಪಶುವೈದ್ಯಕೀಯ ಸಂಸ್ಥೆಗಳಿಂದ ಅರ್ಜಿನಮೂನೆಗಳನ್ನು ಪಡೆದು, ಭರ್ತಿ ಮಾಡಿದ ಅರ್ಜಿಗಳನ್ನು ನವಲಗುಂದ ಪಶುಆಸ್ಪತ್ರೆಗೆ ಅಕ್ಟೋಬರ್ 30ರೊಳಗೆ ಸಲ್ಲಿಸಬೇಕು ಎಂದು ತಿಳಿಸಿದ್ದಾರೆ.

ಕರ್ನಾಟಕ ಸರ್ಕಾರ

**ಕಾರ್ಯನಿರ್ವಾಹಕ ಇಂಜಿನೀಯರರು, ಲೋಕೋಪಯೋಗಿ ಇಲಾಖೆ, ಶಿರಸಿ ವಿಭಾಗ, ಶಿರಸಿ**

ಕ್ರಸಂ:/3054ಜಿ.ಮು.ರ/ಕಾಲುಸಂಕ/ಟೆಂಡರ್‌ಅಧಿಸೂಚನೆ:2025-26/2061 ದಿನಾಂಕ: 10.10.2025

**ಇ-ಟೆಂಡರ್ ಅಧಿಸೂಚನೆ IFT-KW-1**

**ಇ-ಪ್ರೋಕ್ಯೂರ್‌ಮೆಂಟ್ ಟೆಂಡರ್ ಪ್ರಕಟಣೆ (ಅಲ್ಪಾವಧಿ) (ಎರಡನೇ ಕರೆ)**

ಕರ್ನಾಟಕ ರಾಜ್ಯಪಾಲರ ಪರವಾಗಿ ಲೋಕೋಪಯೋಗಿ ಇಲಾಖೆಯಲ್ಲಿ ನೋಂದಾಯಿತ ಅರ್ಹ ಗುತ್ತಿಗೆದಾರರಿಂದ ಈ ಕೆಳಗಿನ ಕಾಮಗಾರಿಗಳಿಗಾಗಿ ಇ-ಪ್ರೋಕ್ ಸ್ಟ್ಯಾಂಡರ್ಡ್ ಡಾಕ್ಯುಮೆಂಟ್ ಮುಖಾಂತರ ಟೆಂಡರನ್ನು ಈ ಕೆಳಕಾಣಿಸಿದಂತೆ ಅಹ್ವಾನಿಸಲಾಗಿದೆ. ಅರ್ಹ ಗುತ್ತಿಗೆದಾರರು ಇ-ಆಡಳಿತ ಕೇಂದ್ರ ಅಥವಾ ವೆಬ್‌ಸೈಟ್ kppp.karnataka.gov.in ನಲ್ಲಿ ಪ್ರಕಟಿಸಿದಂತೆ ದಿನಾಂಕ ಹಾಗೂ ಇನ್ನುಳಿದ ವಿವರಗಳನ್ನು ಖಚಿತಪಡಿಸಿಕೊಂಡು ಟೆಂಡರಿಗಾಗಿ ಭಾಗವಹಿಸಬಹುದು. ಹೆಚ್ಚಿನ ವಿವರಗಳಿಗೆ ಈ ಕಚೇರಿಯಿಂದ ಕಚೇರಿ ವೇಳೆಯಲ್ಲಿ ಮಾಹಿತಿ ಪಡೆಯಬಹುದು. ಕಾಮಗಾರಿಗಳ ಇನ್ನುಳಿದ ವಿವರಗಳು ಈ ಕೆಳಗಿನಂತಿವೆ.

ಒಟ್ಟು 3 ಕಾಮಗಾರಿ

(1) ಟೆಂಡರ್ ಮಾಹಿತಿ ವಿಚಾರಣೆಗೆ ಕೊನೆಯ ದಿನಾಂಕ: 16-10-2025 (16.00 ಗಂಟೆಗೆ) (2) ಟೆಂಡರ್ ಸ್ವೀಕರಿಸಲು ಕೊನೆಯ ದಿನಾಂಕ: 17-10-2025 (16.00 ಗಂಟೆವರೆಗೆ) (3) ಆರ್ಥಿಕ ಬಿಡ್ ತೆರೆಯುವ ದಿನಾಂಕ: 18-10-2025 (16.30 ಗಂಟೆವರೆಗೆ)

ಸಹಿ/- (ಎಸ್.ಎನ್. ಸಿದ್ದಾಪೂರ)
ಕಾರ್ಯನಿರ್ವಾಹಕ ಇಂಜಿನೀಯರರು,
ಲೋಕೋಪಯೋಗಿ ಇಲಾಖೆ ವಿಭಾಗ, ಶಿರಸಿ (ಉತ್ತರ ಕನ್ನಡ ಜಿಲ್ಲೆ)

DIPR/ADK/KSMCA/605/25-26 dt.13.10.2025

# ಮಕ್ಕಳ ಮೇಲಿನ ದೌರ್ಜನ್ಯ ತಡೆಗಟ್ಟಬೇಕು

**ಕಾರವಾರ:** ಪೋಷಕರು ತಮ್ಮ ಜವಾಬ್ದಾರಿಯನ್ನು ಅರ್ಥಮಾಡಿಕೊಂಡು, ತಮ್ಮ ಮಕ್ಕಳಿಗೆ ಸರಿ ತಪ್ಪು ಕಾರ್ಯಗಳ ಕುರಿತು ಅರಿವು ಮೂಡಿಸುವುದರಿಂದ ಮಕ್ಕಳ ಮೇಲೆ ನಡೆಯುವ ದೌರ್ಜನ್ಯಗಳನ್ನು ತಡೆಗಟ್ಟಲು ಸಾಧ್ಯವಾಗಲಿದೆ ಎಂದು ಹಿರಿಯ ಸಿವಿಲ್ ನ್ಯಾಯಾಧೀಶೆ ಕವಿತಾ ಎಸ್ ಉಂಡೋಡಿ ತಮ್ಮ ಅಭಿಪ್ರಾಯ ವ್ಯಕ್ತಪಡಿಸಿದರು.

ಅವರು ಸೋಮವಾರ ಜಿಲ್ಲಾ ಆರೋಗ್ಯ ಮತ್ತು ಕುಟುಂಬ ಕಲ್ಯಾಣ ಇಲಾಖೆ ಸಭಾಭವನದಲ್ಲಿ ನಡೆದ ಬಾಲನ್ಯಾಯ ಕಾಯ್ದೆ–2015, ಪೋಕ್ಸೋ ಕಾಯ್ದೆ–2012, ಬಾಲ್ಯವಿವಾಹ ನಿಷೇಧ ಕಾಯ್ದೆ2006 ಕುರಿತು ಭಾಗೀದಾರರಿಗೆ ಹಾಗೂ ಅನುಷ್ಠಾನಾಧಿಕಾರಿಗಳಿಗೆ ತರಬೇತಿ ಕಾರ್ಯಾಗಾರ ಉದ್ಘಾಟಿಸಿ ಮಾತನಾಡಿದರು.

ಇತ್ತೀಚಿನ ದಿನಗಳಲ್ಲಿ ಬಾಲ್ಯ ವಿವಾಹಗಳು ಮತ್ತು ಮಕ್ಕಳ ಮೇಲಿನ ದೌರ್ಜನ್ಯಗಳು ಹೆಚ್ಚಾಗುತ್ತಿದೆ. ಪುರುಷ ಪ್ರಧಾನ ಸಮಾಜ ಎಂಬ ಭಾವನೆ ಇರುವುದರಿಂದ ಬಾಲ್ಯ ವಿವಾಹ, ಮಕ್ಕಳ ಮೇಲಿನ ದೌರ್ಜನ್ಯಗಳು ಹೆಚ್ಚಾಗುತ್ತಿವೆ. ಸಾಮಾಜಿಕ ಜಾಲತಾಣಗಳ ಬಳಕೆಯಿಂದ ಮನಸ್ಸಿನ ಮೇಲೆ ಹಿಡಿತವಿಲ್ಲದೆ ಇರುವುದರಿಂದ ಕೂಡಾ ದೌರ್ಜನ್ಯಗಳು ನಡೆಯುತ್ತಿವೆ.

ಈ ದೌರ್ಜನ್ಯಗಳನ್ನು ತಡೆಗಟ್ಟಲು ಜನರಲ್ಲಿ ಅರಿವು ಮೂಡಿಸುವ ಕಾರ್ಯವಾಗಬೇಕು ಈ ನಿಟ್ಟಿನಲ್ಲಿ



ಅನುಷ್ಠಾನಾಧಿಕಾರಿಗಳು ಗ್ರಾಮ ಮಟ್ಟದಲ್ಲಿ ಅರಿವು, ಜಾಗೃತಿ ಕಾರ್ಯಕ್ರಮಗಳನ್ನು ಆಯೋಜಿಸುವ ಮೂಲಕ ಬಾಲ್ಯವಿವಾಹವನ್ನು ತಡೆಗಟ್ಟಬೇಕು ಎಂದರು.

ಹಿರಿಯ ಸಿವಿಲ್ ನ್ಯಾಯಾಧೀಶರು ಹಾಗೂ ಜಿಲ್ಲಾ ಕಾನೂನು ಸೇವೆಗಳ ಪ್ರಾಧಿಕಾರದ ಸದಸ್ಯ ಕಾರ್ಯದರ್ಶಿ ದಿವ್ಯಶ್ರೀ ಸಿ.ಎಂ ಮಾತನಾಡಿ, ಕಾನೂನು ಪಾಲನೆ, ನೊಂದವರಿಗೆ ರಕ್ಷಣೆ ನೀಡಬೇಕಾದ ಜವಾಬ್ದಾರಿಯುತ ಸ್ಥಾನದಲ್ಲಿರುವ ಅಧಿಕಾರಿಗಳು ತಮ್ಮ ಕರ್ತವ್ಯಗಳನ್ನು ಮರೆತರೆ ಸಮಾಜದ ಶತ್ರುಗಳಾಗಿ ಉಳಿಯುತ್ತೇವೆ. ಹಾಗಾಗಿ ನಮ್ಮ ಕರ್ತವ್ಯವನ್ನು ಪಾಲನೆ ಮಾಡಬೇಕು. ಪ್ರತಿಯೊಂದು ಪ್ರಕರಣಗಳನ್ನು ಗಂಭೀರವಾಗಿ ಪರಿಗಣಿಸಿ, ಪ್ರತಿಯೊಂದು ಮಗುವು ತಮ್ಮ ಮಕ್ಕಳೆಂದು ಜವಾಬ್ದಾರಿಯುತವಾಗಿ ಕಾರ್ಯನಿರ್ವಹಿಸಬೇಕು. ಇತ್ತೀಚಿಗೆ ಮಕ್ಕಳು ಅಪರಾಧ ಚಟುವಟಿಗಳಿಗೆ ತೊಡಗುವುದಕ್ಕಿಂತ ಬಲಿಪಶುಗಳಾಗುವುದೆ ಹೆಚ್ಚಾಗಿದೆ ಎಂದರು.

ಜಿಲ್ಲಾ ಪೊಲೀಸ್ ವರಿಷ್ಠಾಧಿಕಾರಿ ದೀಪನ್ ಎಂ.ಎನ್ ಮಾತನಾಡಿ, ಜಿಲ್ಲೆಯಲ್ಲಿ ಪೋಕ್ಸೋ ಪ್ರಕರಣಗಳು ಹೆಚ್ಚಾಗುತ್ತಿದ್ದು, ಅಪ್ರಾಪ್ತ ವಯಸ್ಸಿನಲ್ಲಿ ಮಕ್ಕಳು ಗರ್ಭಿಣೆಯರಾಗುತ್ತಿದ್ದಾರೆ. ಇವುಗಳನ್ನು ತಡೆಗಟ್ಟಲು ಈ ರೀತಿಯ ಪ್ರಕರಣಗಳು ಎಲ್ಲಿ ಹೆಚ್ಚಾಗಿ ಕಂಡು ಬರುತ್ತವೆ ಎಂಬುದನ್ನು ಪತ್ತೆ ಹಚ್ಚಿ ಆ ಪ್ರದೇಶಗಳಲ್ಲಿ ಹೆಚ್ಚಿನ ಅರಿವು ಮೂಡಿಸಬೇಕು ಎಂದರು.

ಸಿಐಡಿ ವಿಭಾಗದ ರೋಹಿತ ಸಿ.ಜಿ ಬಾಲನ್ಯಾಯ ಕಾಯ್ದೆ, ಪೋಕ್ಸೋ ಕಾಯ್ದೆ ಹಾಗೂ ಬಾಲ್ಯವಿವಾಹ ನಿಷೇಧ ಕಾಯ್ದೆ ಕುರಿತು ಉಪನ್ಯಾಸ ನೀಡಿದರು.

ಕಾರ್ಯಕ್ರಮದಲ್ಲಿ ಪೋಕ್ಸೋ, ಬಾಲ್ಯ ವಿವಾಹ ನಿಷೇಧ, ಉಚಿತ ಮಕ್ಕಳ ಸಹಾಯವಾಣಿ ಕರಪತ್ರವನ್ನು ಬಿಡುಗಡೆ ಮಾಡಲಾಯಿತು.

ಕಾರ್ಯಾಗಾರದಲ್ಲಿ, ಜಿಲ್ಲಾ ಆರೋಗ್ಯ ಮತ್ತು ಕುಟುಂಬ ಕಲ್ಯಾಣಧಿಕಾರಿ ಡಾ. ನೀರಜ್, ಡಿವೈಎಸ್ಪಿ ಗಿರೀಶ್, ಮಹಿಳಾ ಮತ್ತು ಮಕ್ಕಳ ಅಭಿವೃದ್ಧಿ ಇಲಾಖೆಯ ಸಹಾಯಕ ನಿರ್ದೇಶಕ ಕುಮಾರ್, ಜಿಲ್ಲಾ ಮಕ್ಕಳ ರಕ್ಷಣಾಧಿಕಾರಿ ಸೋನಲ್ ಐಗಳ ಮತ್ತಿತ್ತರರು ಇದ್ದರು.

# 50 ಲಕ್ಷ ರೂ.ಪರಿಹಾರ ಒದಗಿಸಲು ಒತ್ತಾಯ

**ಮುದ್ದೇಬಿಹಾಳ:** ಕಲಬುರ್ಗಿ ಜಿಲ್ಲೆಯ ಸೇಡಂ ತಾಲೂಕಿನ ಮಳಖೇಡ ಗ್ರಾಮ ಪಂಚಾಯತ ಗ್ರಂಥಾಲಯ ಮೇಲ್ವಿಚಾರಕಿ ಭಾಗ್ಯವತಿ ಅಗ್ಗಿಮಠ ಮೇಲಧಿಕಾರಿಗಳು ನಿಗದಿ ಸಮಯದಲ್ಲಿ ವೇತನ ಬಿಡುಗಡೆ ಮಾಡದೇ ನಿರ್ಲಕ್ಷ್ಯ ವಹಿಸಿದ್ದರಿಂದ ಆತ್ಮಹತ್ಯೆ ಮಾಡಿಕೊಂಡಿದ್ದು ಅವರಿಗೆ ತೊಂದರೆ ಕೊಟ್ಟಿರುವ ಪಂಚಾಯಿತಿಯ ಅಧಿಕಾರಿಗಳ ಮೇಲೆ ಕಾನೂನು ಕ್ರಮ ಜರುಗಿಸಬೇಕು ಎಂದು ಗ್ರಾಪಂ ನೌಕರರ ಸಂಘದ ವಿಜಯಪುರ ಜಿಲ್ಲಾ ಅಧ್ಯಕ್ಷ ಮಹಾಂತಗೌಡ ಕಾಶಿನಕುಂಟಿ ಸರ್ಕಾರಕ್ಕೆ ಆಗ್ರಹಿಸಿದ್ದಾರೆ.



ಪತ್ರಿಕಾ ಹೇಳಿಕೆ ನೀಡಿರುವ ಅವರು, ರಾಜ್ಯದಲ್ಲಿ ಸಾವಿರಾರು ಗ್ರಾಮ ಪಂಚಾಯಿತಿ ಗ್ರಂಥಾಲಯ ಇಲಾಖೆ ಮೇಲ್ವಿಚಾರಕ ಸಿಬ್ಬಂದಿ ಅತೀ ಕಡಿಮೆ ವೇತನವನ್ನು ಪಡೆದು ಕಾರ್ಯನಿರ್ವಹಿಸುತ್ತಿದ್ದೇವೆ ಮೂರು– ಆರು ತಿಂಗಳಿಗೆ ಒಮ್ಮೆ ಸಂಬಳ ಕೊಡಲಾಗುತ್ತದೆ. ಇಂತಹ ಹಲವು ತೊಂದರೆಗಳ ನಡುವೆ ಹಲವಾರು ಬಾರಿ ಪಂಚಾಯತ್ ಅಭಿವೃದ್ಧಿ ಅಧಿಕಾರಿಗೆ, ಆಡಳಿತ ಮಂಡಳಿಗೆ ತಿಳಿಸಿದರೂ ಕೌಟುಂಬಿಕ ಸಮಸ್ಯೆ ಹೇಳಿ ಅಂಗಲಾಚಿ ಬೇಡಿದರೂ ವೇತನ ಕೊಡದೆ ಅಧಿಕಾರಿಗಳು ಕ್ರೂರವಾಗಿ ವರ್ತಿಸುತ್ತಿದ್ದಾರೆ ಎಂಬುದಕ್ಕೆ ಈ ಘಟನೆ ಜ್ವಲಂತ ಸಾಕ್ಷಿಯಾಗಿದೆ ಎಂದು ಅವರು ತಿಳಿಸಿದ್ದಾರೆ.

15 ತಿಂಗಳಿನಿಂದ ಗ್ರಂಥಾಲಯದ ಪತ್ರಿಕೆಗಳ ಬಾಕಿ ಪಾವತಿ ಮಾಡದೆ ಗ್ರಂಥಾಲಯದ ಟಿವಿ ರಿಚಾರ್ಜ್ ಮಾಡದೆ ಮೇಲ್ವಿಚಾರಕಿಗೆ ಕಿರುಕುಳ ನೀಡಿದ್ದಾರೆ. ಸ್ವಂತ ಹಣವನ್ನು ಕಟ್ಟಿದರು ಅದನ್ನು ಪಾವತಿಸಿಲ್ಲ ಮಳಖೇಡ ಗ್ರಾ.ಪಂ ಪಿಡಿಓನನ್ನು ಕೆಲಸದಿಂದ ವಜಾಗೊಳಿಸಿ. ಕ್ರಿಮಿನಲ್ ಮೊಕದ್ದಮೆ ದಾಖಲಿಸಬೇಕು ಎಂದು ಒತ್ತಾಯಿಸುವುದಾಗಿ ಅವರು ಪತ್ರಿಕೆಗೆ ತಿಳಿಸಿದ್ದಾರೆ.

ಪಂಚಾಯತ್ ರಾಜ್ ಇಲಾಖೆ ಮಂತ್ರಿ ಪ್ರಿಯಾಂಕ ಖರ್ಗೆ ಅವರ ಅಡಿಯಲ್ಲಿ ಬರುವ ಇಲಾಖೆಯಲ್ಲಿ ಅದೂ ಕಲಬುರ್ಗಿ ಜಿಲ್ಲೆಯ ಉಸ್ತುವಾರಿಗಳು ಆಗಿರುವ ಸಚಿವರ ತಾಲೂಕಿನಲ್ಲಿ ಈ ದುರಂತ ನಡೆದಿರುವುದು ಅತ್ಯಂತ ದುರದೃಷ್ಟಕರ ಸಂಗತಿಯಾಗಿದೆ ಮಂತ್ರಿಗಳ ಸ್ವ ಕ್ಷೇತ್ರದಲ್ಲಿ ಸಾಮಾನ್ಯ ನೌಕರರ ಪರಿಸ್ಥಿತಿ ಈ ರೀತಿ ಆದರೆ ರಾಜ್ಯಾದ್ಯಂತ ಕನಿಷ್ಠ ವೇತನ ಪಡೆಯುವ ಪರಿಸ್ಥಿತಿ ತುಂಬಾ ಗಂಭೀರವಾಗಿರುವುದು ಕಂಡು ಬರುತ್ತಿದೆ ಸಚಿವರು ತೀವ್ರ ನಿಗಾವಹಿಸಿ ಪಿಡಿಓ ಮತ್ತು ಆಡಳಿತ ಮಂಡಳಿ ವಿರುದ್ಧ ಕಠಿಣ ಕಾನೂನನ್ನು ಜರುಗಿಸಬೇಕು ಹಾಗೂ ಮೃತ ನೌಕರಳ ಕುಟುಂಬಕ್ಕೆ ಖಾಯಂ ಸರಕಾರಿ ನೌಕರಿ ಕೊಡಬೇಕು ಅವರ ಮಕ್ಕಳ ಶಿಕ್ಷಣದ ಖರ್ಚು ವೆಚ್ಚ ವನ್ನು ಸರಕಾರವೇ ಭರಿಸಬೇಕು ಅಲ್ಲದೇ ಮೃತ ಕುಟುಂಬಕ್ಕೆ 50 ಲಕ್ಷ ರೂಪಾಯಿ ಪರಿಹಾರ ನೀಡಬೇಕು ಎಂದು ಅವರು ತಿಳಿಸಿದ್ದಾರೆ.

## ಉಚಿತ ಬಸ್ ಪಾಸ್: ಅರ್ಜಿ ಆಹ್ವಾನ

**ಕಾರವಾರ:** ವಾರ್ತಾ ಮತ್ತು ಸಾರ್ವಜನಿಕ ಸಂಪರ್ಕ ಇಲಾಖೆಯ ಮಾಧ್ಯಮ ಪಟ್ಟಿಯಲ್ಲಿರುವ ಮಾಧ್ಯಮ ಸಂಸ್ಥೆಗಳಲ್ಲಿ ಕಾರ್ಯ ನಿರ್ವಹಿಸುತ್ತಿರುವ ತಾಲ್ಲೂಕು ಮಟ್ಟದ ಪತ್ರಕರ್ತರು ತಮ್ಮ ವೃತ್ತಿ ನಿರತ ಚಟುವಟಿಕೆಗಳ ಸಂಬಂಧ ತಮ್ಮ ಜಿಲ್ಲಾದ್ಯಂತ ಉಚಿತವಾಗಿ ಸಂಚರಿಸಲು ಅನುಕೂಲವಾಗುವಂತೆ ಉಚಿತ ಬಸ್ ಪಾಸ್ ನೀಡಲು ಅರ್ಜಿಗಳನ್ನು ಆಹ್ವಾನಿಸಲಾಗಿದೆ. ಪತ್ರಕರ್ತರು ತಾವು ಕಾರ್ಯನಿರ್ವಹಿಸುತ್ತಿರುವ ಮಾಧ್ಯಮ ಸಂಸ್ಥೆಗಳಿಂದ ಸೇವಾ ಪ್ರಮಾಣಪತ್ರ, ಶಿಫಾರಸ್ಸು ಪತ್ರ ಮತ್ತು 11 ತಿಂಗಳುಗಳ ವೇತನಪತ್ರ (ಲೈನೇಜ್/ಸಂಭಾವನೆ/ಕಮೀಷನ್ ಪಡೆದಿರುವ ದಾಖಲೆ)ಗಳನ್ನು ಅಥವಾ ವೇತನ ಜಮಾ ಆಗಿರುವ ಮಾಹಿತಿ ಇರುವಂತಹ ಬ್ಯಾಂಕ್ ಸ್ಟೇಟಮೆಂಟ್ ಲಗತ್ತಿಸಿ "ಸೇವಾಸಿಂಧು" ಪೋರ್ಟಲ್(https://sevasindhu.karnataka.gov.in) ಮೂಲಕ ಆನ್‌ಲೈನ್‌ನಲ್ಲಿ ಅರ್ಜಿಗಳನ್ನು ಸಲ್ಲಿಸಬಹುದು.

ಆನ್‌ಲೈನ್ ನಲ್ಲಿ ಸಲ್ಲಿಸಲಾದ ಅರ್ಜಿ ಮತ್ತು ಲಗತ್ತಿಸಲಾಗಿರುವ ದಾಖಲೆಗಳ ಒಂದು ಪ್ರತಿಯನ್ನು ಆಯಾ ಜಿಲ್ಲೆಯ ವಾರ್ತಾಧಿಕಾರಿಗಳ ಕಚೇರಿಗೆ ಸಲ್ಲಿಸಬೇಕು. ಸ್ವೀಕೃತ ಅರ್ಜಿಗಳನ್ನು ಆಯ್ಕೆ ಸಮಿತಿಯ ಸಭೆಯಲ್ಲಿ ಪರಿಶೀಲಿಸಿ ಬಸ್ ಪಾಸ್ ಮಂಜೂರು ಮಾಡಲಾಗುತ್ತದೆ. ರಾಜ್ಯದ ಎಲ್ಲ ತಾಲ್ಲೂಕುಗಳ ಅರ್ಹ ಪತ್ರಕರ್ತರು ಕೂಡಲೇ "ಸೇವಾಸಿಂಧು" ಪೋರ್ಟಲ್ ಮೂಲಕ ಅರ್ಜಿಗಳನ್ನು ಸಲ್ಲಿಸುವುದರ ಮೂಲಕ ಈ ಸದುಪಯೋಗ ಪಡೆದುಕೊಳ್ಳಬಹುದು ಎಂದು ವಾರ್ತಾ ಮತ್ತು ಸಾರ್ವಜನಿಕ ಸಂಪರ್ಕ ಇಲಾಖೆಯ ಆಯುಕ್ತರಾದ ಹೇಮಂತ್ ನಿಂಬಾಳ್ಕರ್ ಅವರು ಪ್ರಕಟಣೆಯಲ್ಲಿ ತಿಳಿಸಿದ್ದಾರೆ.

## ನ್ಯಾಯವಾದಿಗಳಿಂದ ಅರ್ಜಿ ಅಹ್ವಾನ

**ಕಾರವಾರ:** ಜಿಲ್ಲಾ ಕಾನೂನು ಸೇವೆಗಳ ಪ್ರಾಧಿಕಾರ, ಕಾರವಾರ (ಉ.ಕ)ದಲ್ಲಿ ರಚನೆಗೊಂಡ ಕಾನೂನು ನೆರವು ರಕ್ಷಣಾ ಸಲಹೆಗಾರ ವ್ಯವಸ್ಥೆ ನಲ್ಲಿ ಕಾರ್ಯನಿರ್ವಹಿಸಲು ಮತ್ತು Deputy Legal Aid Defense Counsel-3 ಹುದ್ದೆಗಳಿಗೆ ಅರ್ಹ ನ್ಯಾಯವಾದಿಗಳಿಂದ ಅರ್ಜಿಯನ್ನು ಆಹ್ವಾನಿಸಿದ್ದು, ಜಿಲ್ಲಾ ನ್ಯಾಯಾಲಯದ ಅಂತರ್ಜಾಲದಲ್ಲಿ ಪ್ರಕಟಿಸಲಾಗಿದೆ. ಹೆಚ್ಚಿನ ಮಾಹಿತಿಗಾಗಿ ಹಾಗೂ ಅರ್ಜಿಯ ನಮೂನೆಯನ್ನು ಪಡೆಯಲು ಜಿಲ್ಲಾ ಕಾನೂನು ಸೇವೆಗಳ ಪ್ರಾಧಿಕಾರ, ಕಾರವಾರ ಕಚೇರಿಗೆ ಭೇಟಿ ನೀಡಬಹುದು. ಅರ್ಜಿ ಸಲ್ಲಿಸಲು ಕೊನೆಯ ಅ.25 ರೊಳಗಾಗಿ ಕಚೇರಿಯ ಅವಧಿಯೊಳಗೆ ಜಿಲ್ಲಾ ಕಾನೂನು ಸೇವೆಗಳ ಪ್ರಾಧಿಕಾರ ಕಾರವಾರ ಕಚೇರಿಗೆ ಸಲ್ಲಿಸುವಂತೆ ಹಿರಿಯ ಸಿವಿಲ್ ನ್ಯಾಯಾಧೀಶರು ಹಾಗೂ ಜಿಲ್ಲಾ ಕಾನೂನು ಸೇವೆಗಳ ಪ್ರಾಧಿಕಾರದ ಸದಸ್ಯ ಕಾರ್ಯದರ್ಶಿ ದಿವ್ಯಶ್ರೀ ಸಿ.ಎಂ ತಿಳಿಸದ್ದಾರೆ.

## ಇಂದು ಜಿಲ್ಲಾ ಶಿಶಿಕ್ಷು ಮೇಳ ಆಯೋಜನೆ

**ಧಾರವಾಡ:** ಜಿಲ್ಲಾ ಶಿಶಿಕ್ಷು ಮೇಳ–2025 ಅಕ್ಟೋಬರ್ 15, 2025 ರಂದು ಬೆಳಿಗ್ಗೆ 9 ಗಂಟೆಯಿಂದ ಸಂಜೆ 4 ಗಂಟೆಯವರೆಗೆ ಲಿಂಗಾಯತ ವಿದ್ಯಾಭಿವೃದ್ಧಿ ಸಂಸ್ಥೆಯ ಅವ್ವಪ್ಪಣ್ಣ ಅತ್ತಿಗೇರಿ ಖಾಸಗಿ ಅನುದಾನಿತ ಕೈಗಾರಿಕಾ ತರಬೇತಿ ಸಂಸ್ಥೆಯಿಂದ ಟೌನ್ ಹಾಲ್‌ದಲ್ಲಿ ಆಯೋಜಿಸಲಾಗಿದೆ. ಸದರಿ ಮೇಳದಲ್ಲಿ ಸುಮಾರು 30 ಕ್ಕೂ ಹೆಚ್ಚು ಕಂಪನಿಗಳು ಭಾಗವಹಿಸಲಿವೆ. ಜಿಲ್ಲೆಯ ಸರ್ಕಾರಿ, ಅರೇ ಸರ್ಕಾರಿ ಹಾಗೂ ಖಾಸಗಿ ಕೈಗಾರಿಕಾ ತರಬೇತಿ ಸಂಸ್ಥೆಗಳಲ್ಲಿ ಉತ್ತೀರ್ಣರಾದ ತರಬೇತಾರ್ಥಿಗಳು ಭಾಗವಹಿಸಿ, ಜಿಲ್ಲಾ ಶಿಶಿಕ್ಷು ಮೇಳ–2025 ರ ಸದುಪಯೋಗವನ್ನು ಪಡೆದುಕೊಳ್ಳಬಹುದು ಎಂದು ಜಿಲ್ಲಾ ಕೌಶಲ್ಯಾಭಿವೃದ್ಧಿ ಅಧಿಕಾರಿಗಳು ಪ್ರಕಟಣೆಯಲ್ಲಿ ತಿಳಿಸಿದ್ದಾರೆ.

## ದೀಪಾವಳಿ ಹಬ್ಬ: ಹೆಚ್ಚುವರಿ ಸಾರಿಗೆಗಳ ವ್ಯವಸ್ಥೆ

**ಬೆಳಗಾವಿ:** ಪ್ರಸಕ್ತ ಸಾಲಿನ ದೀಪಾವಳಿ ಹಬ್ಬದ ಪ್ರಯುಕ್ತ ಅಕ್ಟೋಬರ, 19. 2025 ರಿಂದ ಅಕ್ಟೋಬರ, 26, 2025 ರ ವರೆಗೆ ಪ್ರಯಾಣಿಕರಿಗೆ ಅನುಕೂಲವಾಗುವಂತೆ ಚಿಕ್ಕೋಡಿ ವಿಭಾಗದ ಚಿಕ್ಕೋಡಿ, ನಿಪ್ಪಾಣಿ, ಸಂಕೇಶ್ವರ ಗೋಕಾಕ, ಹುಕ್ಕೇರಿ, ರಾಯಬಾಗ ಮತ್ತು ಅಥಣಿ ಘಟಕಗಳಿಂದ ಹೆಚ್ಚುವರಿ ವಾಹನಗಳ ಕಾರ್ಯಾಚರಣೆ ಮಾಡಲಾಗುವುದು. ಸಾರ್ವಜನಿಕರು ಈ ಹೆಚ್ಚುವರಿ ವಿಶೇಷ ಸಾರಿಗೆಗಳ ಕಾರ್ಯಾಚರಣೆಯ ಸದುಪಯೋಗ ಪಡೆದುಕೊಳ್ಳಬಹುದಾದಿದೆ ಎಂದು ಚಿಕ್ಕೋಡಿ ವಿಭಾಗದ ವಾ.ಕ.ರ.ಸಾ.ಸಂಸ್ಥೆ ಹಿರಿಯ ವಿಭಾಗೀಯ ನಿಯಂತ್ರಣಾಧಿಕಾರಿ ಪ್ರಕಟಣೆಯಲ್ಲಿ ತಿಳಿಸಿದ್ದಾರೆ.

## ರಂಗ ಮಂದಿರ ನಿರ್ಮಾಣಕ್ಕೆ ಶಿಲಾನ್ಯಾಸ



**ಕಾರವಾರ:** ವಿಧಾನ ಸಭಾ ಸದಸ್ಯರ ಸ್ಥಳೀಯ ಪ್ರದೇಶಾಭಿವೃದ್ಧಿ ಅನುದಾನದಡಿ ಕಾರವಾರ ತಾಲೂಕಿನ ಕಡವಾಡ ಗ್ರಾಮದ ಜನತಾ ವಿದ್ಯಾಲಯ ಶಾಲೆಯ ರಂಗ ಮಂದಿರ ಹಾಗೂ ಎರಡು ಕೊಠಡಿಗಳ ನಿರ್ಮಾಣ ಕಾಮಗಾರಿಗಳಿಗೆ ಕಡವಾಡ ಗ್ರಾಮ ಪಂಚಾಯಿತಿ ಅಧ್ಯಕ್ಷ ಆನಂದು ರಾಮ ನಾಯ್ಕ ಇತ್ತೀಚೆಗೆ ಶಿಲಾನ್ಯಾಸ ನೆರೆವರಿಸಿದರು.

ಈ ಸಂದರ್ಭದಲ್ಲಿ ನಿವೃತ್ತ ಪ್ರಾಂಶುಪಾಲ ಜಿ.ಪಿ ನಾಯಕ, ಗ್ರಾಮ ಪಂಚಾಯಿತಿ ಸದಸ್ಯ ಕಿಶೋರ್ ಕಡವಾಡಕರ, ಶಾಲಾಭಿವೃದ್ಧಿ ಮತ್ತು ಮೇಲುಸ್ತುವಾರಿ ಸಮಿತಿ ಅಧ್ಯಕ್ಷ ಆಂಜಿನೇಯ ವಡ್ಡರ, ಗ್ರಾ.ಪಂ ಮಾಜಿ ಅಧ್ಯಕ್ಷ ಮಾರುತಿ ಆರ್ ನಾಯ್ಕ, ಪಿಡಿಓ ಪ್ರಭಾವತಿ ಬಂಟ್, ತಾಲೂಕು ಗ್ಯಾರಂಟಿ ಯೋಜನೆ ಸಮಿತಿ ಸದಸ್ಯ ಶಶಾಂಕ ಕಡವಾಡಕರ ಶಾಲಾ ಮುಖ್ಯೋಧ್ಯಾಪಕರು, ಸಹ ಶಿಕ್ಷಕರು, ವಿದ್ಯಾರ್ಥಿಗಳು, ಊರ ನಾಗರೀಕರು ಮತ್ತಿತರರು ಉಪಸ್ಥಿತರಿದ್ದರು.

# ಜಿಲ್ಲೆಯಲ್ಲಿ ಕ್ರೀಡಾ ಕ್ಷೇತ್ರಕ್ಕೆ ಹೆಚ್ಚಿನ ಆದ್ಯತೆ

**ಕೊಪ್ಪಳ:** ಯುವ ಸಬಲೀಕರಣ ಮತ್ತು ಕ್ರೀಡಾ ಇಲಾಖೆಯ ಆಯುಕ್ತರಾದ ಆರ್. ಚೇತನ್ ಅವರು ಅ.11 ರಂದು ಜಿಲ್ಲೆಗೆ ಆಗಮಿಸಿ ಜಿಲ್ಲೆಯ ವಿವಿಧ ಕ್ರೀಡಾಂಗಣಗಳು, ಇಲಾಖೆಯ ಕಾಮಗಾರಿಗಳ ಸ್ಥಳಕ್ಕೆ ಭೇಟಿ ನೀಡಿ, ಪರಿಶೀಲಿಸಿದರು.

ಯಲಬುರ್ಗಾ ತಾಲೂಕಿನ ಕ್ರಾಂತಿವೀರ ಸಂಗೊಳ್ಳಿ ರಾಯಣ್ಣ ತಾಲೂಕು ಕ್ರೀಡಾಂಗಣಕ್ಕೆ ಭೇಟಿ ನೀಡಿ ತಾಲೂಕು ಕ್ರೀಡಾಂಗಣವನ್ನು ವೀಕ್ಷಣೆ ಮಾಡಿದರು. ನಂತರ ಜಿಲ್ಲೆಯ ಜಿಲ್ಲಾ ಕ್ರೀಡಾಂಗಣಕ್ಕೆ ಆಗಮಿಸಿ, ಜಿಲ್ಲಾ ಕ್ರೀಡಾಂಗಣದಲ್ಲಿರುವ ಎಲ್ಲಾ ಕ್ರೀಡಾ ಅಂಕಣಗಳಿಗೆ ಭೇಟಿ ನೀಡಿ ಪರಿಶೀಲನೆ ಮಾಡಿದರು ಮತ್ತು ಪ್ರಸ್ತುತ ಪ್ರಗತಿಯಲ್ಲಿರುವ ಕಾಮಗಾರಿಗಳು ಮತ್ತು ಆಗಬೇಕಾಗಿರುವ ಕಾಮಗಾರಿಗಳ ಬಗ್ಗೆ ಚರ್ಚಿಸಿದರು. ನಂತರ ಇಲಾಖೆಯ ಅಧೀನದಲ್ಲಿರುವ ಈಜುಕೊಳಕ್ಕೆ ಭೇಟಿ ನೀಡಿ ಈಜುಕೊಳದ ವಸ್ತು ಸ್ಥಿತಿಗತಿಯ ಬಗ್ಗೆ ಚರ್ಚಿಸಿದರು. ನಂತರ ಜಿಲ್ಲಾ ಕ್ರೀಡಾ ವಸತಿ ನಿಲಯಕ್ಕೆ ಭೇಟಿ ನೀಡಿ ಕ್ರೀಡಾಪಟುಗಳೊಂದಿಗೆ ಸಮಾಲೋಚನೆ



ನಡೆಸಿದರು. ಊಟೋಪಹಾರ, ಕ್ರೀಡಾಪಟುಗಳ ಕೊಠಡಿ ಮತ್ತು ಶೌಚಾಲಯ ಕಾಮಗಾರಿಗಳ ಕುರಿತು ಪರಿಶೀಲನೆ ನಡೆಸಿದರು.

ಮುಂದಿನ ದಿನಗಳಲ್ಲಿ ಜಿಲ್ಲೆಯಲ್ಲಿ ಇನ್ನೂ ಹೆಚ್ಚಿನ ಕ್ರೀಡಾ ಕ್ಷೇತ್ರದ ಬೆಳವಣಿಗೆಗಾಗಿ ಹೆಚ್ಚಿನ ಸವಲತ್ತುಗಳನ್ನು ನೀಡಲಾಗುವುದು ಎಂದು, ಇಲಾಖೆಯ ವಿವಿಧ ಕಾಮಗಾರಿಗಳ ಬಗ್ಗೆ ಇಲಾಖಾ ಅಧಿಕಾರಿಯಿಂದ ಮಾಹಿತಿ ಪಡೆದರು. ಈ ಕುರಿತು ಜಿಲ್ಲಾ ಪಂಚಾಯತ ಸಿಇಓ ಅವರೊಂದಿಗೆ ಚರ್ಚಿಸಿದರು.

ಈ ಸಂದರ್ಭದಲ್ಲಿ ಜಿಲ್ಲಾ ಪಂಚಾಯತಿಯ ಸಿಇಓ ವರ್ಣಿತ್ ನೇಗಿ, ಯುವ ಸಬಲೀಕರಣ ಮತ್ತು ಕ್ರೀಡಾ ಇಲಾಖೆಯ ಸಹಾಯಕ ನಿರ್ದೇಶಕ ವಿಠ್ಠಲ್ ಬಿ.ಜಾಬಗೌಡರ್, ಇಲಾಖೆಯ ಎಲ್ಲಾ ಸಿಬ್ಬಂದಿ ವರ್ಗದವರು ಮತ್ತು ತರಬೇತುದಾರರು ಮತ್ತು ಕೊಪ್ಪಳ ಜಿಲ್ಲಾ ಅಥ್ಲೆಟಿಕ್ಸ್ ಅಸೋಷಿಯೇಶನ್, ಚೆಸ್ ಅಸೋಷಿಯೇಶನ್ ಮತ್ತು ಕುಸ್ತಿ ಅಸೋಷಿಯೇಶನ್ ರವರು ಹಾಜರಿದ್ದರು.

## ಪಾಲಿಕೆಯ ವ್ಯಾಪ್ತಿಯ ಸಹಾಯವಾಣಿ ಕೇಂದ್ರ

**ವಿಜಯಪುರ:** ಮಹಾನಗರ ಪಾಲಿಕೆ ವ್ಯಾಪ್ತಿಯಲ್ಲಿ ಸಾಮಾಜಿಕ ಮತ್ತು ಶೈಕ್ಷಣಿಕ ಸಮೀಕ್ಷೆ ನಡೆಯುತ್ತಿದ್ದು, ಸಮೀಕ್ಷೆಯಿಂದ ಕುಟುಂಬಗಳು ಉಳಿದು ಹೋಗಿದ್ದರೆ ಅಥವಾ ಕುಟುಂಬದ ಸದಸ್ಯರು ಬಿಟ್ಟು ಹೋಗಿದ್ದರೆ ಸಾರ್ವಜನಿಕರು ಗಾಂಧಿ ಚೌಕ ಹತ್ತಿರದ ಮಹಾನಗರ ಪಾಲಿಕೆಯ ಹಳೇ ಕಟ್ಟಡದ ವಲಯ ಕಚೇರಿ–01 ರಲ್ಲಿ ಸ್ಥಾಪಿಸಲಾದ ಸಹಾಯವಾಣಿ ಸಂಖ್ಯೆ 08352–222474 ಸಂಪರ್ಕಿಸಬಹುದಾಗಿದೆ.

ಈ ಸಹಾಯವಾಣಿ ಕೇಂದ್ರ ಬೆಳಿಗ್ಗೆ 8 ರಿಂದ ರಾತ್ರಿ 8 ಗಂಟೆಯವರೆಗೆ ಕಾರ್ಯನಿರ್ವಹಿಸಲಿದೆ ಎಂದು ಮಹಾನಗರ ಪಾಲಿಕೆ ಉಪ ಆಯುಕ್ತರು ಪ್ರಕಟಣೆಯಲ್ಲಿ ತಿಳಿಸಿದ್ದಾರೆ.

# ಸಾಂಸ್ಕೃತಿಕ, ಕ್ರೀಡಾ ಚಟುವಟಿಕೆಗಳ ಉದ್ಘಾಟನೆ



**ಜಮಖಂಡಿ:** ನಗರದ ಬಿ.ಎಲ್.ಡಿ.ಇ ಸಂಸ್ಥೆಯ ಶಿಕ್ಷಣ ಮಹಾವಿದ್ಯಾಲಯದಲ್ಲಿ ಸನ್ 2024–25ನೇ ಸಾಲಿನ ಸಾಂಸ್ಕೃತಿಕ ಹಾಗೂ ಕ್ರೀಡಾ ಚಟುವಟಿಕೆಗಳ ಉದ್ಘಾಟನೆ ಸಮಾರಂಭ ನಡೆಯಿತು.

ಬಿ.ಎಲ್.ಡಿ.ಇ ಕಾನೂನು ಪದವಿ ಮಹಾವಿದ್ಯಾಲಯದ ಪ್ರಾಚರ್ಯ ಡಾ.ನಿಖೀಲ ಮಂಟೂರ ಉದ್ಘಾಟಿಸಿದರು. ಉಪಪ್ರಾಚರ್ಯ ಪ್ರೊ.ಕೆ.ಜೆಜೀರಗಾಳಿ ಅಧ್ಯಕ್ಷತೆ ವಹಿಸಿದ್ದರು. ವೇದಿಕೆಯಲ್ಲಿ ಸಾಂಸ್ಕೃತಿಕ ವಿಭಾಗದ ಕಾರ್ಯಧ್ಯಕ್ಷ ಪ್ರೊ.ಪ್ರೇಮಾನಂದ ಹಿರೇಮಠ, ಪ್ರೊ..ಎಲ್. ಎಂ.ಮಾರ್ಕಪನಳ್ಳಿ, ಪ್ರೊ.ಅಶ್ವಿನಿ ಅನಂತಪೂರ, ಪ್ರೊ.ಮಹದೇವ ಗಲಬಿ ಸಹಿತ ಹಲವರು ಇದ್ದರು.

ಪ್ರಶಿಕ್ಷಣಾರ್ಥಿಗಳಾದ ಸುಷ್ಮಾ ತಂಬಾಕು ಪ್ರಾರ್ಥಿಸಿದರು. ರಾಹುಲ ಬಾವಿಕಟ್ಟಿ ಸ್ವಾಗತಿದರು.. ಮಂಜುನಾಥ ಶಿರಗಾಂವಿ, ಭಾಗ್ಯಶ್ರೀ ಹುಲಕುಂದ ನಿರೂಪಿಸಿದರು. ವೀಣಾ ಬಿರಾದಾರ ವಂದಿಸಿದರು.

# ಬ್ರಾಹ್ಮಣ ಸಂಘದಿಂದ ಅರಿವು ನೆರವು ಕಾರ್ಯಕ್ರಮ

**ಜಮಖಂಡಿ:** ಬ್ರಾಹ್ಮಣರು ಜಾತಿವಾದಿಗಳಲ್ಲ, ಋಣಾತ್ಮಕ ವಿಚಾರಗಳಿಲ್ಲದ ಸರ್ವೇಜನಾ ಸುಖಿನೋ ಭವಂತು ಎಂದು ಹಾರೈಸುವರಾಗಿದ್ದಾರೆ. ಎಂಥಹುದೇ ಪರಿಸ್ಥಿತಿ ಇದ್ದರು ಧನಾತ್ಮಕ ವಿಚಾರಗಳಿಂದ ಎದುರಿಸುತ್ತೇವೆ ಎಂದು ಎಂದಿಗೂ ಜಾತಿಯತೆ ಮಾಡುವದಿಲ್ಲ ಎಂದು ರಾಜ್ಯ ಬ್ರಾಹ್ಮಣ ಅಭಿವೃದ್ಧಿ ನಿಗಮ ಮಂಡಳಿ ಅಧ್ಯಕ್ಷ ಅಸುಗೋಡೆ ಜಯಸಿಂಹ ಹೇಳಿದರು.

ನಗರದ ಜಂಬುಕೇಶ್ವರ ಮಂದಿರದ ಮೈದಾನದಲ್ಲಿರುವ ಶ್ರೀಂಗೇರಿ ಶಂಕರ ಮಠದಲ್ಲಿ ರಾಜ್ಯ ಬ್ರಾಹ್ಮಣ ಅಭಿವೃದ್ಧಿ ನಿಗಮ, ತಾಲೂಕಾ ಬ್ರಾಹ್ಮಣ ಸಂಘ ಹಮ್ಮಿಕೊಂಡಿದ್ದ ಅರಿವು ನೆರವು ಕಾರ್ಯಕ್ರಮದಲ್ಲಿ ಮಾತನಾಡಿದರು.

ಆರ್ಥಿಕವಾಗಿ ಹಿಂದುಳಿದ ಸಮಾಜಕ್ಕೆ 2018ರಲ್ಲಿ ಮಾಜಿ ಮುಖ್ಯಮಂತ್ರಿ ಎಚ್.ಡಿ.ಕುಮಾರಸ್ವಾಮಿ ಅವರ ಅವಧಿಯಲ್ಲ್ಲಿ ನಿಗಮ ಪ್ರಾರಂಭವಾಗಿತ್ತು. ಮೊದಲು 25 ಕೋಟಿ ಅನುದಾನವಿದ್ದು, ನಂತರ ಭಾಜಪ ಅವಧಿಯಲ್ಲಿ 6 ಕೋಟಿ ನೀಡಿದ್ದರು. ಈಗ ಸಿ.ಎಂ.ಸಿದ್ಧರಾಮಯ್ಯ 30 ಕೋಟಿ ಅನುದಾನ ನೀಡಿದ್ದಾರೆ ಎಂದರು.

ನಿಗಮದಿಂದ ನೇರ ಸಾಲ ಸೌಲಭ್ಯವನ್ನು ನೀಡಲು ಅನುಮೋದನೆಯಾಗಿದೆ. ಶೇ20ರಷ್ಟು ರಿಯಾಯತಿಯಿದೆ. ಅದಕ್ಕಾಗಿ ಕೌಶಲ್ಯಾಭಿವೃದ್ಧಿ ಇಲಾಖೆಯ ಜೊತೆಗೆ ಸಹಯೊಗ ಮಾಡಿದ್ದೇವೆ. ಈಗಾಗಲೇ 13 ಕೋಟಿ ವಿದ್ಯಾರ್ಥಿ ವೇತನ ನೇರವಾಗಿ ನೀಡಿದ್ದೇವೆ. ಸಾಂದೀಪಿನಿ ವಿದ್ಯಾರ್ಥಿ ವೇತನವನ್ನು ದ್ವಿತೀಯ ಪಿಯುಸಿ ವಿದ್ಯಾರ್ಥಿಗಳಿಗೆ 15




**ನಗರದ ಶಂಕರ ಮಠದಲ್ಲಿ ತಾಲೂಕಾ ಬ್ರಾಹ್ಮಣ ಸಂಘದ ಅರಿವು ನೆರವು ಕರ್ಯ ಕ್ರಮದಲ್ಲಿ ರಾಜ್ಯ ಬ್ರಾಹ್ಮಣ ಅಭಿವೃದ್ಧಿ ನಿಗಮ ಮಂಡಳಿ ಅಧ್ಯಕ್ಷ ಜಯಸಿಂಹ ಅಸುಗೋಡೆ ಮಾತನಾಡಿದರು.**

ಸಾವಿರ ನೇರ ಪಾವತಿ ಮಾಡಿದ್ದೇವೆ. ಐಎಎಸ್. ತರಬೇತಿಗೆ 1 ಲಕ್ಷ ಸಹಾಯಧನ ನೀಡುತ್ತೇವೆ ಎಂದರು.

ಮಾಜಿ ಶಾಸಕ ಶ್ರೀಕಾಂತ ಕುಲಕರ್ಣಿ ಮಾತನಾಡಿ, ಬ್ರಾಹ್ಮಣ ಸಮಾಜ ಆರ್ಥಿಕವಾಗಿ ಸಾಕಷ್ಟು ಹಿಂದುಳಿದ ಸಮಾಜವಾಗಿದೆ. ಕಡುಬಡವರು ಸಮಾಜದಲ್ಲಿದ್ದಾರೆ, ನಿಗಮದಿಂದ ದೊರಕುವ ಸೌಲಭ್ಯಗಳನ್ನು ಸದುಪಯೋಗ ಪಡಿಸಿಕೊಂಡು ಆರ್ಥಿಕವಾಗಿ ಸಬಲರಾಗಬೇಕು. ಕೃಷಿಕ ಬ್ರಾಹ್ಮಣರು ಭೂಮಿಯನ್ನು ಉಳಿಸಿಕೊಳ್ಳಬೇಕು. ಕೃಷಿಕರಿಗೆ ನಿಗಮದಿಂದ ಹಲವಾರು ಸೌಲಭ್ಯಗಳಿದ್ದು ಚನ್ನಾಗಿ ತಿಳಿದುಕೊಳ್ಳಬೇಕು. ನಿಗಮ ಅಧ್ಯಕ್ಷರು ಉತ್ತಮವಾಗಿ ಕಾರ್ಯ ನಿರ್ವಹಿಸುತ್ತಿದ್ದಾರೆ. ನಿಗದಿತ ಅನುದಾನದ ಸದುಪಯೋಗ ಪಡಿಸಿಕೊಳ್ಳಬೇಕು. ಇಲ್ಲವಾದಲ್ಲಿ ಉಳಿದ ಅನುದಾನ ಸರ್ಕಾರಕ್ಕೆ ವಾಪಸ್ಸಾಗುತ್ತದೆ ಎಂದರು.

ವೇದಿಕೆಯಲ್ಲಿ ತಾಲೂಕಾ ಅಧ್ಯಕ್ಷ ಉಮೇಶ ದೇಸಾಯಿ, ಕಾರ್ಯದರ್ಶಿ ರಾಜೇಂದ್ರ ದೇಸಾಯಿ, ಪಲ್ಲು ಕುಲಕರ್ಣಿ, ಪಿ.ಪಿ.ಜೋಶಿ ಸಹಿತ ಹಲವರು ಇದ್ದರು.



## ರಸ್ತೆ ಕಾಮಗಾರಿಗೆ ಶಾಸಕ ಐಹೊಳೆ ಚಾಲನೆ

**ರಾಯಬಾಗ:** ತಾಲೂಕಿನ ಕಂಚಕರವಾಡಿ ಗ್ರಾಮದ ಲಬಾಗೆ ತೋಟದಿಂದ ಪೂಜಾರಿ ತೋಟದ ವರಿಗೆ ಜಿ.ಪಂ.ಇಲಾಖೆಯಿಂದ ಮಂಜೂರಾದ 5 ಲಕ್ಷ ರೂ. ಅನುದಾನದಲ್ಲಿ ರಸ್ತೆ ಖಡೀಕರಣ ಕಾಮಗಾರಿಗೆ ಶಾಸಕ ಡಿ.ಎಮ್.ಐಹೊಳೆ ಸೋಮವಾರ ಭೂಮಿ ಪೂಜೆ ನೆರವೇರಿಸಿದರು.


ಸದಾಶಿವ ಘೋರ್ಪಡೆ, ಸದಾನಂದ ಹಳಿಂಗಳಿ, ಅಣ್ಣಾಸಾಹೇಬ ಬೆಳಸೆ, ಬಾಳಪ್ಪ ಲಬಾಗೆ, ಅಣ್ಣಪ್ಪ ನಾಯಿಕ, ಶಿವಾಜಿ ಕಳ್ಳಿ, ಮಹಾದೇವ ನಾಯಿಕ, ಇಮಾಮಹುಸೇನ ಮೊಮಿನ, ಕಲ್ಲಪ್ಪ ಸನದಿ, ಸತೀಶ ನಾಯಿಕ, ರಾಮು ಶಮನೇವಾಡಿ, ಅಣ್ಣಪ್ಪ ಮಗದುಮ್ಮ, ಕರೆಪ್ಪ ಲಬಾಗೆ, ಯಲ್ಲಪ್ಪ ಹುಲಿಮನಿ, ರಾಜು ಚವ್ಹಾಣ ಸೇರಿ ಅನೇಕರು ಇದ್ದರು.

# ಡಿಸಿಸಿ ಬ್ಯಾಂಕ್‌ಗೆ ಅವಿರೋಧ ಆಯ್ಕೆ: ಸಂಭ್ರಮಾಚರಣೆ

**ಯರಗಟ್ಟಿ:** ಬೆಳಗಾವಿ ಜಿಲ್ಲಾ ಕೇಂದ್ರ ಸಹಕಾರಿ (ಬಿಡಿಸಿಸಿ) ಬ್ಯಾಂಕ್‌ನ ನಿರ್ದೇಶಕರ ಸ್ಥಾನಕ್ಕೆ ಯರಗಟ್ಟಿ ತಾಲ್ಲೂಕಿನಿಂದ ಅವಿರೋಧವಾಗಿ ಆಯ್ಕೆಯಾದ ಹಿನ್ನೆಲೆಯಲ್ಲಿ ಪಟ್ಟಣದ ಸಂಗೊಳ್ಳಿ ರಾಯಣ್ಣ ವೃತ್ತಿದಲ್ಲಿ ಕುಟುಂಬದವರೊಂದಿಗೆ ಹಾಗೂ ಕಾಂಗ್ರೆಸ್ ಮುಖಂಡರು ಕಾರ್ಯಕರ್ತರೊಂದಿ ಸಂಭ್ರಮಾಚರಣೆ ಮಾಡಲಾಯಿತು.

ಮಾತನಾಡಿದ ಶಾಸಕ ವಿಶ್ವಾಸ ವೈದ್ಯ ಅವರು ತಾಲ್ಲೂಕಿನ ರೈತರು ಮತ್ತು ಸಹಕಾರಿ ಕ್ಷೇತ್ರದ ಅಭಿವೃದ್ಧಿಗೆ ಪ್ರಾಮಾಣಿಕವಾಗಿ ಶ್ರಮಿಸುತ್ತೇನೆ ಎಂದು ಈ ಮೂಲಕ ಭರವಸೆ ನೀಡಿದರು.

ಈ ವೇಳೆ ಬೆಮುಲ ನಿರ್ದೇಶಕ ಶಂಕರ ಇಟ್ನಾಳ, ಸಂತೋಷ ಹಾದಿಮನಿ, ಮಲಿಕಸಾಬ ಬಾಗವಾನ, ಎಪಿಎಂಸಿ ಅಧ್ಯಕ್ಷ ನೀಲಕಂಠ ಶೀದಬಸನ್ನವರ, ಸವದತ್ತಿ ಎಪಿಎಂಸಿ ಅಧ್ಯಕ್ಷ ಚಂದ್ರು ಜಂಬ್ರಿ, ಪ. ಪಂ. ಸದಸ್ಯರಾದ ನಿಖಿಲ ಪಾಟೀಲ, ಹನಮಂತ ಹಾರೂಗೊಪ್ಪ, ಪ್ರಕಾಶ ವಾಲಿ, ಉಮೇಶ ಮಾಗುಂಡನ್ನವರ, ಮುನವಳ್ಳಿ ಪುರಸಭೆ ಅಧ್ಯಕ್ಷ ಸಿ ಬಿ ಮಾಳಿ, ಆರ್. ಕೆ. ಪಟಾತ, ಮಹಾಂತೇಶ ಅಲ್ಲನ್ನವರ ಸೇರಿದಂತೆ ಅನೇಕರು ಉಪಸ್ಥಿತರಿದ್ದರು.



ನಿಮ್ಮೆಲ್ಲರ ಪ್ರೀತಿ, ಅಭಿಮಾನ, ಹಾರೈಕೆ ಕಂಡು ನನಗೆ ಅತೀವ ಸಂತೋಷವಾಗಿದೆ. ನಿಮ್ಮ ಹಾರೈಕೆ,ಅಭಿಮಾನ, ಪ್ರೋತ್ಸಾಹಕ್ಕೆ ನಾನು ಸದಾ ಚಿರಋಣಿಯಾಗಿರುತ್ತೇನೆ. ಇದೇ ರೀತಿ ನಿಮ್ಮೆಲ್ಲರ ಬೆಂಬಲ,ಆಶೀರ್ವಾದ ನನ್ನ ಮೇಲೆ ಸದಾ ಇರಲಿ.
**ವಿಶ್ವಾಸ ವೈದ್ಯ, ಶಾಸಕರು ಸವದತ್ತಿ**

## ಉಚಿತ ಬಸ್ ಪಾಸ್ ನೀಡಲು ಅರ್ಜಿ ಆಹ್ವಾನ

**ಹಾವೇರಿ:** ವಾರ್ತಾ ಮತ್ತು ಸಾರ್ವಜನಿಕ ಸಂಪರ್ಕ ಇಲಾಖೆಯ ಮಾಧ್ಯಮ ಪಟ್ಟಿಯಲ್ಲಿರುವ ಮಾಧ್ಯಮ ಸಂಸ್ಥೆಗಳಲ್ಲಿ ಕಾರ್ಯ ನಿರ್ವಹಿಸುತ್ತಿರುವ ತಾಲ್ಲೂಕು ಮಟ್ಟದ ಪತ್ರಕರ್ತರು ತಮ್ಮ ವೃತ್ತಿ ನಿರತ ಚಟುವಟಿಕೆಗಳ ಸಂಬಂಧ ತಮ್ಮ ಜಿಲ್ಲಾದ್ಯಂತ ಉಚಿತವಾಗಿ ಸಂಚರಿಸಲು ಅನುಕೂಲವಾಗುವಂತೆ ಉಚಿತ ಬಸ್ ಪಾಸ್ ನೀಡಲು ಅರ್ಜಿಗಳನ್ನು ಆಹ್ವಾನಿಸಲಾಗಿದೆ.

ಪತ್ರಕರ್ತರು ತಾವು ಕಾರ್ಯನಿರ್ವಹಿಸುತ್ತಿರುವ ಮಾಧ್ಯಮ ಸಂಸ್ಥೆಗಳಿಂದ ಸೇವಾ ಪ್ರಮಾಣಪತ್ರ, ಶಿಫಾರಸ್ಸು ಪತ್ರ ಮತ್ತು 11 ತಿಂಗಳುಗಳ ವೇತನಪತ್ರ (ಲೈನೇಜ್/ಸಂಭಾವನೆ/ಕಮೀಷನ್ ಪಡೆದಿರುವ ದಾಖಲೆ)ಗಳನ್ನು ಅಥವಾ ವೇತನ ಜಮಾ ಆಗಿರುವ ಮಾಹಿತಿ ಇರುವಂತಹ ಬ್ಯಾಂಕ್ ಸ್ಟೇಟಮೆಂಟ್ ಲಗತ್ತಿಸಿ "ಸೇವಾಸಿಂಧು" ಪೋರ್ಟಲ್ (https://sevasindhu.karnataka.gov.in) ಮೂಲಕ ಆನ್‌ಲೈನ್ ನಲ್ಲಿ ಅರ್ಜಿಗಳನ್ನು ಸಲ್ಲಿಸಬಹುದು.

ಆನ್ ಲೈನ್ ನಲ್ಲಿ ಸಲ್ಲಿಸಲಾದ ಅರ್ಜಿ ಮತ್ತು ಲಗತ್ತಿಸಲಾಗಿರುವ ದಾಖಲೆಗಳ ಒಂದು ಪ್ರತಿಯನ್ನು ಆಯಾ ಜಿಲ್ಲೆಯ ವಾರ್ತಾಧಿಕಾರಿಗಳ ಕಚೇರಿಗೆ ಸಲ್ಲಿಸಬೇಕು. ಸ್ವೀಕೃತ ಅರ್ಜಿಗಳನ್ನು ಆಯ್ಕೆ ಸಮಿತಿಯ ಸಭೆಯಲ್ಲಿ ಪರಿಶೀಲಿಸಿ ಬಸ್ ಪಾಸ್ ಮಂಜೂರು ಮಾಡಲಾಗುತ್ತದೆ. ರಾಜ್ಯದ ಎಲ್ಲ ತಾಲ್ಲೂಕುಗಳ ಅರ್ಹ ಪತ್ರಕರ್ತರು ಕೂಡಲೇ "ಸೇವಾಸಿಂಧು" ಪೋರ್ಟಲ್ ಮೂಲಕ ಅರ್ಜಿಗಳನ್ನು ಸಲ್ಲಿಸುವುದರ ಮೂಲಕ ಈ ಸದುಪಯೋಗ ಪಡೆದುಕೊಳ್ಳಬಹುದು ಎಂದು ಹೇಮಂತ್ ನಿಂಬಾಳ್ಕರ್ ಅವರು ಪ್ರಕಟಣೆಯಲ್ಲಿ ತಿಳಿಸಿದ್ದಾರೆ.

# ಇಂದು ರಾಷ್ಟ್ರಮಟ್ಟದ ರಾಷ್ಟ್ರಮಟ್ಟದ ವಿಚಾರ ಸಂಕೀರಣ

**ರಬಕವಿ-ಬನಹಟ್ಟಿ;** ಇದೇ 15 ರಂದು ಬೆಳಗ್ಗೆ 10 ಕ್ಕೆ ಇಲ್ಲಿನ ಜನತಾ ಶಿಕ್ಷಣ ಸಂಘದ ತಮ್ಮಣ್ಣಪ್ಪ ಚಿಕ್ಕೋಡಿ ಕಾಲೇಜಿನಲ್ಲಿ ವಿವಿಧ ವಿಷಯಗಳ ಕುರಿತು ರಾಷ್ಟ ಮಟ್ಟದ ಒಂದು ದಿನದ ವಿಚಾರ ಸಂಕೀರಣ ಕಾರ್ಯಕ್ರಮವನ್ನು ಹಮ್ಮಿಕೊಳ್ಳಲಾಗಿದೆ ಎಂದ ಪ್ರಾಚಾರ್ಯ ಜಿ.ಆರ್.ಜುನ್ನಾಯ್ಕರ್ ತಿಳಿಸಿದರು.

ಅವರು ಮಂಗಳವಾರ ಕಾಲೇಜಿನಲ್ಲಿ ವಿಚಾರ ಸಂಕೀರಣದ ಪ್ರಚಾರ ಪರಿಕರಗಳನ್ನು ಲೋಕಾರ್ಪಣೆ ಮಾಡಿ ಮಾತನಾಡಿದರು. ಇತಿಹಾಸ ವಿಭಾಗದ ಮುಖ್ಯಸ್ಥ ಮಂಜುನಾಥ ಬೆನ್ನೂರ ಮಾತನಾಡಿ, ಧಾರವಾಡದ ಕಾಲೇಜು ಶಿಕ್ಷಣ ಇಲಾಖೆಯ ಪ್ರಾದೇಶಿ ಕಚೇರಿಯ ಜಂಟಿ ನಿರ್ದೇಶಕಿ ಕರಿಮುನ್ನೆಸಾ ಸೈಯ್ಯದ ಕಾರ್ಯಕ್ರಮವನ್ನು ಉದ್ಘಾಟಿಸಲಿದ್ದಾರೆ. ಸೊಲ್ಲಾಪುರ ವಿವಿಯ ಇತಿಹಾಸ ವಿಭಾಗದ ಪ್ರಭಾಕರ ಕೋಳೆಕರ್ ಮುಖ್ಯ ಭಾಷಣಕಾರರಾಗಿದ್ದಾರೆ. ಜನತಾ ಶಿಕ್ಷಣ ಸಂಘದ ಅಧ್ಯಕ್ಷ ಎಸ್.ಎಂ. ಭದ್ರನವರ ಅಧ್ಯಕ್ಷತೆಯನ್ನು ವಹಿಸಲಿದ್ದಾರೆ. ಆಡಳಿತ ಮಂಡಳಿಯ ಉಪಾಧ್ಯಕ್ಷ ಬಸವಂತ ಭದ್ರನವರ, ಕಾರ್ಯಾಧ್ಯಕ್ಷ ಬಸವರಾಜ ಜಾಡಗೌಡ, ಗೌರವ ಕಾರ್ಯದರ್ಶಿ ರಾಜಶೇಖರ ಸೋರಗಾವಿ ಕಾರ್ಯಕ್ರಮದಲ್ಲಿ ಭಾಗವಹಿಸಲಿದ್ದಾರೆ.



ಕಾರ್ಯಕ್ರಮದಲ್ಲಿ ವಿಜಯಪುರದ ಸಿ.ಎನ್.ಕೋಳಿಗುಡ್ಡ, ಜಮಖಂಡಿ ಸುನಂದಾ ಎಸ್. ಶಿರೂರ, ಅಥಣಿಯ ಬಿ.ಎಸ್.ಕಾಂಬಳೆ, ಹುನ್ನೂರಿನ ಶಂಕರ ಅರಬಳ್ಳಿ, ಭೂಗೋಳ ಶಾಸ್ತ್ರ ವಿಭಾಗದ ಹುಲಕೋಟಿಯ ಮೃತ್ಯುಂಜಯ ತೆಲಗಡೆ, ಬಾಗಲಕೋಟೆಯ ಬಸವರಾಜ ಬೀಳಗಿ, ಹಾರೂಗೇರಿಯ ವಿನೋದ ಕಾಂಬಳೆ, ಕಾಗವಾಡದ ಆರ್.ಎಸ್.ನಾಗರೆಡ್ಡಿ, ಅರುಣ ಕಲ್ಲೋಳಕರ್, ಎಸ್.ಅರ್.ನಾಗನ್ನವರ ವಿ.ಎನ್ ಅಸ್ಕಿ ಸೇರಿದಂತೆ ವಿವಿಧ ಕಾಲೇಜುಗಳ ಉಪನ್ಯಾಸಕರು ಭಾಗವಹಿಸಲಿದ್ದಾರೆ. ವಿವಿಧ ಕಾಲೇಜುಗಳ 135ಕ್ಕೂ ಹೆಚ್ಚು ಉಪನ್ಯಾಸಕರು ಪ್ರಬಂಧಗಳನ್ನು ಮಂಡಿಸಲಿದ್ದಾರೆ ಎಂದು ಬೆನ್ನೂರ ತಿಳಿಸಿದರು.

ಮನೋಹರ ಶಿರಹಟ್ಟಿ, ರೇಶ್ಮಾ ಗಜಾಕೋಶ, ಪ್ರಕಾಶ ಕೆಂಗನಾಳ, ಎಸ್.ಬಿ.ಉಕ್ಕಲಿ, ಮಹಾವೀರ ಸಂಕಾರ, ಶಿವು ಇಟ್ನಾಳ, ಐ.ಜಿ.ಫಣಿಬಂದ್ ಸೇರಿದಂತೆ ಅನೇಕರು ಇದ್ದರು.

# ಜ್ಞಾನ ಭಾವಗಳ ಸಂಗಮವೇ ಗಮಕ ಕಲೆ

**ಬೆಳಗಾವಿ:** ಸಾಹಿತ್ಯ, ಸಂಗೀತ, ಕಲೆಯ ಶ್ರೀಮಂತಿಕೆಯ ಪರಂಪರೆಯನ್ನು ಸಹೃದಯರಿಗೆ ತಲುಪಿಸುವ ಸುಂದರ ಕಲಾರೂಪವಾದ ಗಮಕ ಕಲೆಯು ಜ್ಞಾನ ಭಾವಗಳ ಸಂಗಮವಾಗಿದೆ ಎಂದು ರಾಣಿ ಚನ್ನಮ್ಮ ವಿಶ್ವವಿದ್ಯಾಲಯದ ಕುಲಪತಿ ಪ್ರೊ ಸಿ. ಎಂ. ತ್ಯಾಗರಾಜ ಅವರು ಅಭಿಪ್ರಾಯಪಟ್ಟರು.

ರಾಣಿ ಚನ್ನಮ್ಮ ವಿಶ್ವವಿದ್ಯಾಲಯದ ಶಾಸ್ತ್ರೀಯ ಕನ್ನಡ ಭಾಷಾ ಅಧ್ಯಯನ ಸಂಸ್ಥೆಯು ಪಿ. ಎಮ್. ಉಷಾ ಮೇರು ಯೋಜನೆಯ ಅಡಿಯಲ್ಲಿ ಕುಮಾರವ್ಯಾಸ ಕಾವ್ಯದ ಊರ್ವಶಿ ಶಾಪ ಪ್ರಸಂಗ ಕಾವ್ಯ ಭಾಗದ ಮೇಲೆ ಹಮ್ಮಿಕೊಂಡಿದ್ದ ಗಮಕ ಕಾವ್ಯ ವ್ಯಾಖ್ಯಾನ ಕಾರ್ಯಕ್ರಮವನ್ನು ಉದ್ಘಾಟಿಸಿ ಮಾತನಾಡಿದರು.

ಕುಮಾರವ್ಯಾಸ ಭಾರತ ಕನ್ನಡದ ಶಾಸ್ತ್ರೀಯ ಕೃತಿಗಳಲ್ಲಿ ಒಂದು. ಕಾವ್ಯದಲ್ಲಿ ಭಕ್ತಿ, ನೀತಿ, ಧರ್ಮ ಮತ್ತು ತತ್ವಶಾಸ್ತ್ರದಂಥ ಉದಾತ್ತ ಚಿಂತನೆಗಳಿವೆ. ಜನಸಾಮಾನ್ಯರ ಬಗ್ಗೆ ಮಿಡಿಯುವ ಈ ಕಾವ್ಯ ಕನ್ನಡದ ಅಮರ ಕಾವ್ಯವಾಗಿದೆ. ಕನ್ನಡದ ಶ್ರೀಮಂತ ಸಂಸ್ಕೃತಿಯ ಹೂರಣವನ್ನು ಕುಮಾರವ್ಯಾಸ ಭಾರತ ಒಳಗೊಂಡಿದೆ. ಆ ಕಾವ್ಯದ ಅನುಸಂಧಾನ ನಮ್ಮ ಭವ್ಯ ಪರಂಪರೆಯ ಮುಖಾಮುಖಿಯಾದಂತೆ. ವಿದ್ಯಾರ್ಥಿಗಳು ಇಂತಹ ಮಹೋನ್ನತ ಕಾವ್ಯವನ್ನು ಓದಿದಾಗಲೇ ಅವರ ಬೌದ್ಧಿಕ ಚಿಂತನೆಗಳು ಪ್ರಬುದ್ಧತೆಯನ್ನು ಪಡೆಯಲಿವೆ, ಅವರು ಓದಿನ ಹರವು ವಿಸ್ತಾರವಾಗಲಿವೆ. ಶಬ್ದ ಭಂಡಾರವನ್ನು ಒಳಗೊಂಡ ಈ ಕೃತಿಯ ಸಾಹಿತ್ಯ ಮತ್ತು ಸಾಂಸ್ಕೃತಿಕ ಸೌರಭವನ್ನು ವಿದ್ಯಾರ್ಥಿಗಳು ರಸಗ್ರಹಣ ಮಾಡಬೇಕು.



ಕುಮಾರವ್ಯಾಸ ಭಾರತದ ಉರ್ವಶಿಯ ಶಾಪ ಪ್ರಸಂಗವನ್ನು ವಿದುಷಿ ಡಾ ಶ್ಯಾಮಲಾ ಪ್ರಕಾಶ ಅವರು ಸುಮಧುರ ಕಂಠದಲ್ಲಿ ಹಾಡಿದರು. ಖ್ಯಾತ ಗಮಕಿಗಳಾದ ಸಂತೋಷ ಭಾರದ್ವಾಜ ಅವರು ವ್ಯಾಖ್ಯಾನ ಮಾಡಿ ಸಂದರ್ಭಗಳನ್ನು ಸ್ವಾರಸ್ಯಕರವಾಗಿ ವಿವರಿಸಿದರು.

ಕಾರ್ಯಕ್ರಮದ ಸಂಯೋಜಕಿ ಡಾ ಶೋಭಾ ನಾಯಕ ಪ್ರಾಸ್ತಾವಿಕ ನುಡಿಗಳನ್ನಾಡಿದರು. ಪಿ. ಎಂ. ಉಷಾ ಮೇರು ನೋಡಲ್ ಅಧಿಕಾರಿ ಡಾ. ನಂದಿನಿ ದೇವರಮನಿ ಸ್ವಾಗತಿಸಿದರು. ಪ್ರೊ. ಎಸ್. ಎಂ. ಗಂಗಾಧರಯ್ಯ, ಡಾ. ಮಹೇಶ ಗಾಜಪ್ಪನವರ, ಡಾ ಗಜಾನನ ನಾಯ್ಕ, ಡಾ. ಸಂಜೀವಣ್ಣನವರ, ಇಂಗ್ಲಿಷ್ ವಿಭಾಗದ ಪ್ರಾಧ್ಯಾಪಕರು ಉಪಸ್ಥಿತರಿದ್ದರು.

# ಡಿಸಿಸಿ ಬ್ಯಾಕ್ ಅಧ್ಯಕ್ಷ ಸ್ಥಾನದ ಆಕಾಂಕ್ಷಿ ನಾನಲ್ಲ



**ಅಥಣಿ:** ನಾನು ಸಹಕಾರ ರಂಗದ ಚುನಾವಣೆಯಲ್ಲಿ ಇದೇ ಮೊದಲ ಬಾರಿಗೆ ಸ್ಪರ್ಧಿಸಿದ್ದೇನೆ, ನಾನು ಯಾವ ಬಣಕ್ಕೂ ಅಂಟಿಕೊಂಡಿಲ್ಲ, ಬೆಳಗಾವಿ ಮಧ್ಯವರ್ತಿ ಬ್ಯಾಂಕಿಗೆ ನಾಮಪತ್ರಸಲ್ಲಿಸಿ ಅವರೋಧವಾಗಿ ಆಯ್ಕೆಗೊಂಡಿರುವುದಾಗಿ ಕಾಗವಾಡ ಶಾಸಕ ರಾಜು ಕಾಗೆ ಹೇಳಿದರು.

ಅವರು ಕಾಗವಾಡ ತಾಲ್ಲೂಕಿನ ಉಗಾರ ಖುರ್ದ ಪಟ್ಟಣದಲ್ಲಿ ಮಂಗಳವಾರ ಕಾಗವಾಡ ತಾಲೂಕಾ ಮುಸ್ಲಿಂ ಸಮಾಜದ ಮುಖಂಡರು ಹಾಗೂ ಪಾರ್ಥನಳ್ಳಿ ಪಿಕೆಪಿಎಸ್ ಅಧ್ಯಕ್ಷ ರಫೀಕ ಪಟೇಲ ಹಾಗೂ ಸದಸ್ಯರಿಂದ ಸನ್ಮಾನ ಸ್ವೀಕರಿಸಿ ಮಾಧ್ಯಮದೊಂದಿಗೆ ಮಾತನಾಡಿದರು, ನನ್ನ ಹಿರಿತನದ ಆಧಾರದ ಮೇಲೆ ಜಿಲ್ಲಾ ಉಸ್ತುವಾರಿ ಸಚಿವ ಸತೀಶ ಜಾರಕಿಹೊಳಿ ಅವರು ನನ್ನ ವಿರುದ್ಧ ಸ್ಪರ್ಧೆ ಮಾಡಿದ್ದ ಮಾಜಿ ಸಚಿವ ಶ್ರೀಮಂತ ಪಾಟೀಲ ಪುತ್ರ ಶ್ರೀನಿವಾಸ ಪಾಟೀಲ ಅವರ ಮನವೊಲಿಸಿ ನಾಮಪತ್ರ ಹಿಂಪಡಿಸಿ ನನ್ನನ್ನ ಅವಿರೋಧವಾಗಿ ಆಯ್ಕೆ ಮಾಡಿದ್ದಾರೆ.

ಅವರ ಸಹಾಯ ಸಹಕಾರದಿಂದ ನಾನು ಡಿಸಿಸಿ ಬ್ಯಾಂಕ್ ಸದಸ್ಯನಾಗಿ ಆಯ್ಕೆಯಾಗಿದ್ದು, ಜಿಲ್ಲಾ ಉಸ್ತುವರಿ ಸಚಿವ ಸತೀಶ್ ಜಾರಕಿಹೊಳಿ ಅವರಿಗೆ, ಕಾಗವಾಡ ತಾಲೂಕಿನೆಲ್ಲಾ ಸೊಸೈಟಿ ಅಧ್ಯಕ್ಷರು, ಸದಸ್ಯರಿಗೂ ಹಾಗೂ ಕಾಗವಾಡ ಮತಕ್ಷೇತ್ರದ ಜನತೆಗೆ ಕೃತಜ್ಞತೆಗಳನ್ನಸಲ್ಲಿಸುತ್ತೇನೆ ಎಂದು ಕಾಗವಾಡ ಶಾಸಕ ರಾಜು ಕಾಗೆ ಅವರು ಹೇಳಿದರು. ನಮ್ಮಲ್ಲಿ ಯಾವ ಬಣ ಇಲ್ಲ.ನಾನು ಎತ್ತಿಕೊಂಡವರ ಕೂಸು.ಜನತೆಯ ಒತ್ತಾಯದ ಮೇರೆಗೆ ಬೆಳಗಾವಿ ಜಿಲ್ಲಾ ಮಧ್ಯವರ್ತಿ ಬ್ಯಾಂಕಿನ ಚುನಾವಣೆಗೆ ನಾಮಪತ್ರ ಸಲ್ಲಿಸಿದ್ದೆ. ನನ್ನನ್ನು ಅವಿರೋಧವಾಗಿ ಆಯ್ಕೆಗೊಳಿಸಿರುವುದು ಸಂತಸ ತಂದಿದೆ ಎಂದರು.

ಈ ವೇಳೆ ಕಾಗವಾಡ ತಾಲೂಕಾ ಮುಸ್ಲಿಂ ಸಮಾಜದ ಮುಖಂಡರು ಹಾಗೂ ಪಾರ್ಥನಳ್ಳಿ ಸಾಹಾರಾ ಪಿಕೆಪಿಎಸ್ ಅಧ್ಯಕ್ಷ ರಫೀಕ ಪಟೇಲ. ಗ್ರಾಮ ಪಂಚಾಯತ್ ಅಧ್ಯಕ್ಷ ಶರೀಫ ಮುಲ್ಲಾ,ಮುಖಂಡರಾದ ಶಂಕರ ವಾಘಮೊಡೆ, ಸೌರವ ಪಾಟೀಲ. ಜ್ಯೋತಿಕುಮಾರ ಪಾಟೀಲ, ಬಸನಗೌಡ ಪಾಟೀಲ.ಕಾಮಗೌಡ ಪಾಟೀಲ, ಇಬ್ರಾಹಿಂ ಮೋಳೆ, ಕಾಡಪ್ಪ ಸಿಂಗಾಡೆ,ಸದಾಶಿವ ಬಿರಾದಾರ, ಇಸ್ಮಾಯಿಲ್ ಪಟೇಲ,ಅಮೀರ ಪಟೇಲ,ಬಂಡು ನಾಯಿಕ, ರಮೇಶ ಕಾಂಬಳೆ, ರಫೀಕ ಪಟೇಲ,ಸಿದ್ದು ಅವಳೇಕರ ಮತ್ತಿತರರು ಇದ್ದರು.



**ಹಾವೇರಿ: ವಿಧಾನ ಪರಿಷತ್ ಶಾಸಕರ 2024-2025 ಸಾಲಿನ ಪ್ರದೇಶಾಅಭಿವೃದ್ಧಿ ಯೋಜನೆ ಅಡಿ ವಿಕಲಚೇತನರಿಗೆ ತ್ರಿಚಕ್ರ ವಾಹನವನ್ನು ವಿಧಾನ ಪರಿಷತ್ ಸದಸ್ಯರಾದ ಎಸ್.ವಿ.ಸಂಕನೂರ ಅವರು ಹಾವೇರಿ ನಗರದ ಪ್ರವಾಸಿ ಮಂದಿರದ ಆವರಣದಲ್ಲಿ ವಿಕಲಚೇತನ ಅಭ್ಯರ್ಥಿಗಳಿಗೆ ಹಸ್ತಾಂತರಿಸಿದರು.**

## ಶಾಸಕ ಸಿ.ಎಸ್.ನಾಡಗೌಡರಿಂದ ಕಾಟಾಚಾರಕ್ಕೆ ಜಂಟಿ ಸಮಿಕ್ಷೆ: ಮಾಜಿ ಶಾಸಕ ನಡಹಳ್ಳಿ ಆಕ್ರೋಶ

# ಹಸಿ ಬರದಿಂದ ಸಂಪೂರ್ಣ ಬೆಳೆ ನಾಶ: ನಡಹಳ್ಳಿ

**ತಾಳಿಕೋಟೆ:** ಸತತ ಮಳೆಯಿಂದ ರೈತರು ಜಮೀನುಗಳಲ್ಲಿ ಬಿತ್ತನೆ ಮಾಡಿದ್ದ ತೊಗರಿ, ಹತ್ತಿ, ಒಳಗೊಂಡು ಇನ್ನಿತರ ಎಲ್ಲ ಬೆಳೆಗಳು ನೀರಿನಲ್ಲಿ ನಾಶವಾಗಿ ಹೋಗಿದ್ದರೂ ಕೂಡಾ ಶಾಸಕ ಸಿ.ಎಸ್.ನಾಡಗೌಡ(ಅಪ್ಪಾಜಿ) ಅವರು ಜಂಟಿ ಸಮಿಕ್ಷೆಯ ನೆಪದ ಮೇಲೆ ರೈತರ ಮೂಗಿಗೆ ತುಪ್ಪ ಸವರುವ ಕೆಲಸಕ್ಕೆ ಇಳಿದಿದ್ದಾರೆಂದು ಬಿಜೆಪಿ ರೈತಮೂರ್ಚಾ ರಾಜ್ಯಾಧ್ಯಕ್ಷ ಮಾಜಿ ಶಾಸಕ ಎ.ಎಸ್.ಪಾಟೀಲ(ನಡಹಳ್ಳಿ) ಅವರು ಆರೋಪಿಸಿದರು.

ತಾಲೂಕಿನ ಮೂಕೀಹಾಳ, ಬಾವೂರ, ಕೊಣ್ಣೂರ ಮತ್ತು ತಮ್ಮದಡ್ಡಿ ಗ್ರಾಮದ ಜಮೀನುಗಳಿಗೆ ಬೆಟ್ಟಿ ನೀಡಿ ಬೆಳೆಗಳನ್ನು ವಿಕ್ಷೀಸಿ ನಂತರ ತಮದಡ್ಡಿ ಗ್ರಾಮದಲ್ಲಿ ರೈತರ ಸಭೆಯನ್ನು ಉದ್ದೇಶಿಸಿ ಮಾತನಾಡುತ್ತಿದ್ದ ಅವರು ಮುದ್ದೇಬಿಹಾಳ ತಾಲೂಕಿನಲ್ಲಿ ರೈತರ ಕಷ್ಟಗಳನ್ನು ಕೇಳಲಿಕ್ಕೆ ಸ್ಥಳೀಯ ಶಾಸಕರು ಹೋಗದಿರುವದು ದುರದೃಷ್ಠಕರವಾಗಿದೆ ನಾನು ರೈತರ ವಿಷಯದಲ್ಲಿ ರಾಜಕಾರಣ ಮಾಡಲು ಎಂದೂ ಹೋಗುವದಿಲ್ಲಾ ಸತತ ಮಳೆಯಿಂದ ಸಂಪೂರ್ಣ ಬೆಳೆ ಹಾನಿಯಾಗಿದ್ದು ಕಣ್ಣಿಗೆ ಕಾಣುತ್ತಿದ್ದರೂ ಕೂಡಾ ಶಾಸಕ ನಾಡಗೌಡರು ಅಧಿಕಾರಿಗಳಿಂದ ಜಂಟಿ ಸಮಿಕ್ಷೆ ನಡೆಯುತ್ತಿದೆ ವರಧಿ ಬಂದ ಬಳಿಕ ಸರ್ಕಾರದ ನಿಯಮದ ಪ್ರಕಾರ ಪರಿಹಾರ ರೈತರಿಗೆ ಸಿಗುತ್ತದೆ ಎಂದು ಹೇಳುತ್ತಾ ಸಾಗಿದ್ದಾರೆ ಯಾವ ಅಧಿಕಾರಿಗಳಿಗೂ ರೈತರ ಎಲ್ಲ ಜಮೀನುಗಳಿಗೆ ಬೆಟ್ಟಿ ನೀಡಿ ಸಮಿಕ್ಷೆ ಮಾಡಲು ಆಗುವದಿಲ್ಲಾ ಇದು ಶಾಸಕರ ಗಮನದಲ್ಲಿ ಮೊದಲು ಇರಬೇಕು ಅಧಿಕಾರಿಗಳು ಯಾವ ರೀತಿ ಸಮಿಕ್ಷೆ ಮಾಡಿದ್ದಾರೆಂದರೆ ಪಂಚಾಯ್ತಿ ವ್ಯಾಪ್ತಿಯ ಒಂದೆರಡು ರೈತರ ಜಮೀನುಗಳಿಗೆ ಬೆಟ್ಟಿ ನೀಡಿ ಜಿಪಿಎಸ್ ಮಾದರಿ ಮಾಡಿ ಆಯ್ದ ರೈತರ ಜಮೀನುಗಳಲ್ಲಿ 1 ಗುಂಟೆ, 2 ಗುಂಟೆ ಬೆಳೆ ನಾಶವಾಗಿದೆ ಎಂದು ಲಿಸ್ಟಗಳನ್ನು ತಯಾರಿಸಿ ಆಯಾ ಗ್ರಾಂಪಂ ಕಚೇರಿಯ ಮುಂದೆ ಹಚ್ಚುತ್ತಾ ಸಾಗಿದ್ದಾರೆ ಯಾಕೆಂದರೆ ರೈತರ ಎಲ್ಲ ಜಮೀನುಗಳಿಗೆ ಬೆಟ್ಟಿ ನೀಡಲು ಕಂದಾಯ ಅಧಿಕಾರಿಗಳಿಗೆ ಮತ್ತು ಕೃಷಿ ಅಧಿಕಾರಿಗಳಿಗೆ ಆಗುತ್ತಿಲ್ಲಾ ಇಡೀ ಬೆಳೆಯನ್ನು ವಿಕ್ಷೀಸಲು ಜಮೀನುಗಳಿಗೆ ಹೋದರೆ ಅಧಿಕಾರಿಗಳಿಗೆ ಜಮೀನುಗಳಲ್ಲಿ ತುರುಗಾಡಲು ಬರದ ರೀತಿಯಲ್ಲಿ ಹಸಿ ಬರ ಬಿದ್ದಿದೆ ಜಮೀನಿನಲ್ಲಿ ಕಾಲಿಟ್ಟರೆ ಕಾಲುಗಳೇ ಸಿಲುಕಿಕೊಳ್ಳುತ್ತಿವೆ ಆ ರೀತಿಯಾದ ಹಸಿ ಬರ ಇನ್ನೂ ಇದೆ ಹೀಗಿರುವಾಗ ಜಂಟಿ ಸಮಿಕ್ಷೆ ಮಾಡಲು ಹೇಗೆ ಸಾದ್ಯ ತೊಗರಿ ಹತ್ತಿ ಬೆಳೆಗಳು ನೀರಿನಲ್ಲಿ ಕೆಂಪರೋಗದಿಂದ ಒಣಗುತ್ತಿವೆ ಇನ್ನೂ ಜಮೀನುಗಳಲ್ಲಿ ಹಸಿಯೂ ಕೂಡಾ ಹಾಗೆ ಇದೆ ತೊಗರಿ ಗಿಡಗಳು ಹತ್ತಿ ಗಿಡಗಳು ಹೂವು ಬಿಡುತ್ತಿಲ್ಲಾ ಹತ್ತಿ ಗಿಡಗಳಲ್ಲಿಯ ಕಾಯಿಗಳು ಒಡೆಯುತ್ತಿಲ್ಲಾ ಹತ್ತಿಗಿಡಗಳು ತಾಮ್ರರೋಗಕ್ಕೆ ತುತ್ತಾಗಿ ಒಣಗುತ್ತಾ ಸಾಗಿದ್ದರೂ ಶಾಸಕ ನಾಡಗೌಡರು ಇನ್ನೂ ದೀಪಾವಳಿ ವರೆಗೂ ಮಳೆ ಇದೆ ಸಮಿಕ್ಷೆ ನಡೆಯುತ್ತಿದೆ ಅಲ್ಲಿಯವರೆಗೂ ನೋಡಿ ಸರ್ಕಾರಕ್ಕೆ ವರದಿ ಸಲ್ಲಿಸುತ್ತೇವೆ ಎಂದು ಹೇಳುತ್ತಿರುವದು ಹಾಸ್ಯಾಸ್ಪದವಾಗಿದೆ ಎಂದು ಟೀಕಿಸಿದರು.



ನಾನು ಈಗಾಗಲೇ ಮತಕ್ಷೇತ್ರದ ಪ್ರತಿ ಹಳ್ಳಿಗಳಲ್ಲಿಯ ರೈತರ ಜಮೀನುಗಳಿಗೆ ಬೆಟ್ಟಿ ನೀಡುತ್ತಾ ಸಾಗಿದ್ದೇನೆ ಎಲ್ಲಿ ನೋಡಿದರೂ ಹಸಿ ಬರದಿಂದ ಬೆಳೆ ನಾಶವಾಗಿರುವದು ಕಣ್ಣಿಗೆ ಕಾಣುತ್ತಿದೆ ಮುಖ್ಯಮಂತ್ರಿ ಸಿದ್ದರಾಮಯ್ಯನವರು ಜಿಲ್ಲಾ ಉಸ್ತುವಾರಿ ಸಚೀವ ಎಂ.ಬಿ.ಪಾಟೀಲರು ವೈಮಾನಿಕ ಸಮಿಕ್ಷೆ ಮಾಡಿದ್ದಾರೆ ಕೆಳಗಡೆ ಇರುವ ಹಸಿ ಬರ ಅವರಿಗೆ ಕಾಣಲು ಹೇಗೆ ಸಾದ್ಯವೆಂದು ಪ್ರಶ್ನೀಸಿದ ಅವರು ಜಿಲ್ಲಾ ಉಸ್ತುವಾರಿ ಮಂತ್ರಿಗಳು ಜಿಲ್ಲೆಯವರೇ ಇದ್ದಾರೆ ರೈತರ ಸಂಕಷ್ಟದ ಬಗ್ಗೆ ಅರೀತುಕೊಂಡು ಸಂಪೂರ್ಣ ಬೆಳೆ ನಾಶವಾಗಿದ್ದರ ಬಗ್ಗೆ ಘೋಷಿಸಬೇಕು ಇದರಿಂದ ರೈತರ ಬಧುಕಿಗೆ ಅರ್ಥ ಸಿಕ್ಕಂತಾಗುತ್ತದೆ ಎಂದ ಅವರು ರೈತರು ಈಗಾಗಲೇ ಕೆಲವೆಡೆ ತೊಗರೆ ಬೆಳೆಯನ್ನು ಹರಗಿ ಸ್ವಚ್ಚಗೊಳಿಸುತ್ತಿದ್ದಾರೆ ಇದ್ದನ್ನಾದರೂ ನೋಡಿ ಶಾಸಕ ನಾಡಗೌಡರು ನೋಡಿ ಸರ್ಕಾರಕ್ಕೆ ಸ್ಪಷ್ಟವಾದ ಸಂಪೂರ್ಣ ಬೆಳೆ ನಾಶದ ಬಗ್ಗೆ ವರಧಿ ಕಳುಹಿಸುವಂತಹ ಕೆಲಸ ಅಧಿಕಾರಿಗಳಿಂದ ಮಾಡಿಸಬೇಕು ಮತಕ್ಷೇತ್ರದ ಯಾವುದೋ ಒಂದು ಹೊಲದಲ್ಲಿ ನಿಂತು ಪೋಜುಕೊಟ್ಟು ಹೋಗುವ ಕಾರ್ಯವನ್ನು ಶಾಸಕರು ಬಿಡಬೇಕೆಂದ ಅವರು ನಾನು ಶಾಸಕನಾಗಿದ್ದ ಅವಧಿಯಲ್ಲಿ ಡೋಣಿ ನಧಿಗೆ ಹೊಂದಿಕೊಂಡಿರುವ ಎಲ್ಲ ರೈತರಿಗೆ ಪ್ರವಾಹದ ಸಮಯದಲ್ಲಿ ಸರ್ಕಾರದಿಂದ ಪರಿಹಾರವನ್ನು ಕೊಡಿಸಿದ್ದೇನೆ ನಾನು ಈ ರೈತರ ವಿಷಯದಲ್ಲಿ ರಾಜಕಾರಣ ಮಾಡಲು ಹೋಗುವದಿಲ್ಲಾ ನಿಜವಾಗಿ ರೈತರ ಪರ ಕಾಳಜಿ ಎಂಬುದು ಇದ್ದರೆ ಜಿಲ್ಲೆಯ ಎಲ್ಲ ರೈತರಿಗೆ ಪರಿಹಾರ ಕೊಡಿಸುವ ಕೆಲಸ ಶಾಸಕರು ಮಾಡಲಿ ಎಂದರು.

ಈ ಸಮಯದಲ್ಲಿ ಮುಖಂಡರಾದ ಸೋಮನಗೌಡ ಕವಡಿಮಟ್ಟಿ, ಬಿಜೆಪಿ ರೈತಮುರ್ಚಾ ಮಂಡಲ ಅಧ್ಯಕ್ಷ ಸಂಗಣ್ಣ ಹತ್ತಿ, ಗಿರಿಶ ಪಾಟೀಲ, ಒಳಗೊಂಡು ರೈತಾಪಿ ಜನರು ಉಪಸ್ಥಿತರಿದ್ದರು.

# ಕಾಳಗಿ ಸಮುದಾಯ ಆರೋಗ್ಯ ಕೇಂದ್ರದಲ್ಲಿ ವೈದ್ಯರ ಕೊರತೆ

**ಮುದ್ದೇಬಿಹಾಳ:** ತಾಲೂಕಿನ ಕಾಳಗಿ ಸಮುದಾಯ ಆರೋಗ್ಯ ಕೇಂದ್ರದಲ್ಲಿ ವಿವಿದ ರೋಗಕ್ಕೆ ಅಗತ್ಯವಿರುವ ವೈದ್ಯರ ಕೊರತೆಯಿಂದ ಗ್ರಾಮಸ್ಥರು ಖಾಸಗಿ ಆಸ್ಪತ್ರೆಯ ಮೇಲೆ ಅವಲಂಬಿಸುವಂತ ಕಾರ್ಯ ನಡೆದಿದೆ ಎಂದು ಅಪರ ಜಿಲ್ಲಾಧಿಕಾರಿಗಳಾದ ಸೋಮಲಿಂಗ ಗೆಣ್ಣೂರ ಅವರಿಗೆ ಗ್ರಾಮಸ್ಥರು ಮನವಿ ಪತ್ರ ನೀಡಿ ದೂರಿದ್ದಾರೆ.



ಮನವಿ ಪತ್ರದಲ್ಲಿ ವಿವರಿಸಿದ ಗ್ರಾಮಸ್ಥರರು ಮುಖ್ಯವಾಗಿ ಮಹಿಳೆಯರಿಗೆ ಅಗತ್ಯವಿರುವ ಹಾಗೂ ಇರಬೇಕಾದಂತಹ ಪ್ರಸೂತಿಗೆ ಸಂಭಂದಿಸಿದಂತಹ ತಜ್ಞ ಮಹಿಳಾ ವೈದ್ಯರ ಕೊರತೆ ಇದೆ ಕಾರಣ ಸ್ತ್ರೀರೋಗ ತಜ್ಞರ ಈಗ ಅಗತ್ಯವಾಗಿದೆ ಎಂದು ಅವರು ತಿಳಿಸಿದ್ದಾರೆ

ಈ ಹಿಂದೆ ಈ ವಿಷಯ ಕುರಿತು ಸಂಭಂದಿತ ಅಧಿಕಾರಿ ವರ್ಗದ ಗಮನಕ್ಕೆ ತಂದರೂ ಯಾವದೇ ಪ್ರಯೋಜನವಾಗಿಲ್ಲ ಕೇವಲ ಅವರಿಂದ ಹಾರಿಕೆ ಉತ್ತರಗಳು ಮಾತ್ರ ದೊರೆತಿವೆ ಎಂದು ಗ್ರಾಮಸ್ಥರು ಮನವಿ ಪತ್ರದಲ್ಲಿ ತಿಳಿಸಿದ್ದಾರೆ

ಕೇವಲ ಅರವಳಿಕೆ ತಜ್ಞರು ಮಾತ್ರ ಕಾರ್ಯ ನಿರ್ವಹಿಸುತ್ತಿದ್ದು ಹೆರಿಗೆ ಸಂಭಂದಿಸಿದ ವೈದ್ಯರು ಇಲ್ಲದ್ದಕ್ಕೆ ಹೆರಿಗೆ ಪ್ರಮಾಣವೂ ಕಡಿಮೆಯಾಗುತ್ತಲಿದೆ ಬಡ ಜನತೆಗೆ ಬಹಳೇ ತೊಂದರೆಯಾಗಿ ವಿಜಯಪುರ ಖಾಸಗಿ ಆಸ್ಪತ್ರೆಗಳ ಮೇಲೆ ಅವಲಂಬಿಸುತ್ತಾ ಸಾಗಿದ್ದಾರೆ.

ಈ ಆಸ್ಪತ್ರೆಯ ಮೇಲೆ ಸಂಭಂದಿಸಿ ಕೇವಲ ಕಾಳಗಿ ಗ್ರಾಮಸ್ಥರು ಮಾತ್ರ ಅವಲಂಬಿತರಲ್ಲ ಇವರೊಂದಿಗೆ ಸುಮಾರು 30 ರಿಂದ 35 ಗ್ರಾಮಗಳ ಗ್ರಾಮಸ್ಥರರು ತಮ್ಮ ವಿವಿದ ಆರೋಗ್ಯ ತಪಾಸಣೆಗಾಗಿ ಇದೇ ಆಸ್ಪತ್ರೆಯ ಮೇಲೆ ಅವಲಂಬಿತರಾಗಿದ್ದಾರೆ. ಕಾರಣ ಕೂಡಲೇ ಹೆರಿಗೆ ಸಂಭಂದಿಸಿ ಪ್ರಸೂತಿ ಕಾರ್ಯಕ್ಕೆ ಸ್ತ್ರೀರೋಗ ತಜ್ಞವೈದ್ಯರನ್ನು ನೇಮಕ ಮಾಡಿ ಈ ಭಾಗದ ಗ್ರಾಮಸ್ಥರಿರಾಗುತ್ತಿರುವ ತೊಂದರೆಯನ್ನು ನೀಗಿಸದಿದ್ದರೆ ಕಾಳಗಿ ಗ್ರಾಮಸ್ಥರು ಹಾಗೂ ಸುತ್ತಮುತ್ತಲಿನ ಗ್ರಾಮಸ್ಥರನ್ನೊಳಗೊಂಡು ಇದೇ ದಿ. 27 ರಂದು ಆಸ್ಪತ್ರೆಗೆ ಬೀಗಮುದ್ರೆ ಜಡಿದು ಪ್ರತಿಭಟನೆಗೆ ಮುಂದಾಗಬೇಕಾಗುತ್ತದೆ ಎಂದು ಮನವಿ ಪತ್ರದಲ್ಲಿ ಗ್ರಾಮಸ್ಥರರು ಎಚ್ಚರಿಸಿದ್ದಾರೆ.

ಈ ಮನವಿ ಪತ್ರದ ಸಮಯದಲ್ಲಿ ನೀಲಪ್ಪ ಹಾದಿಮನಿ, ಸುಭಾಸ ಕಟ್ಟಿಮನಿ(ಕಾಳಗಿ), ಜಿ.ಕೆ. ಜೋಷಿ, ಪ್ರಕಾಶ ತುಪ್ಪದ, ಬಾಲಪ್ಪ ಕುಂಟೋಜಿ, ಪುಂಡಪ್ಪ ಶಿವಾಸನ, ನೀಲಪ್ಪ ಹಾದಿಮನಿ, ಶೇಖಪ್ಪ ಹಳ್ಳದ, ಕಟ್ಟಿಮನಿ, ಮಾಬುಸಾಬ ಮುಲ್ಲಾ, ಕಾಶೀಮಸಾಬ ನಾಯ್ಕೋಡಿ, ಸಿದ್ದಪ್ಪ ಹಳ್ಳದ, ಲಕ್ಷ್ಮಣ ಕಾನಗೌಡರ, ಮುತ್ತಣ್ಣಗೌಡ ಪಾಟೀಲ ಮೊದಲಾದವರು ಇದ್ದರು.

# ದೀಪಾವಳಿ ಹಬ್ಬದ ಪ್ರಯುಕ್ತ: ವಿಶೇಷ ಸಾರಿಗೆ

**ಹಾವೇರಿ:** ದೀಪಾವಳಿ ಹಬ್ಬದ ಪ್ರಯುಕ್ತ ಪ್ರಯಾಣಿಕರ ಅನುಕೂಲಕಕ್ಕಾಗಿ ವಾಯವ್ಯ ಕರ್ನಾಟಕ ರಸ್ತೆ ಸಾರಿಗೆ ಸಂಸ್ಥೆ ವ್ಯಾಪ್ತಿಯ ಹುಬ್ಬಳ್ಳಿ, ಧಾರವಾಡ, ಗದಗ, ಬೆಳಗಾವಿ, ಉತ್ತರ ಕನ್ನಡ, ಹಾವೇರಿ, ಚಿಕ್ಕೋಡಿ ಮತ್ತು ಬಾಗಲಕೋಟೆ ವಿಭಾಗಗಳಿಂದ ಸುಮಾರು 310 ಹೆಚ್ಚುವರಿ ವಿಶೇಷ ಸಾರಿಗೆಗಳನ್ನು ಕಾರ್ಯಾಚರಣೆ ಮಾಡಲಾಗುತ್ತಿದೆ. ದಿ. 20-10-2025 ಮತ್ತು ದಿ. 22-10-2025 ರಂದು ಕ್ರಮವಾಗಿ ನರಕ ಚತುರ್ಥಿ ಹಾಗೂ ದೀಪಾವಳಿ ಅಂಗವಾಗಿ ಸರ್ಕಾರಿ ರಜೆ ಹಾಗೂ ದಿ. 18-10-2025 ಹಾಗೂ 19-10-2025 ರಂದು ವಾರಾಂತ್ಯ ದಿನಗಳಾಗಿದ್ದರಿಂದ ಬೆಂಗಳೂರು ಮತ್ತು ಇತರೇ ಪ್ರಮುಖ ಸ್ಥಳಗಳಿಂದ ಹೆಚ್ಚಿನ ಪ್ರಯಾಣಿಕರು ತಮ್ಮ ಊರುಗಳಿಗೆ ತೆರಳಲು ಹೆಚ್ಚುವರಿ ಸಾರಿಗೆಗಳನ್ನು ಕಾರ್ಯಾಚರಣೆ ಮಾಡಲಾಗುವುದು. ಬೆಂಗಳೂರಿನಿಂದ ರಾಜ್ಯ/ಅಂತರರಾಜ್ಯ ವಿವಿದ ಸ್ಥಳಗಳಿಗೆ ತೆರಳಲು ದಿನಾಂಕ 17-10-2025 ರಿಂದ 19-10-2025 ರಂದು ಹೆಚ್ಚುವರಿ ವಿಶೇಷ ಸಾರಿಗೆ ಸೌಲಭ್ಯವನ್ನು ಕಲ್ಪಿಸಲಾಗಿದೆ. ಹಬ್ಬ ಮುಗಿದ ನಂತರ ದಿನಾಂಕ 22-10-2025 ಮತ್ತು ನಂತರ ದಿನಗಳಂದು ಪ್ರಮುಖ ಸ್ಥಳಗಳಿಗೆ ಜನದಟ್ಟಣೆಗೆ ಅನುಗುಣವಾಗಿ ಹೆಚ್ಚುವರಿ ಸಾರಿಗೆಗಳನ್ನು ಕಾರ್ಯಾಚರಣೆಗೊಳಿಸಲಾಗುವುದು. ಈ ಹೆಚ್ಚುವರಿ ಸಾರಿಗೆಗಳ ಸದುಪಯೋಗ ಪಡೆದುಕೊಳ್ಳುವಂತೆ ತಿಳಿಸಿದ್ದಾರೆ.

**ಪುರಸಭೆ ಕಾರ್ಯಾಲಯ, ಬೈಲಹೊಂಗಲ (ಜಿಲ್ಲೆ॥ ಬೆಳಗಾವಿ**

**ಕ್ರ:ಪುಸಬೈಕಾವಿ:ಸಾನಿ:ಟೆಂಪ್ರ2025-26 ದಿನಾಂಕ :13-10-2025**

**ಟೆಂಡರ ಪ್ರಕಟಣೆ 2ನೇ ಕರೆ**

**(ಕರ್ನಾಟಕ ಸಾರ್ವಜನಿಕ ಸಂಗ್ರಹಣೆಯಲ್ಲಿ ಪಾರದರ್ಶಕ ಅಧಿನಿಯಮ 1999ರನ್ವಯ ಪ್ರಕಟತ)**

ಬೈಲಹೊಂಗಲ ಪುರಸಭೆ ವ್ಯಾಪ್ತಿಯಲ್ಲಿ ಸ್ವಚ್ಛ ಭಾರತ ಮಿಷನ್ (ನ)-2.0 ಅನುದಾನದಡಿ ಒಟ್ಟು 2 ಕಾಮಗಾರಿಗಳಿಗೆ ಏಆ-7 ರ ಪ್ರಕಾರ ಐಟಂವಾರು ಟೆಂಡರಗಳನ್ನು ಆಹ್ವಾನಿಸಲಾಗಿದೆ. ಕನಿಷ್ಟ ರೂ.6.99 ಲಕ್ಷಗಳಿಂದ ಗರಿಷ್ಟ ರೂ.7.00 ಲಕ್ಷಗಳ ಕಾಮಗಾರಿಗಳಿದ್ದು, ಲೋಕೋಪಯೋಗಿ ಇಲಾಖೆ/ ಜಿಲ್ಲಾ ಪಂಚಾಯತ ಇಂಜಿನಿಯರಿಂಗ ವಿಭಾಗದಲ್ಲಿ ನೊಂದಾಯಿಸಲ್ಪಟ್ಟ ಅರ್ಹ ಸಿವಿಲ್ / ಪೂರೈಕೆದಾರರ ಮುಖಾ0ತರ ಟೆಂಡರನಲ್ಲಿ /ಗುತ್ತಿಗೆದಾರರಿಂದ/ ಎಜೇನ್ಸಿ ಸಂಸ್ಥೆಗಳಿಂದ https://kppp.karnataka.gov.in/#/portal/portal-home ಮುಖಾಂತರ ಟೆಂಡರನಲ್ಲಿ ಭಾಗವಹಿಸಬಹುದು. ಹೆಚ್ಚಿನ ವಿವರಗಳಿಗೆ ಈ ಕಛೇರಿಯ ತಾಂತ್ರಿಕ ಶಾಖೆಯಿಂದ ಪಡೆಯಬಹುದು.

1. ಟೆಂಡರ ಫಾರ್ಮಗಳನ್ನು ವೆಬ್‌ಸೈಟನಿಂದ ಡೌನಲೋಡ ಮಾಡಿಕೊಳ್ಳುವ ದಿನಾಂಕ: 15-10-2025 ಮುಂಜಾನೆ 11.00 ಘಂಟೆ ನಂತರ.
2. ಟೆಂಡರಗಳನ್ನು ಅಪಲೋಡ್(upload) ಮಾಡುವ ಕೊನೆಯ ದಿನಾಂಕ:27-10-2025 ಸಾಯಂಕಾಲ 17.30 ಘಂಟೆವರೆಗೆ.
3. ಟೆಂಡರಗಳ ತಾಂತ್ರಿಕ ಬಿಡ್‌ತೆರೆಯವ ದಿನಾಂಕ:30-10-2025 ಮುಂಜಾನೆ 11.00 ಘಂಟೆಗೆ ತೆರೆಯಲಾಗುವುದು.
4. ಟೆಂಡರಗಳ ಆರ್ಥಿಕ ಬಿಡ್ ತೆರೆಯವ ದಿನಾಂಕ:03-11-2025 ಮುಂಜಾನೆ 11.00 ಘಂಟೆಗೆ ತೆರೆಯಲಾಗುವುದು.

ಟೆಂಡರ ತಿದ್ದುಪಡಿ (Corrigendum) ಏನಾದರು ಇದ್ದರು ಈ-ಪೋರ್ಟಲ್‌ನಲ್ಲಿ ಮಾತ್ರ ಪ್ರಕಟಿಸಲಾಗುವುದು. ವಿವರವಾದ ಈ ಕಛೇರಿಯ ವೆಬ್‌ಸೈಟ್ http://www.bailhongalatown.mrc.gov.in/en/tendersor ಅಥವಾ https://kppp.karnataka.gov.in/#/portal/portal-home ನಲ್ಲಿ ನೋಡಬಹುದು.

ಸಹಿ/- ಮುಖ್ಯಾಧಿಕಾರಿ ಪುರಸಭೆ ಬೈಲಹೊಂಗಲ

ಸಹಿ/- ಅಧ್ಯಕ್ಷರು ಪುರಸಭೆ ಬೈಲಹೊಂಗಲ

DIPR/BGM/RO-NO-1174//2025-26

# ಗ್ಯಾರಂಟಿ ಯೋಜನೆಯ ಪ್ರಗತಿಯಲ್ಲಿ ಜಿಲ್ಲೆಯು ರಾಜ್ಯಕ್ಕೆ ಮಾದರಿ

**ಕಾರವಾರ:** ರಾಜ್ಯ ಸರ್ಕಾರದ ಪಂಚ ಗ್ಯಾರಂಟಿ ಯೋಜನೆಗಳನ್ನು ಜಿಲ್ಲೆಯ ಜನತೆಗೆ ತಲುಪಿಸುವಲ್ಲಿ ಉತ್ತರ ಕನ್ನಡ ಜಿಲ್ಲೆಯು ರಾಜ್ಯಕ್ಕೇ ಮಾದರಿಯಾಗಿದ್ದು, ಈ ಸಾಧನೆಗೆ ಗ್ಯಾರಂಟಿ ಪ್ರಾಧಿಕಾರದ ಎಲ್ಲಾ ತಾಲೂಕುಗಳು ಅಧ್ಯಕ್ಷರು, ಉಪಾಧ್ಯಕ್ಷರು, ಸದಸ್ಯರು ಹಾಗೂ ಇಲಾಖೆಯ ಅಧಿಕಾರಿಗಳು ಪರಸ್ಪರ ಸಮನ್ವಯದಿಂದ ಕಾರ್ಯನಿರ್ವಹಿಸಿರುವುದು ಪ್ರಮುಖ ಕಾರಣವಾಗಿದೆ ಎಂದು ಜಿಲ್ಲಾ ಗ್ಯಾರಂಟಿ ಯೋಜನೆಗಳ ಅನುಷ್ಠಾನ ಪ್ರಾಧಿಕಾರದ ಅಧ್ಯಕ್ಷ ಸತೀಶ್ ಪಾಂಡುರಂಗ ನಾಯ್ಕ ಹೇಳಿದರು.

ಅವರು ಮಂಗಳವಾರ ಜಿಲ್ಲಾ ಪಂಚಾಯತ್‌ನ ಕೆಸ್ವಾನ್ ಸಭಾಭವನದಲ್ಲಿ ನಡೆದ, ಗ್ಯಾರಂಟಿ ಯೋಜನೆಗಳ ಅನುಷ್ಠಾನದ ಪ್ರಗತಿ ಕುರಿತ ಸಭೆಯ ಅಧ್ಯಕ್ಷತೆ ವಹಿಸಿ ಮಾತನಾಡಿದರು.

ಜಿಲ್ಲೆಯಲ್ಲಿ ಗ್ಯಾರಂಟಿ ಯೋಜನೆಗಳನ್ನು ಅನುಷ್ಠಾನಗೊಳಿಸುವಲ್ಲಿ ಯಾವುದೇ ಗಂಭೀರ ಸಮಸ್ಯೆಗಳು ಕಂಡು ಬಂದಿಲ್ಲ, ಯಾವುದೇ ಮಧ್ಯವರ್ತಿಗಳಿಗೆ, ಭ್ರಷ್ಟಾಚಾರಕ್ಕೆ ಅವಕಾಶ ನೀಡದೇ ಜಿಲ್ಲೆಯ ಜನತೆಗೆ ಪ್ರಾಮಾಣಿಕವಾಗಿ ಯೋಜನೆಗಳ ನೆರವನ್ನು ತಲುಪಿಸುತ್ತಿದ್ದು, ಪ್ರತಿ ತಿಂಗಳು ರೂ.5000 ದಿಂದ 6000 ಗಳ ನೆರವನ್ನು ಪ್ರತಿ ಕುಟುಂಬಕ್ಕೆ ಒದಗಿಸುವ ಮೂಲಕ ಈ ಯೋಜನೆಗಳು ಬಡವರ ಜನಸಾಮಾನ್ಯರ ಪಾಲಿಗೆ ಕಲ್ಪವೃಕ್ಷವಾಗಿವೆ ಎಂದರು.

ಶಕ್ತಿ ಯೋಜನೆಯ ಮೂಲಕ ಸಾರಿಗೆ ಇಲಾಖೆಗೆ ಆರ್ಥಿಕವಾಗಿ ಚೈತನ್ಯ ನೀಡಿದ್ದರೂ ಕೂಡಾ ಬಸ್‌ಗಳು ಆಗಾಗ್ಗೆ ಮಾರ್ಗ ಮಧ್ಯೆ ಕೆಟ್ಟು ನಿಲ್ಲುವುದು ಕಂಡು ಬರುತ್ತಿದ್ದು, ಸಾರಿಗೆ ಸಂಸ್ಥೆಯ ಅಧಿಕಾರಿಗಳಿಗೆ ವಾಹನಗಳಿಗೆ ದುರಸ್ತಿ ಸಂದರ್ಭದಲ್ಲಿ ಉತ್ತಮ ಗುಣಮಟ್ಟದ ಬಿಡಿಭಾಗಗಳನ್ನು ಅಳವಡಿಸುವ ಜೊತೆಗೆ ಗ್ರಾಮೀಣ ಭಾಗದ ಸಂಚಾರದಲ್ಲಿ ಯಾವುದೇ ತೊಂದರೆಯಾಗದಂತೆ ಗಮನ ಹರಿಸಬೇಕು, ಬಸ್ ನಿಲ್ದಾಣಗಳಲ್ಲಿ ಪ್ರಯಾಣಿಕರಿಗೆ ಉತ್ತಮ ಶೌಚಾಲಯಗಳ ವ್ಯವಸ್ಥೆ ಮತ್ತು ಬಸ್ ನಿಲ್ದಾಣದಲ್ಲಿ ಅಗತ್ಯ ದುರಸ್ತಿ ಕಾರ್ಯಗಳನ್ನು ಕೈಗೊಳ್ಳುವ ಮೂಲಕ ಸಾರ್ವಜನಿಕರಿಗೆ ಎಲ್ಲಾ ಅಗತ್ಯ ಮೂಲಭೂತ ಸೌಲಭ್ಯಗಳನ್ನು ಒದಗಿಸಬೇಕು ಎಂದರು.




ಯುವನಿಧಿ ಯೋಜನೆಯ ಮೂಲಕ ಈಗಾಗಲೇ ನೆರವು ಪಡೆಯುತ್ತಿರುವವರಿಗೆ ಕಡ್ಡಾಯವಾಗಿ ಕೌಶಲ್ಯಾಭಿವೃದ್ದಿ ತರಬೇತಿ ನೀಡುವ ಜೊತೆಗೆ ತರಬೇತಿಯ ನಂತರ ಅವರಿಗೆ ಉದ್ಯೋಗ ದೊರಕಿಸಲು ಅಧಿಕಾರಿಗಳು ಕ್ರಮ ವಹಿಸಬೇಕು ಎಂದರು.

ಗೃಹಲಕ್ಷ್ಮೀ ಯೋಜನೆಯಡಿ ಈಗಾಗಲೇ ಬಿಡುಗಡೆಯಾಗಿರುವ ಜುಲೈ ಮಾಹೆಯ ಮೊತ್ತವನ್ನು 2 ದಿನಗಳ ಒಳಗೆ ಫಲಾನುಭವಿಗಳ ಖಾತೆಗೆ ಜಮೆ ಮಾಡುವಂತೆ ಸೂಚಿಸಿದ ಅವರು, ಜಿಲ್ಲೆಯಲ್ಲಿ ಗೃಹಲಕ್ಷ್ಮೀ ಯೋಜನೆಯಡಿ ಶೇ.99.96 ರಷ್ಟು ಸಾಧನೆಯಾಗಿದ್ದು, ಬಾಕಿ ಉಳಿದಿರುವ ಮಹಿಳೆಯರನ್ನು ಯೋಜನೆಯ ವ್ಯಾಪ್ತಿಗೆ ಒಳಪಡಿಸಲು ಮತ್ತು ಯೋಜನೆಯ ನೋಂದಣಿಯಲ್ಲಿ ಕಂಡು ಬರುತ್ತಿರುವ ತಾಂತ್ರಿಕ ಸಮಸ್ಯೆಗಳನ್ನು ಬಗೆಹರಿಸಲು ತಾಲೂಕುವಾರು ಅದಾಲತ್‌ಗಳನ್ನು ನಡೆಸುವ ಮೂಲಕ ಶೇ.100 ರಷ್ಟು ಗುರಿ ಸಾಧಿಸಿ, ಜಿಲ್ಲೆಯ ಅರ್ಹ ಯಾವುದೇ ಫಲಾನುಭವಿಯು ಈ ಯೋಜನೆಯಿಂದ ವಂಚಿತರಾಗದಂತೆ ಎಚ್ಚರ ವಹಿಸುವಂತೆ ತಿಳಿಸಿದರು.

ಜಿಲ್ಲೆಯಲ್ಲಿ ಪಂಚ ಗ್ಯಾರಂಟಿ ಯೋಜನೆಗಳಡಿಯಲ್ಲಿ ಇದುವರೆಗೆ, ಅನ್ನಭಾಗ್ಯ ಯೋಜನೆಯಡಿ ರೂ. 152.51 ಕೋಟಿ, ಶಕ್ತಿ ಯೋಜನೆಯಡಿ 13.72 ಕೋಟಿ ಮಹಿಳೆಯರಿಗೆ ರೂ.404.49 ಕೋಟಿ, ಗೃಹಲಕ್ಷ್ಮಿ ಯೋಜನೆಯಡಿ 32,823 ಮಹಿಳೆಯರಿಗೆ ರೂ. 1299.20 ಕೋಟಿ, ಯುವನಿಧಿ ಯೋಜನೆಯಡಿ ರೂ. 15.30 ಕೋಟಿ, ಗೃಹ ಜ್ಯೋತಿ ಯೋಜನೆಯಡಿ ರೂ.455.84 ಕೋಟಿ ನೆರವು ಒದಗಿಸಲಾಗಿದೆ ಎಂದರು.

ಸಭೆಯಲ್ಲಿ ಜಿಲ್ಲಾ ಗ್ಯಾರಂಟಿ ಯೋಜನೆಗಳ ಅನುಷ್ಠಾನ ಪ್ರಾಧಿಕಾರದ ಉಪಾಧ್ಯಕ್ಷ ಜನಾರ್ಧನ ಕುಪ್ಪ ದೇವಾಡಿಗ, ನಾಗರಾಜ್ ಎಂ ಮುರ್ಡೇಶ್ವರ, ಸದಸ್ಯರಾದ ಪಾಂಡುರಂಗ ಗೌಡ ಅಂಕೋಲಾ, ರಾಜೇಂದ್ರ ಎಚ್. ರಾಣೆ ಕಾರವಾರ, ದೇವಿದಾಸ ನಾಗೇಶ ಶಾನುಭಾಗ ಯಲ್ಲಾಪುರ, ಅಣ್ಣಪ್ಪ ಮಹಾಬಲೇಶ್ವರ ನಾಯ್ಕ ಮಂಕಿ, ರಾಜು ಮಂಜಪ್ಪ ನಾಯ್ಕ ಭಟ್ಕಳ, ಅಶೋಕ್ ಕೃಷ್ಣ ಗೌಡ ಕುಮಟಾ , ಜಿಲ್ಲಾ ಪಂಚಾಯತ್ ಮುಖ್ಯ ಲೆಕ್ಕಾಧಿಕಾರಿ ಆನಂದ್‌ಸಾ ಹಬೀಬ್, ಮಹಿಳಾ ಮತ್ತು ಮಕ್ಕಳ ಅಭಿವೃದ್ಧಿ ಇಲಾಖೆ ಉಪನಿರ್ದೇಶಕ ಕೃಷ್ಣಪ್ಪ, ಆಹಾರ ಮತ್ತು ನಾಗರೀಕ ಸರಬರಾಜು ಇಲಾಖೆ ಉಪನಿರ್ದೇಶಕ ಮಂಜುನಾಥ ರೇವಣಕರ, ಜಿಲ್ಲಾ ಉದ್ಯೋಗಾಧಿಕಾರಿ ವಿನೋದ್ ನಾಯ್ಕ್, ಕೌಶಲ್ಯಾಭಿವೃದ್ಧಿ ಇಲಾಖೆಯ ಸಹಾಯಕ ನಿರ್ದೇಶಕ ರಜತ್ ಕುಮಾರ್ ಹಬ್ಬು, ಕ.ರಾ.ರ.ಸಾರಿಗೆ ನಿಗಮ ಮತ್ತು ಹೆಸ್ಕಾಂ ಇಲಾಖೆಯ ಅಧಿಕಾರಿಗಳು ಇದ್ದರು.

BELAGINA SURYODHYA KANNADA DAILY MORNING Editor, Printer, PUblisher and Owned By GURURAJ IRAPPA KADAM Plot No.2743 NEAR KEB POWER HOUSE RAMTEERTH NAGAR, SHIVAJI NAGAR BELAGAVI-590016 DIST-BELAGAVI,STATE KARNATAKA PRINTED At M/S LAXMI PRINTERS, No. 627,Auto Nagar,Belagavi,Dist- Belagavi Karnataka, RNI No. KARKAN/2019/77640, Volume : 07, Issue : 213, Postal Reg No. PMG/KA/NK/BM/135/25-27 / POST AT Vantamury Colony Post Office